ಸಂಪುಟ: 06 ಸಂಚಿಕೆ: 134 ಪುಟಗಳು: 08 ಸೋಮವಾರ 27 ಜುಲೈ 2026 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5


**ಮುಂಜಾನೆ ಮಾತು**

ನಾನು ಸಂತೋಷ ಬಯಸುತ್ತೇನೆ ಎಂಬುದರಲ್ಲಿ ನಾನೆಂಬ ಅಹಂಕಾರವನ್ನು, ಬಯಕೆಯೆಂಬ ಆಸೆಯನ್ನು ತೊರೆದರೆ ಉಳಿಯುವುದೇ ಸಂತೋಷ!

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಹಾರಂಗಿ-ಬಸವಸಾಗರ ಜಲಾಶಯಗಳು ಭರ್ತಿ : ರೈತರ ಮೊಗದಲ್ಲಿ ಸಂತಸ



• ಉದಯವಾಹಿನಿ, ಬೆಂಗಳೂರು

ಕೊಡಗು ಜಿಲ್ಲೆಯ ಹಾರಂಗಿ ಮತ್ತು ಯಾದಗಿರಿ ಜಿಲ್ಲೆಯ ಬಸವಸಾಗರ ಜಲಾಶಯಗಳು ಭರ್ತಿಯಾಗಿದ್ದು, ಅಣೆಕಟ್ಟಿನಿಂದ ಭಾರೀ ಪ್ರಮಾಣದ ನೀರನ್ನು ಹೊರಬಿಡಲಾಗಿದೆ. ವಾಡಿಕೆಯಂತೆ ಹಾರಂಗಿ ಜಲಾಶಯದ ನಾಲ್ಕು ಕ್ರಸ್ ಟಗೇಟ್‌ಗಳಿಗೆ ಪೂಜೆ ಸಲ್ಲಿಸಿ ಕಾವೇರಿ ನದಿಗೆ 4 ಸಾವಿರ ಕ್ಯೂಸೆಕ್ ನೀರನ್ನು ಹರಿಸಲಾಗಿದೆ. ಜಲಾಶಯದ ನೀರಿನ ಪೂರ್ಣ ಮಟ್ಟ 2,859 ಅಡಿಯಾಗಿದ್ದು, ನಿನ್ನೆ ಸಂಜೆ ವೇಳೆಗೆ 2,857.48 ಅಡಿ ಭರ್ತಿಯಾಗಿದ್ದು, 4,914 ಕ್ಯೂಸೆಕ್ ಒಳಹರಿವಿದ್ದು, ಕಳೆದ ವರ್ಷ ಮೇ ತಿಂಗಳಿನಲ್ಲಿ ಜಲಾಶಯ ಭರ್ತಿಯಾಗಿತ್ತು. ಆದರೆ ಈ ಬಾರಿ ಮಳೆಯ ಕೊರತೆಯಿಂದಾಗಿ ಜುಲೈ ಅಂತ್ಯಕ್ಕೆ ಭರ್ತಿಯಾಗಿದೆ.

ನೀರನ್ನು ಹೊರಬಿಟ್ಟಿರುವುದರಿಂದ ಹಾರಂಗಿ ಜಲಾನಯನ ಪ್ರದೇಶದ ನಿವಾಸಿಗಳಿಗೆ ಎಚ್ಚರಿಕೆ ವಹಿಸುವಂತೆ ಹಾರಂಗಿ ಪುನರ್‌ವಸತಿ ವಿಭಾಗದ ಕಾರ್ಯಪಾಲಕ ಇಂಜಿನಿಯರ್ ತಿಳಿಸಿದ್ದಾರೆ. ಹಾರಂಗಿ ಮತ್ತು ಕಾವೇರಿ ನದಿಪಾತ್ರದಲ್ಲಿರುವ ನದಿಗಳ 2 ದಂಡೆಯಲ್ಲಿ ವಾಸಿಸುವ ಜನರು ಆಸ್ತಿಪಾಸ್ತಿ ಮತ್ತು ಜಾನುವಾರುಗಳ ಬಗ್ಗೆ ಎಚ್ಚರ ವಹಿಸುವಂತೆ ತಿಳಿಸಿದ್ದಾರೆ. ಇದೇ ರೀತಿ ಯಾದಗಿರಿ ಜಿಲ್ಲೆಯ ನಾರಾಯಣಪುರದ ಬಸವಸಾಗರ ಜಲಾಶಯಕ್ಕೆ ಸುಮಾರು 70 ಸಾವಿರ ಕ್ಯೂಸೆಕ್ ಒಳಹರಿವಿದ್ದು, ಶೇ.95 ರಷ್ಟು ಭರ್ತಿಯಾಗುವ ಹಂತದಲ್ಲಿದ್ದು, 14 ಕ್ರಸ್‌ಟಗೇಟ್‌ಗಳ ಮೂಲಕ 46,390 ಕ್ಯೂಸೆಕ್‌ನೀರನ್ನು ಹೊರಬಿಡಲಾಗಿದೆ. 492.25 ಮೀ. ಗರಿಷ್ಠ ಎತ್ತರವಿರುವ ಬಸವಸಾಗರ ಜಲಾಶಯದ ನೀರಿನ ಮಟ್ಟ 491.92 ಮೀ. ತಲುಪಿದೆ. ಮಹಾರಾಷ್ಟ್ರದಲ್ಲಿ ಭಾರೀ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ವಿಜಯಪುರ ಜಿಲ್ಲೆಯ ಆಲಮಟ್ಟಿ ಜಲಾಶಯಕ್ಕೂ ಕೂಡಾ ಒಳಹರಿವು ಹೆಚ್ಚಾಗಿದೆ.

## ಪಾರ್ಕಿಂಗ್ ಲಾಟ್‌ನಲ್ಲಿ ಧಗಧಗನೆ ಹೊತ್ತಿ ಉರಿದ 4 ಖಾಸಗಿ ಬಸ್‌ಗಳು

• ಉದಯವಾಹಿನಿ, ಬೆಂಗಳೂರು



ಪಾರ್ಕಿಂಗ್ ಲಾಟ್‌ನಲ್ಲಿ ನಿಲ್ಲಿಸಿದ್ದ ನಾಲ್ಕು ಖಾಸಗಿ ಬಸ್‌ಗಳಿಗೆ ಬೆಂಕಿ ಬಿದ್ದಿದ್ದು, ಸುಟ್ಟು ಕರಕಲಾಗಿವೆ. ಆನೇಕಲ್ ತಾಲ್ಲೂಕಿನ ಹಳೆ ಚಂದಾಪುರದಲ್ಲಿ ಘಟನೆ ನಡೆದಿದೆ. ಏಕಾಏಕಿ ಒಂದು ಬಸ್‌ನಲ್ಲಿ ಬೆಂಕಿ ಹೊತ್ತಿಕೊಂಡಿದೆ. ಬಳಿಕ ಅಕ್ಕಪಕ್ಕದಲ್ಲಿದ್ದ ಬಸ್‌ಗಳಿಗೂ ಬೆಂಕಿ ತಗುಲಿದೆ. ಹೀಗೆ ಧಗಧಗೆನೆ ಹೊತ್ತಿ ಉರಿದ ನಾಲ್ಕು ಬಸ್‌ಗಳು ಬೆಂಕಿಗೆ ಆಹುತಿಯಾಗಿವೆ. ಸದ್ಯ ಬಸ್‌ಗಳ ಮಾಲೀಕರ ವಿವರ ಪತ್ತೆಯಾಗಿಲ್ಲ. ಸ್ಥಳಕ್ಕೆ ಅಗ್ನಿಶಾಮಕ ತಂಡ ದೌಡಾಯಿಸಿದೆ. ಸೂರ್ಯನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಆಗಸ್ಟ್ 13ರಿಂದ ವಿಧಾನಮಂಡಲ ಅಧಿವೇಶನ

• ಉದಯವಾಹಿನಿ, ಬೆಂಗಳೂರು

ಮುಂದಿನ ತಿಂಗಳ 13 ರಿಂದ ವಿಧಾನಮಂಡಲದ ಅಧಿವೇಶನ ನಡೆಸಲಾಗುವುದೆಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬರದ ವಿಚಾರಗಳ ಕುರಿತಂತೆ ಸಂಸತ್‌ನಲ್ಲಿ ಪ್ರಸ್ತಾಪಿಸಬೇಕಿದೆ. ಈ ನಿಟ್ಟಿನಲ್ಲಿ ಸಂಸದರಿಗೆ ಮಾಹಿತಿ ನೀಡಲು ದೆಹಲಿಯಲ್ಲಿ ಸಭೆ ಕರೆಯಲಾಗಿದೆ.

ಬರ ನಿರ್ವಹಣೆ ಸೇರಿದಂತೆ ಹಲವಾರು ವಿಚಾರಗಳ ಕುರಿತು ಚರ್ಚೆ ನಡೆಸಿ, ಮಾಹಿತಿ ನೀಡಲಾಗುವುದು. ರಾಜ್ಯದಲ್ಲಿನ ಅಣೆಕಟ್ಟುಗಳಲ್ಲಿರುವ ನೀರಿನ ಸಂಗ್ರಹ ಕುರಿತು ವಾಸ್ತವಾಂಶಗಳನ್ನು ವಿವರಿಸಲಾಗುವುದು. ಕೇಂದ್ರದ ಬಾಕಿ ಯೋಜನೆಗಳ ಕುರಿತು ವಿವರಣೆ ನೀಡಿ ಸಂಸತ್‌ನಲ್ಲಿ ಧ್ವನಿ ಎತ್ತಲು ಮನವಿ ಮಾಡಲಾಗುವುದು ಎಂದರು. ಕೇಂದ್ರ ಸಚಿವರಿಗೂ ಸಭೆಯಲ್ಲಿ ಭಾಗವಹಿಸಲು ಆಹ್ವಾನ ನೀಡಲಾಗಿದೆ. ಎಚ್.ಡಿ.ಕುಮಾರಸ್ವಾಮಿ ಸೇರಿದಂತೆ ಎಲ್ಲರ ಜೊತೆ ಚರ್ಚೆ ನಡೆಸಲು ಸರ್ಕಾರ ಪ್ರಯತ್ನಿಸುತ್ತಿದೆ. ಸಂಸತ್‌ನಲ್ಲಿ ಚರ್ಚೆಗಳಾದಾಗ ಕೇಂದ್ರ ಸಚಿವರು ಮತ್ತು ಸಂಸದರು ಪಕ್ಷಾತೀತವಾಗಿ ರಾಜ್ಯದ ಪರವಾಗಿ ಧ್ವನಿ ಎತ್ತಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಬರದ ಸನ್ನಿವೇಶಗಳಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರ ನೆರವನ್ನು ನಿರೀಕ್ಷಿಸುತ್ತಿದೆ. ಇದನ್ನು ಬಲವಾಗಿ ಪ್ರತಿಪಾದಿಸಲು ಸಂಸದರೊಟ್ಟಿಗೆ ಸಮಾಲೋಚನೆ ನಡೆಸುವುದಾಗಿ ಹೇಳಿದರು.

## ಬನಶಂಕರಿ ಸಮೀಪ ಚಿರತೆ ಪ್ರತ್ಯಕ್ಷ

• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿಯಲ್ಲಿ ಹೆಚ್ಚುತ್ತಿರುವ ನಗರೀಕರಣದಿಂದಾಗಿ ಕೆಲವೊಮ್ಮೆ ಕಾಡುಪ್ರಾಣಿಗಳು ನಾಡಿಗೆ ಪ್ರವೇಶಿಸುತ್ತವೆ. ವಿಶೇಷವಾಗಿ ದಕ್ಷಿಣ ಬೆಂಗಳೂರು ಹಾಗೂ ಮಾಗಡಿ ರಸ್ತೆಯಂತಹ ಪ್ರದೇಶಗಳಲ್ಲಿ ಚಿರತೆಗಳು ಆಗಾಗ್ಗೆ ಕಾಣಿಸಿಕೊಂಡು ಆತಂಕ ಸೃಷ್ಟಿಸಿದ ನಿದರ್ಶನಗಳಿವೆ. ಇಂತಹ ಸಂದರ್ಭಗಳಲ್ಲಿ ಅರಣ್ಯ ಇಲಾಖೆಯು ಸ್ಥಳದಲ್ಲೇ ಬೋನುಗಳನ್ನು ಇರಿಸಿ ಪ್ರಾಣಿಗಳನ್ನು ಸೆರೆಹಿಡಿಯುವ ಕಾರ್ಯಾಚರಣೆ ನಡೆಸುತ್ತದೆ.

ಸದ್ಯ ಬನಶಂಕರಿ ಸಮೀಪದ ಕರಿಯಣ್ಣಪಾಳ್ಯದಲ್ಲಿ ಚಿರತೆ ಕಾಣಿಸಿಕೊಂಡಿದ್ದು, ಸ್ಥಳೀಯರಲ್ಲಿ ಆತಂಕ ಸೃಷ್ಟಿಸಿದೆ. ಅರಣ್ಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ್ದಾರೆ.

ಬ್ಯಾಡ್ರಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯ ಬಿಇಎಲ್ ಲೇಔಟ್‌ನಲ್ಲಿ ಚಿರತೆ ಕಾಣಿಸಿಕೊಂಡಿತ್ತು. ಚಿರತೆ ಓಡಾಡಿದ್ದ ದೃಶ್ಯಗಳು ಸಿಸಿಟಿವಿಯಲ್ಲಿ ಸೆರೆಯಾಗಿತ್ತು. ಇದೀಗ ಬನಶಂಕರಿ ಸಮೀಪ ಚಿರತೆ ಕಾಣಿಸಿಕೊಂಡಿರುವುದು ಸ್ಥಳೀಯರ ಆತಂಕಕ್ಕೆ ಕಾರಣವಾಗಿದೆ.

# ಇನ್ನೂ ಮುಗಿಯದ ಸಂಪುಟ ಜಾತ್ರೆ ದೆಹಲಿ ಯಾತ್ರೆ



ಕರ್ನಾಟಕ ಕಾಂಗ್ರೆಸ್ ಸಚಿವ ಸಂಪುಟ ವಿಸ್ತರಣೆಯಲ್ಲಿ 50 ವರ್ಷದ ಆಸುಪಾಸಿನ ಯುವ ನಾಯಕರಿಗೆ ಆದ್ಯತೆ ನೀಡುವ 50-20 ಸೂತ್ರವನ್ನು ಹೈಕಮಾಂಡ್ ರೂಪಿಸಿದೆ. ಮುಂದಿನ 20 ವರ್ಷ ಸಕ್ರಿಯವಾಗಿರಬಲ್ಲ ಹೊಸಬರಿಗೆ ಅವಕಾಶ ನೀಡುವಂತೆ ರಾಹುಲ್ ಗಾಂಧಿ ಸಲಹೆ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಮೊದಲ ಬಾರಿಗೆ ಆಯ್ಕೆಯಾಗಿರುವ 10ಕ್ಕೂ ಹೆಚ್ಚು ಯುವ ಶಾಸಕರು ಸಚಿವ ಸ್ಥಾನಕ್ಕಾಗಿ ಡಿ.ಕೆ. ಶಿವಕುಮಾರ್ ಹಾಗೂ ಹೈಕಮಾಂಡ್ ಭೇಟಿ ಮಾಡಿ ತೀವ್ರ ಒತ್ತಡ ಹೇರುತ್ತಿದ್ದಾರೆ.

● ದೆಹಲಿಯಲ್ಲಿ 'ನೀಟ್' ಹೋರಾಟ ಅಂತ್ಯ ● ರಾಹುಲ್ ಗಾಂಧಿ ಜೊತೆ ಚರ್ಚಿಸಿ ಸಂಪುಟ ವಿಸ್ತರಣೆಗೆ ಮುಹೂರ್ತ!? ● ಮುಂದಿನ ವಾರದೊಳಗೆ ನಿರ್ಧಾರ ಸಾಧ್ಯತೆ ● ಕಾಂಗ್ರೆಸ್ ಹೈಕಮಾಂಡ್ 50 - 20 ವರ್ಷದ ಸೂತ್ರ! ● 10 ಹೊಸ ಶಾಸಕರು ಡಿಕೆಶಿಗೆ ದುಂಬಾಲು

• ಉದಯವಾಹಿನಿ, ಬೆಂಗಳೂರು

ದೆಹಲಿಯಲ್ಲಿ ನಡೆಯುತ್ತಿದ್ದ ನೀಟ್ ಸಂಬಂಧಿತ ಪ್ರತಿಭಟನೆ ಸಚಿವರ ರಾಜೀನಾಮೆಯೊಂದಿಗೆ ಅಂತ್ಯಗೊಂಡಿರುವ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯ ಸಚಿವ ಸಂಪುಟ ವಿಸ್ತರಣೆಯ ಚರ್ಚೆ ಮತ್ತೆ ಬಿರುಸು ಪಡೆದುಕೊಂಡಿದೆ. ಪಕ್ಷದ ಉನ್ನತ ಮೂಲಗಳ ಪ್ರಕಾರ, ಕಾಂಗ್ರೆಸ್ ಹೈಕಮಾಂಡ್ ಮುಂದಿನ ಎರಡು ದಿನಗಳಲ್ಲಿ ಸಚಿವ ಸಂಪುಟ ವಿಸ್ತರಣೆಗೆ ಸಂಬಂಧಿಸಿದಂತೆ ಮಹತ್ವದ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ. ಸೋಮವಾರ ಅಥವಾ ಮಂಗಳವಾರ ದೆಹಲಿಯಲ್ಲಿ ನಡೆಯಲಿರುವ ಸಭೆಗಳ ಬಳಿಕ ಅಂತಿಮ ಚಿತ್ರಣ ಸ್ಪಷ್ಟವಾಗಬಹುದು ಎಂಬ ಮಾತುಗಳು ರಾಜಕೀಯ ವಲಯದಲ್ಲಿ ಕೇಳಿಬರುತ್ತಿವೆ. ಎಲ್ಲವೂ ಅಂದುಕೊಂಡಂತೆ ನಡೆದರೆ, ಬುಧವಾರವೇ (ಜು.29) ಸಚಿವ ಸಂಪುಟ ವಿಸ್ತರಣೆಗೆ ಮುಹೂರ್ತ ನಿಗದಿಯಾಗುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ. ಆದರೆ ಈ ಕುರಿತು ಕಾಂಗ್ರೆಸ್ ಹೈಕಮಾಂಡ್ ಅಥವಾ ರಾಜ್ಯ ಸರ್ಕಾರದಿಂದ ಯಾವುದೇ ಅಧಿಕೃತ ಘೋಷಣೆ ಹೊರಬಿದ್ದಿಲ್ಲ. ರಾಜಕೀಯ ವಲಯದಲ್ಲಿ ಹರಿದಾಡುತ್ತಿರುವ ಮಾಹಿತಿಯ ಪ್ರಕಾರ, ಮುಂದಿನ ವಾರದೊಳಗೆ ಸಚಿವ ಸಂಪುಟ ವಿಸ್ತರಣೆ ನಡೆಯುವ ಸಾಧ್ಯತೆ ಹೆಚ್ಚಿದೆ. ಸಚಿವ ಸ್ಥಾನಗಳ ಹಂಚಿಕೆ ಹಾಗೂ ಹೊಸ ಮುಖಗಳಿಗೆ ಅವಕಾಶ ನೀಡುವ ಬಗ್ಗೆ ಅಂತಿಮ ಹಂತದ ಚರ್ಚೆಗಳು ನಡೆಯುತ್ತಿವೆ ಎನ್ನಲಾಗಿದೆ.

**ಸಿಎಂ ಡಿಕೆಶಿ ಇಂದು ದೆಹಲಿ ಭೇಟಿ:** ಅತ್ತ ದೆಹಲಿಯಲ್ಲಿ ನೀಟ್ ವಿರುದ್ಧದ ಹೋರಾಟ ಅಂತ್ಯವಾಗಿದ್ದು, ಇತ್ತ ರಾಜ್ಯ ಸಚಿವ ಸಂಪುಟ ವಿಸ್ತರಣೆಗೆ ಮುಹೂರ್ತ ಕೂಡಿಬರುವ ಲಕ್ಷಣ ಕಾಣುತ್ತಿದೆ. ಸೋಮವಾರ ಸಿಎಂ ದೆಹಲಿಗೆ ತೆರಳಲಿದ್ದು, ಹೈಕಮಾಂಡ್ ಭೇಟಿ ಮಾಡಿ ಸಂಪುಟ ವಿಸ್ತರಣೆಗೆ ಗ್ರೀನ್ ಸಿಗ್ನಲ್ ಪಡೆಯುವ ಸಾಧ್ಯತೆ ಇದೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿ ರಾಜ್ಯ ನಾಯಕರು ದೆಹಲಿಗೆ ತೆರಳಲಿದ್ದಾರೆ. ಕರ್ನಾಟಕ ಪ್ರತಿನಿಧಿಸುವ ಕೇಂದ್ರ ಸಚಿವರು ಹಾಗೂ ಸಂಸದರ ಜೊತೆ ಕರ್ನಾಟಕ ಭವನದಲ್ಲಿ ಸಿಎಂ ಸಭೆ ನಡೆಸಲಿದ್ದಾರೆ. ಬಳಿಕ ಮಂಗಳವಾರ ಕಾಂಗ್ರೆಸ್ ಹೈಕಮಾಂಡ್ ನಾಯಕರನ್ನು ಡಿ.ಕೆ. ಶಿವಕುಮಾರ್ ಭೇಟಿ ಮಾಡಿ, ನನೆಗುದಿಗೆ ಬಿದ್ದಿರುವ ಸಂಪುಟ ವಿಸ್ತರಣೆಗೆ ಅನುಮತಿ ಪಡೆಯುವ ಸಾಧ್ಯತೆ ಇದೆ. ಆಕಾಂಕ್ಷಿಗಳ ಪಟ್ಟಿ ಬಗ್ಗೆ ರಾಹುಲ್ ಗಾಂಧಿ ಜೊತೆ ಚರ್ಚಿಸಿ ಅಂತಿಮಗೊಳಿಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ. ಬುಧವಾರ, ಗುರುವಾರದೊಳಗೆ ಸಂಪುಟ ವಿಸ್ತರಣೆ ನಡೆಯುವ ಸಾಧ್ಯತೆ ಇದೆ ಎಂದು ಕಾಂಗ್ರೆಸ್ ಮೂಲಗಳು ವಿಶ್ವಾಸ ವ್ಯಕ್ತಪಡಿಸುತ್ತಿದ್ದಾರೆ.

ಹೀಗಾಗಿ ಆಕಾಂಕ್ಷಿಗಳು ಮತ್ತೆ ಮಂತ್ರಿಗಿರಿಗಾಗಿ ಕಸರತ್ತು ಆರಂಭಿಸಿದ್ದಾರೆ. ಒಂದಷ್ಟು ಶಾಸಕರು ದೆಹಲಿಗೆ ತೆರಳಲಿದ್ದು, ಮಂತ್ರಿ ಸ್ಥಾನಕ್ಕಾಗಿ ಕೊನೆಯ ಕ್ಷಣದ ಲಾಬಿ ನಡೆಸಲು ಮುಂದಾಗಿದ್ದಾರೆ. ಕಳೆದ ವಾರ ನೀಟ್ ಪರೀಕ್ಷೆ ಪ್ರಶ್ನೆ ಪತ್ರಿಕೆ ಸೋರಿಕೆ ಸಂಬಂಧ ರಾಹುಲ್ ಗಾಂಧಿ ನೇತೃತ್ವದಲ್ಲಿ ಹೋರಾಟ ಇದ್ದ ಕಾರಣ ಸಂಪುಟ ವಿಸ್ತರಣೆ ಚರ್ಚೆ ಸಾಧ್ಯವಾಗದೇ ಸಿಎಂ ಡಿಕೆಶಿ, ಮಾಜಿ ಸಿಎಂ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ವಾಪಸಾಗಿದ್ದರು.

**1** ಯುವ ನಾಯಕರಿಗೆ ಆದ್ಯತೆ ನೀಡುವಲ್ಲಿ ಹೈಕಮಾಂಡ್ ಆಸಕ್ತಿ.

**2** 50-20 ಸೂತ್ರವನ್ನು ಹೈಕಮಾಂಡ್ ರೂಪಿಸಿದೆ.

**3** ಸಚಿವ ಸ್ಥಾನಕ್ಕಾಗಿ ಬೆನ್ನುಬಿದಿದ್ದಾರೆ.

"ವಿಬಿಜಿ ರಾಮ್ ಜಿ ಹೆಸರು ಬದಲಾವಣೆ ನಮ್ಮ ಮುಂದಿದೆ. ಹೊಸ ರೂಪ ನೀಡಲು ಮುಂದಾಗಿದ್ದೇವೆ. ಇದಕ್ಕೂ ರೂಪುರೇಷೆ ತಯಾರಿಸಲಾಗಿದೆ. ಇದಕ್ಕೆ ರಾಜ್ಯ ಸರ್ಕಾರವೇ ಶೇ40 ರಷ್ಟು ಹಣ ನೀಡಬೇಕಾಗಿದೆ. ಆಗಸ್ಟ್ ಎರಡನೇ ವಾರ ಅಥವಾ 6ನೇ ತಾರೀಕು ವಿಧಾನಸಭೆ ಅಧಿವೇಶನ ನಡೆಯಬಹುದು. ಎಸ್ ಐಆರ್ ನಿಂದ ಅಧಿವೇಶನ ಮುಂದೂಡುವ ಪರಿಸ್ಥಿತಿ ಎದುರಾಯಿತು. ಇನ್ನಷ್ಟು ಮುಂದೂಡಿಕೆ ಕಷ್ಟವಾಗಬಹುದು. ಎಲ್ಲಾ ಶಾಸಕರು ನೇರವಾಗಿ ನನ್ನ ಬಳಿಯೇ ಯಾವುದೇ ಸಮಸ್ಯೆ ಇದ್ದರೂ ಹೇಳಬಹುದು. ಬಗೆಹರಿಸಲು ಆದಷ್ಟು ಪ್ರಯತ್ನ ಮಾಡುತ್ತೇನೆ.

ಸಿಎಂ ಡಿಕೆಶಿ



### ಹಲವು ಬಾರಿ ವರಿಷ್ಠರೊಂದಿಗೆ ರಾಜ್ಯ ನಾಯಕರು ಸಭೆ

ಇದರ ನಡುವೆ ಹಲವು ಬಾರಿ ವರಿಷ್ಠರೊಂದಿಗೆ ರಾಜ್ಯ ನಾಯಕರು ಸಭೆ ನಡೆಸಿದ್ದರೂ, ಈವರೆಗೆ ಅಂತಿಮ ತೀರ್ಮಾನ ಆಗಿಲ್ಲ.

ಕಳೆದ ವಾರ ರಾಜ್ಯ ನಾಯಕರು ವರಿಷ್ಠರನ್ನು ಭೇಟಿ ಮಾಡಲು ತೆರಳಿದ್ದರೂ ಕಾಕ್ರೋಚ್ ಜನತಾ ಪಕ್ಷದ ಹೋರಾಟದಿಂದಾಗಿ ಮುಂದೂಡಲ್ಪಟ್ಟಿತ್ತು. ಇದೀಗ ಕಾಕ್ರೋಚ್ ಹೋರಾಟಕ್ಕೆ ವಿರಾಮ ದೊರೆತಿರುವ ಹಿನ್ನೆಲೆಯಲ್ಲಿ ವರಿಷ್ಠರಿಂದ ಬುಲಾವ್ ಬಂದಿದೆ.

ಹೀಗಾಗಿ ಈ ಬಾರಿ ಬಹುತೇಕ ಸಂಪುಟ ವಿಸ್ತರಣೆ ಅಂತಿಮವಾಗುವ ಸಾಧ್ಯತೆಯಿದೆ ಎನ್ನಲಾಗಿದೆ.

### ರಾಜ್ಯ ಸಂಪುಟ ವಿಸ್ತರಣೆಗೆ ಮತ್ತೆ ಕೌಂಟ್‌ಡೌನ್..?

### ಜಿಲ್ಲಾ ಕಾಂಗ್ರೆಸ್ ಸಮಿತಿಗೂ 50 ವರ್ಷದ ಆಸುಪಾಸಿನವರು

ಇನ್ನೂ ಇತ್ತೀಚೆಗೆ ಜಿಲ್ಲಾಧ್ಯಕ್ಷರ ನೇಮಕ ಸಂಬಂಧ ಕೆಪಿಸಿಸಿ ಕಚೇರಿಯಲ್ಲಿ ನಡೆದ ವೀಕ್ಷಕರ ಸಭೆಯಲ್ಲಿ 50ರ ಆಸುಪಾಸಿನಲ್ಲಿರುವ ಯುವ ಮುಂದಾಳುಗಳನ್ನು ಡಿಸಿಸಿ ಅಧ್ಯಕ್ಷರಾಗಿ ನೇಮಕ ಮಾಡುವ ಉದ್ದೇಶವನ್ನು ಸ್ಪಷ್ಟಪಡಿಸಿದ್ದಾರೆ. ಇದೆಲ್ಲವೂ ಹೊಸ ಶಾಸಕರಲ್ಲಿ ಸಚಿವ ಸ್ಥಾನದ ಆಕಾಂಕ್ಷೆ ಗರಿಗೆದರುವಂತೆ ಮಾಡಿವೆ. ಈ ಬಗ್ಗೆ ಮಾಧ್ಯಮಗಳ ಜತೆ ಮಾತನಾಡಿದ ಜೆಎನ್ ಗಣೇಶ್, ಪಕ್ಷದಲ್ಲಿ 20 ರಿಂದ 25 ಹೊಸ ಶಾಸಕರ ಯುವತಂಡವೇ ಇದೆ. ಹೊಸಬರಿಗೂ ಅವಕಾಶ ಸಿಗಬೇಕು ಎಂಬ ವಿಚಾರದಲ್ಲಿ ಸಂದೇಶವೊಂದನ್ನು ಕೊಡಲು ಎಲ್ಲರೂ ಬಂದಿದ್ದೆವು. ಬಡತನದಿಂದ ಕಷ್ಟಪಟ್ಟು ರಾಜಕೀಯಕ್ಕೆ ಬಂದಿದ್ದೇವೆ. ಅವಕಾಶ ಸಿಕ್ಕರೆ ಒಳ್ಳೆಯ ಕೆಲಸ ಮಾಡಲು ಉತ್ತೇಜನ ಸಿಗುತ್ತದೆ ಎಂದು ಹೇಳಿದರು.

### ಶಾಸಕರು ದೆಹಲಿಗೆ ದೌಡು

ಸಚಿವ ಸಂಪುಟ ವಿಸ್ತರಣೆಯ ಸಂಬಂಧ ದೆಹಲಿಯಲ್ಲಿ ಕಾಂಗ್ರೆಸ್ ಹೈಕಮಾಂಡ್ ರಾಜ್ಯ ನಾಯಕರ ಜತೆ ಸಭೆ ನಡೆಸುವುದು ಖಚಿತವಾಗುತ್ತಿದ್ದಂತೆಯೇ 15ಕ್ಕೂ ಹೆಚ್ಚು ಸಚಿವಾಕಾಂಕ್ಷಿ ಶಾಸಕರುಗಳು ದೆಹಲಿಗೆ ದೌಡಾಯಿಸಿದ್ದಾರೆ.

ಶತಾಯ-ಗತಾಯ ಸಚಿವ ಸ್ಥಾನ ಪಡೆಯಲೇಬೇಕು ಎಂಬ ಉಮೇದಿನಲ್ಲಿರುವ ಶಾಸಕರುಗಳು ಈಗಾಗಲೇ ಹಲವು ಬಾರಿ ದೆಹಲಿಗೆ ತೆರಳಿ ವರಿಷ್ಠರನ್ನು ಭೇಟಿ ಮಾಡಿ ಸಚಿವ ಸ್ಥಾನಕ್ಕೆ ಬೇಡಿಕೆ ಇಟ್ಟಿದ್ದಾರೆ. ಸಂಪುಟ ವಿಸ್ತರಣೆಯ ಅಂತಿಮ ಹಂತದ ಚರ್ಚೆಗಳು ನಡೆದು ಸಚಿವರ ಪಟ್ಟಿ ಬಹುತೇಕ ಅಂತಿಮಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಸಚಿವಾಕಾಂಕ್ಷಿ ಶಾಸಕರುಗಳು ಇಂದು ದೆಹಲಿಗೆ ತೆರಳಿದ್ದು, ಹೈಕಮಾಂಡ್ ಮಟ್ಟದಲ್ಲಿ ತಮ್ಮ ಗಾಡ್ ಫಾದರ್‌ಗಳ ಮೂಲಕ ಲಾಬಿ ನಡೆಸಿ ಸಚಿವ ಸ್ಥಾನಕ್ಕಾಗಿ ಕಸರತ್ತು ನಡೆಸಿದ್ದಾರೆ.

### ಹೈಕಮಾಂಡ್ ಮಹತ್ವದ ಮಾತುಕತೆ

ಸಚಿವ ಸಂಪುಟ ವಿಸ್ತರಣೆ ಕುರಿತು ಚರ್ಚಿಸಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಕರ್ನಾಟಕ ಕಾಂಗ್ರೆಸ್‌ನ ಪ್ರಮುಖ ನಾಯಕರನ್ನು ಸೋಮವಾರ ಸಂಜೆ 6 ಗಂಟೆಗೆ ದೆಹಲಿಗೆ ಪಕ್ಷದ ಹೈಕಮಾಂಡ್ ಕರೆದಿದೆ. ಎಲ್ಲವೂ ಯೋಜನೆಯಂತೆ ನಡೆದರೆ, 20 ಮಂದಿ ಹೊಸ ಸಚಿವರ ಪ್ರಮಾಣವಚನ ಸ್ವೀಕಾರ ಸಮಾರಂಭ ಮಂಗಳವಾರ ಅಥವಾ ಬುಧವಾರ ನಡೆಯುವ ಸಾಧ್ಯತೆ ಇದೆ ಎಂದು ವಿಶ್ವಾಸಾರ್ಹ ಮೂಲಗಳು ತಿಳಿಸಿವೆ. ಎಐಸಿಸಿ ಪ್ರಧಾನ ಕಾರ್ಯದರ್ಶಿ (ಸಂಘಟನೆ) ಕೆ.ಸಿ. ವೇಣುಗೋಪಾಲ್ ಅವರು ನಿನ್ನೆ ಬೆಂಗಳೂರಿನಲ್ಲಿ ಮಾತನಾಡಿ, ಸಚಿವ ಸಂಪುಟ ವಿಸ್ತರಣೆ ಯಾವುದೇ ಕ್ಷಣದಲ್ಲಿ ನಡೆಯಬಹುದು ಎಂದು ತಿಳಿಸಿದ್ದರು.

ಆಗಸ್ಟ್ ಮೊದಲ ವಾರದಲ್ಲಿ ವಿಧಾನಮಂಡಲದ ಮಳೆಗಾಲದ ಅಧಿವೇಶನ ಆರಂಭವಾಗಲಿರುವುದರಿಂದ, ಸಚಿವ ಸಂಪುಟ ವಿಸ್ತರಣೆಯನ್ನು ಮತ್ತಷ್ಟು ಮುಂದೂಡಲು ಹೈಕಮಾಂಡ್‌ಗೆ ಅವಕಾಶವಿಲ್ಲ.

ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರೊಂದಿಗೆ ರಾಷ್ಟ್ರ ರಾಜಧಾನಿಗೆ ತೆರಳುತ್ತಿದ್ದಾರೆ.



ಇದಕ್ಕೂ ಮುನ್ನ ರಾಜ್ಯ ನಾಯಕರು ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ. ವೇಣುಗೋಪಾಲ್ ಹಾಗೂ ರಣದೀಪ್ ಸಿಂಗ್ ಸುರ್ಜೇವಾಲಾ ಅವರೊಂದಿಗೆ ಸಭೆ ನಡೆಸಿ, ಸಚಿವರಾಗಿ ಪ್ರಮಾಣವಚನ ಸ್ವೀಕರಿಸಲಿರುವ ಶಾಸಕರ ಪಟ್ಟಿಯನ್ನು ಅಂತಿಮಗೊಳಿಸಿದ್ದಾರೆ. ಆ ಪಟ್ಟಿಗೆ ರಾಹುಲ್ ಗಾಂಧಿ ಅವರ ಅಂತಿಮ ಒಪ್ಪಿಗೆ ಅಗತ್ಯವಿದೆ.

## ಡಿಸಿಎಂ ಹುದ್ದೆಗೆ ಬೇಡಿಕೆ ಇಟ್ಟಿಲ್ಲ:ಎಂ.ಬಿ.ಪಾಟೀಲ್

• ಉದಯವಾಹಿನಿ, ಬೆಂಗಳೂರು

ಉಪ ಮುಖ್ಯಮಂತ್ರಿ ಸ್ಥಾನಕ್ಕಾಗಿ ತಾವು ಬೇಡಿಕೆ ಇಟ್ಟಿಲ್ಲ, ಹೈಕಮಾಂಡ್ ಮಟ್ಟದಲ್ಲಿ ಆ ಚರ್ಚೆಯ ಕುರಿತು ನಾನು ಪ್ರತಿಕ್ರಿಯಿಸುವುದಿಲ್ಲ ಎಂದು ಸಚಿವ ಎಂ.ಬಿ.ಪಾಟೀಲ್ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉಪ ಮುಖ್ಯಮಂತ್ರಿ ಹುದ್ದೆ ಸೃಷ್ಟಿಯ ಬಗ್ಗೆ ನನಗೆ ಹೆಚ್ಚಿನ ಮಾಹಿತಿ ಇಲ್ಲ. ಇನ್ನೊಂದು ಎರಡು, ಮೂರು ದಿನದಲ್ಲಿ ಸಚಿವ ಸಂಪುಟ ವಿಸ್ತರಣೆಯಾಗಲಿದೆ ಎಂದರು.

ಆ ಸಂದರ್ಭದಲ್ಲಿ ವಿಜಯಪುರ ಜಿಲ್ಲೆಗೆ ಮತ್ತೊಂದು ಸಚಿವ ಸ್ಥಾನ ನೀಡಬೇಕೆಂದು ತಾವು ಮನವಿ ಮಾಡಿದ್ದೇನೆ. ಆದರೆ ಸಚಿವರಾಗುವ ಪೈಪೋಟಿಯಲ್ಲಿ ಯಾರೆಲ್ಲಾ ಇದ್ದಾರೆ ಎಂಬುದು ನನಗೆ ಗೊತ್ತಿಲ್ಲ. ಒಬ್ಬರು ಅಥವಾ ಅದಕ್ಕಿಂತ ಹೆಚ್ಚಿನ ಜನ ಇರುವ ಬಗ್ಗೆಯೂ ನನಗೆ ಮಾಹಿತಿ ಇಲ್ಲ. ಜಿಲ್ಲೆಗೆ ಇನ್ನೊಂದು ಸಚಿವ ಸ್ಥಾನ ಸಿಗುವುದು ಅಗತ್ಯ ಇದೆ ಎಂದರು.

ಇಡೀ ದೇಶದಲ್ಲೇ ಬರದ ಪರಿಸ್ಥಿತಿ ಇದೆ. ರಾಜ್ಯದಲ್ಲಿ ಬರ ಪೀಡಿತ ಪ್ರದೇಶಗಳನ್ನು ಘೋಷಿಸುವುದು ಕೇಂದ್ರ ಸರ್ಕಾರದ ಹೊಣೆಗಾರಿಕೆ. ಮಾನದಂಡಗಳ ಅನುಸಾರ ಅಗಸ್ಟ್‌ವರೆಗೂ ಬರ ಪೀಡಿತ ತಾಲ್ಲೂಕುಗಳನ್ನು ಗುರುತಿಸಲಾಗುವುದಿಲ್ಲ. ಆದರೆ ಅನಂತರ ನಷ್ಟ ಅಂದಾಜು ಮಾಡುವುದರಿಂದ ಯಾವುದೇ ಪ್ರಯೋಜನವಾಗುವುದಿಲ್ಲ. ಈಗಾಗಲೇ ಮೊದಲ ಸಲ ಮಾಡಿದ ಬಿತ್ತನೆ ಬೆಳೆ ಒಣಗಿ ಹೋಗಿದೆ. ರೈತರಿಗೆ ರಸಗೊಬ್ಬರ ಮತ್ತು ಬಿತ್ತನೆ ಬೀಜದ ಮೊತ್ತವೂ ದೊರೆಯುತ್ತಿಲ್ಲ. ನಷ್ಟವನ್ನು ಭರಿಸಲು ಕೇಂದ್ರ ಸರ್ಕಾರ ಮುಂದಾಗಬೇಕು ಎಂದರು. ದೆಹಲಿಯಲ್ಲಿ 47 ದಿನ ವಿದ್ಯಾರ್ಥಿಗಳು ನಿರಂತರವಾಗಿ ಪ್ರತಿಭಟನೆ ನಡೆಸಲು ನೀಟ್ ಹಗರಣದಿಂದಾಗಿ 20 ಮಕ್ಕಳು ಜೀವ ಕಳೆದುಕೊಂಡರು. ಮಾನಸಿಕ ಒತ್ತಡದಿಂದ ಒಂದೂವರೆ



ಲಕ್ಷ ವಿದ್ಯಾರ್ಥಿಗಳು ಪರೀಕ್ಷೆಯಿಂದ ದೂರ ಉಳಿದರು. ಇದು ನಾಚಿಕೆ ಪಡುವ ವಿಚಾರ. ಪ್ರಧಾನಿಯವರು ಹಗರಣ ಬೆಳಕಿಗೆ ಬಂದ 24 ಗಂಟೆಯ ಒಳಗಾಗಿ ಸಚಿವರ ರಾಜೀನಾಮೆ ಪಡೆಯಬೇಕಿತ್ತು.

ಆದರೆ ಪ್ರತಿಭಟನೆ ತೀವ್ರವಾದ ಬಳಿಕ ಅನಿವಾರ್ಯವಾಗಿ ಸಚಿವರಿಂದ ರಾಜೀನಾಮೆ ಪಡೆದಿದ್ದಾರೆ. ಇದು ತೀರ ತಡವಾಗಿದೆ ಎಂದರು. ಒಳ್ಳೆಯ ದಿನ ಬರುತ್ತದೆ ಎಂದು ನಂಬಿಸಿ ಮಾಡಿದ ವಂಚನೆಗಳಿಗೆ ಜನ ಇನ್ನು ಕಿವಿಗೊಡುವುದಿಲ್ಲ. ಮೋದಿಯ ಯುಗ ಅಂತ್ಯವಾಗುತ್ತಾ ಬರುತ್ತಿದೆ. ದೇಶದಲ್ಲಿ ಬೆಲೆ ಏರಿಕೆ, ಪೆಟ್ರೋಲ್, ಡೀಸೆಲ್ ಬೆಲೆ ಹೆಚ್ಚಳ ಎಲ್ಲವುಗಳಿಂದಲೂ ಜನ ಸಂಕಷ್ಟಕ್ಕೊಳಗಾಗಿದ್ದಾರೆ ಎಂದರು. ಧರ್ಮೇಂದ್ರ ಪ್ರಧಾನ್ ಬಳಿಕ ಎಥೆನಾಲ್ ನೀತಿಯ ಹಗರಣದ ವಿರುದ್ಧ ಹೋರಾಟ ನಡೆಯಲಿದೆ.

ಇ-20ಯ ಕುರಿತು ವೈಜ್ಞಾನಿಕ ಪರೀಕ್ಷೆ ನಡೆದಿಲ್ಲ, ಜನರ ವಿಶ್ವಾಸ ಪಡೆದಿಲ್ಲ, ಬೇರೆ ಬೇರೆ ದೇಶಗಳಲ್ಲಾದ ನೀತಿಗಳ ಅಧ್ಯಯನ ಮಾಡಿಲ್ಲ. ಎಥೆನಾಲ್ ಮಿಶ್ರಣದಿಂದ ವಾಹನದ ಎಂಜಿನ್ ಮೇಲಾಗುವ ಪರಿಣಾಮ ಯಾವುದನ್ನು ಪರಿಶೀಲನೆ ಮಾಡದೇ ಏಕಾಏಕಿ ನಿರ್ಧಾರ ತೆಗೆದುಕೊಂಡಿದ್ದಾರೆ. ಬಿಜೆಪಿ ಆಡಳಿತವೇ ಈ ರೀತಿ ಅದ್ವಾನದಿಂದ ಕೂಡಿದೆ ಎಂದರು. ಮನಮೋಹನ್ ಸಿಂಗ್ ಸೇರಿದಂತೆ ಎಲ್ಲರ ಆಡಳಿತದಲ್ಲೂ ದೇಶದ ಆರ್ಥಿಕತೆ ಮತ್ತು ವಿದೇಶಾಂಗ ನೀತಿಯಲ್ಲಿ ದಕ್ಷತೆ ಇತ್ತು. ಈಗ ಮೋದಿಯವರ ಸರ್ಕಾರ ಎಲ್ಲವನ್ನೂ ಹಾಳು ಮಾಡಿದೆ ಎಂದು ಆರೋಪಿಸಿದರು.

## ನೀಟ್ ಪರೀಕ್ಷೆ ವಿಚಾರವನ್ನು ರಾಜಕೀಯವಾಗಿ ಬಳಸಿ ಅರಾಜಕತೆ ಸೃಷ್ಟಿಸಲು ಕೆಲ ಶಕ್ತಿಗಳಿಂದ ಪ್ರಯತ್ನ: ಬಿ ವೈ ವಿಜಯೇಂದ್ರ

• ಉದಯವಾಹಿನಿ, ಬೆಂಗಳೂರು

ನೀಟ್ ಪರೀಕ್ಷೆ ವಿಚಾರವನ್ನು ರಾಜಕೀಯವಾಗಿ ಬಳಸಿಕೊಂಡು ದೇಶದಲ್ಲಿ ಅರಾಜಕತೆ ಸೃಷ್ಟಿಸಲು ಕೆಲವು ಶಕ್ತಿಗಳು ಪ್ರಯತ್ನಿಸಿದ್ದವು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದರು.

ಭಾನುವಾರ ಇಲ್ಲಿನ ಸಂಪಂಗಿ ರಾಮನಗರದ ಬಳಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ನೀಟ್ ಪರೀಕ್ಷೆ ವಿಚಾರವನ್ನು ರಾಜಕೀಯವಾಗಿ ಬಳಸಿಕೊಂಡು ದೇಶದಲ್ಲಿ ಅರಾಜಕತೆ ಸೃಷ್ಟಿಸಲು ಕೆಲವು ಶಕ್ತಿಗಳು ಪ್ರಯತ್ನಿಸಿದ್ದವು. ಅಂತಹ ಪ್ರಯತ್ನಗಳಿಗೆ ಅವಕಾಶ ನೀಡಬಾರದು ಎಂಬುದು ಪ್ರಧಾನಿ ನರೇಂದ್ರ ಮೋದಿ ಅವರ ಸ್ಪಷ್ಟ ನಿಲುವಾಗಿದೆ.

ಘಟನೆಯ ಬಗ್ಗೆ ಸಂಪೂರ್ಣ ಪಾರದರ್ಶಕ ತನಿಖೆ ನಡೆಯಬೇಕು ಎಂಬ ಉದ್ದೇಶದಿಂದ ಕೇಂದ್ರ ಸರ್ಕಾರ ಕ್ರಮ ಕೈಗೊಂಡಿದ್ದು, ಸತ್ಯಾಂಶ ಹೊರಬರಲು ಅವಕಾಶ ಕಲ್ಪಿಸಲಾಗಿದೆ ಎಂದು ಹೇಳಿದರು.

ಉನ್ನತ ಶಿಕ್ಷಣದ ಮಹತ್ವವಾದ ಖಾತೆಯು ನಮ್ಮ ರಾಜ್ಯದವರೇ ಆದ ಪ್ರಲ್ಹಾದ್ ಜೋಶಿ ಅವರಿಗೆ ಸಿಕ್ಕಿದೆ. ಇದೊಂದು ಉತ್ತಮ ಅವಕಾಶ. ಪ್ರಲ್ಹಾದ್ ಜೋಶಿ ಅವರು ಅಪಾರ ಅನುಭವ ಇರುವ ರಾಜಕಾರಣಿ.

ಹಿಂದೆ ಸಂಸದೀಯ ವ್ಯವಹಾರ ಇಲಾಖೆಯನ್ನೂ ನಿಭಾಯಿಸಿದ್ದರು ಎಂದು ತಿಳಿಸಿದರು. ಉನ್ನತ ಶಿಕ್ಷಣ ಇಲಾಖೆಯನ್ನು ಇನ್ನಷ್ಟು ಸುಲಲಿತವಾಗಿ ಮತ್ತು ಸುಧಾರಣೆಯ ನಿಟ್ಟಿನಲ್ಲಿ ಪ್ರಲ್ಹಾದ್ ಜೋಶಿ ಅವರು ಒಯ್ಯಲಿದ್ದಾರೆ ಎಂಬ



ವಿಶ್ವಾಸವನ್ನು ಅವರು ವ್ಯಕ್ತಪಡಿಸಿದರು. ಅದರ ಲಾಭ ದೇಶ ಮತ್ತು ರಾಜ್ಯಕ್ಕೆ ಆಗಲಿದೆ ಎಂದರು.

ಪಡಿತರ ಅಕ್ಕಿ ಕಾಳಸಂತೆಯಲ್ಲಿ ಮಾರಾಟ ಮತ್ತು ಕೇರಳಕ್ಕೆ ಅಕ್ರಮ ಸಾಗಣೆ ಕುರಿತಂತೆ ಆಹಾರ ಇಲಾಖೆ ಕಾರ್ಯದರ್ಶಿಯವರು ಆಯುಕ್ತರಿಗೆ ಪತ್ರ ಬರೆದಿದ್ದಾರೆ. ಇದರಲ್ಲಿ 415 ಹೆಸರುಗಳನ್ನು ಉಲ್ಲೇಖಿಸಿದ್ದರೂ ಕ್ರಮ ಕೈಗೊಳ್ಳದಿರುವ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಅಕ್ರಮಗಳು ಮತ್ತು ಕಾಂಗ್ರೆಸ್ ಸರ್ಕಾರಕ್ಕೆ ಹಿಂದಿನಿಂದ ಅವಿನಾಭಾವ ಸಂಬಂಧ ಇದೆ.

ಕಾಂಗ್ರೆಸ್ ಸರ್ಕಾರವು ಹಿಂದಿನಿಂದಲೂ ಲೂಟಿಕೋರರನ್ನು ರಕ್ಷಿಸುತ್ತ ಬಂದಿದೆ. ಗ್ಯಾರಂಟಿ ಎಂದು ಹೇಳಿಕೊಳ್ಳುತ್ತಿದ್ದು, ರಾಜ್ಯದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳು ಆಗುತ್ತಿಲ್ಲ. ಗೃಹಲಕ್ಷ್ಮಿಯಲ್ಲಿ ಸುಧಾರಣೆ ಮಾಡುವುದಾಗಿ ಹೇಳಿ ಅಲ್ಲಿ ಕೂಡ ಹಾಳುಗೆಡಹುವ ಕೆಲಸ ಆಗಿದೆ.

ಮುಂದಿನ ಅಧಿವೇಶನದಲ್ಲಿ ಇವುಗಳ ಕುರಿತು ಚರ್ಚೆ ಆಗಿ ಅದಕ್ಕೆ ನ್ಯಾಯ ಕೊಡುವ ಕೆಲಸವನ್ನು ವಿಪಕ್ಷವಾಗಿ ನಾವು ಮಾಡಲಿದ್ದೇವೆ ಎಂದು ವಿಜಯೇಂದ್ರ ತಿಳಿಸಿದರು.

## ರಾಜಕೀಯ ಮಾಡುವ ಸಿಎಂ ಅವರೇ ರಾಜ್ಯದಲ್ಲಿ ಎಲ್ಲಾ ಜನರೇಷನ್ ಸಂಕಷ್ಟದಲ್ಲಿದ್ದಾರೆ: ಆರ್.ಅಶೋಕ್

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ನಡೆದ ಗಂಭೀರ ಘಟನೆಗಳಿಗೆ ನೈತಿಕ ಮತ್ತು ಆಡಳಿತಾತ್ಮಕ ಹೊಣೆ ಯಾರು ಹೊರುತ್ತಾರೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ರಾಜ್ಯ ಕಾಂಗ್ರೆಸ್ ಸರ್ಕಾರವನ್ನು ಪ್ರಶ್ನಿಸಿದ್ದಾರೆ. ಈ ಸಂಬಂಧ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ದೆಹಲಿಯಲ್ಲಿ ಹೆಸರಲ್ಲಿ ರಾಜಕೀಯ ಮಾಡುವ ಸಿಎಂ ಡಿ.ಕೆ.ಶಿವಕುಮಾರ್ ಅವರೇ ರಾಜ್ಯದಲ್ಲಿ ಮಾತ್ರವಲ್ಲ ಎಲ್ಲಾ ಜನರೇಷನ್ ಸಂಕಷ್ಟದಲ್ಲಿ ಇದ್ದಾರೆ. ಮೊದಲು ಇತ್ತ ನೋಡಿ ಎಂಬ ಪೋಸ್ಟರ್ ಪೋಸ್ಟ್ ಮಾಡುವ ಮೂಲಕ ಸಿಎಂಗೆ ತಿರುಗೇಟು ನೀಡಿದ್ದಾರೆ. ಕೇಂದ್ರದಲ್ಲಿ ನೀಟ್ ಪರೀಕ್ಷೆಗೆ ಸಂಬಂಧಿಸಿದ ಬೆಳವಣಿಗೆಯ ಹಿನ್ನೆಲೆಯಲ್ಲಿ ರಾಜಕೀಯ ಹಾಗೂ ಆಡಳಿತಾತ್ಮಕ ಹೊಣೆ ಹೊತ್ತು ಕೇಂದ್ರ ಶಿಕ್ಷಣ ಸಚಿವರು ರಾಜೀನಾಮೆ ನೀಡಿದ್ದಾರೆ. ಹಾಗಾದರೆ ಕರ್ನಾಟಕದಲ್ಲಿ ನಡೆದ ಗಂಭೀರ ಘಟನೆಗಳಿಗೆ ನೈತಿಕ ಮತ್ತು ಆಡಳಿತಾತ್ಮಕ ಹೊಣೆಯನ್ನು ಯಾರು ಹೊರುತ್ತಾರೆ ಎಂದು ಅಶೋಕ್ ಪ್ರಶ್ನಿಸಿದ್ದಾರೆ.

ಕೆಪಿಎಸ್‌ಸಿ ಪಶುವೈದ್ಯಾಧಿಕಾರಿಗಳ ನೇಮಕಾತಿಯಲ್ಲಿ ಒಂದು ಹುದ್ದೆಗೆ 80 ಲಕ್ಷ ರೂ. ಡೀಲ್ ನಡೆದಿರುವ ಆರೋಪದ ಆಡಿಯೋ ಬಹಿರಂಗವಾಗಿದೆ. ಈ ಆರೋಪಗಳ ಕುರಿತು ಸಮಗ್ರ, ಸ್ವತಂತ್ರ ಮತ್ತು ಪಾರದರ್ಶಕ ತನಿಖೆ ಯಾವಾಗ? ಇದರ ಹೊಣೆ ಯಾರು ಹೊರುತ್ತಾರೆ? ಯಾರು ರಾಜೀನಾಮೆ ಕೊಡುತ್ತಾರೆ ಎಂದು ಪ್ರಶ್ನೆ ಮಾಡಿದ್ದಾರೆ.



**ಐಪಿಎಲ್ ವಿಜಯೋತ್ಸವ ದುರಂತಕ್ಕೆ ಯಾರು ಹೊಣೆ?:** ಐಪಿಎಲ್ ವಿಜಯೋತ್ಸವದ ಕಾಲ್ತುಳಿತ ದುರಂತದಲ್ಲಿ 11 ಅಮಾಯಕ ಜೀವಗಳು ಬಲಿಯಾದವು. ಆ ದುರಂತಕ್ಕೆ ನೈತಿಕ ಮತ್ತು ಆಡಳಿತಾತ್ಮಕ ಹೊಣೆ ಯಾರು ಹೊರುತ್ತಾರೆ ನೊಂದ ಕುಟುಂಬಗಳಿಗೆ ಸಂಪೂರ್ಣ ನ್ಯಾಯ ಯಾವಾಗ ದೊರೆಯುತ್ತದೆ? ಇದರ ಹೊಣೆ ಯಾರು ಹೊರುತ್ತಾರೆ ಯಾರ ರಾಜೀನಾಮೆ ನೀಡುತ್ತಾರೆ ಎಂದು ಕೇಳಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ಕಳೆದ ಮೂರು ವರ್ಷಗಳಲ್ಲಿ ಸಾವಿರಾರು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮೈಕ್ರೋ ಫೈನಾನ್ಸ್ ಹಾವಳಿ ತಡೆಯಲಾರದೆ ನೂರಾರು ಬಡವ ಸಾಲಗಾರರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ? ಇದಕ್ಕೆಲ್ಲ ಯಾರು ಹೊಣೆ? ಯಾರು ರಾಜೀನಾಮೆ ಕೊಡುತ್ತಾರೆ ಎಂದು ಪ್ರಶ್ನಿಸಿದ್ದಾರೆ. ಪ್ರಜಾಪ್ರಭುತ್ವದಲ್ಲಿ ಅಧಿಕಾರ ಎಂದರೆ ಕೇವಲ ಹುದ್ದೆಯಲ್ಲ, ಅದರೊಂದಿಗೆ ಜವಾಬ್ದಾರಿಯೂ ಇರುತ್ತದೆ. ತಪ್ಪುಗಳು ನಡೆದಾಗ ಅಧಿಕಾರಿಗಳ ಮೇಲೆ ಗೂಬೆ ಕೂರಿಸದೆ, ನಾಮಕಾವಸ್ತೆ ತನಿಖೆಗಳ ಹೆಸರಿನಲ್ಲಿ ತಪ್ಪಿಸಿಕೊಳ್ಳದೆ ಉತ್ತರದಾಯಿತ್ವ ಸ್ವೀಕರಿಸಬೇಕು. ಪ್ರತಿಯೊಂದು ಪ್ರಕರಣದಲ್ಲೂ ಸತ್ಯ ಹೊರಬರಬೇಕು, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮವಾಗಬೇಕು ಹಾಗೂ ಜನರ ವಿಶ್ವಾಸವನ್ನು ಮರುಸ್ಥಾಪಿಸುವ ಕಾರ್ಯ ನಡೆಯಬೇಕು ಎಂದು ಆರ್.ಅಶೋಕ್ ಆಗ್ರಹಿಸಿದ್ದಾರೆ.

### ಸರ್ಕಾರಕ್ಕೆ ಆರ್. ಅಶೋಕ್ ಪ್ರಶ್ನೆ

ರಾಜ್ಯದ ವಿವಿಧ ವಿವಾದಾತ್ಮಕ ಘಟನೆಗಳನ್ನು ಉಲ್ಲೇಖಿಸಿ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಕೇಂದ್ರದಲ್ಲಿ ನಡೆದ ಬೆಳವಣಿಗೆಗಳ ಬಳಿಕ, ಕರ್ನಾಟಕದಲ್ಲಿ ನಡೆದ ಗಂಭೀರ ಪ್ರಕರಣಗಳಿಗೆ ನೈತಿಕ ಮತ್ತು ಆಡಳಿತಾತ್ಮಕ ಹೊಣೆ ಯಾರು ಹೊರುತ್ತಾರೆ ಎಂದು ಅವರು ಪ್ರಶ್ನಿಸಿದ್ದಾರೆ.ಕೆಪಿಎಸ್‌ಸಿ ನೇಮಕಾತಿ ಆರೋಪಗಳು, ಐಪಿಎಲ್ ವಿಜಯೋತ್ಸವದ ವೇಳೆ ನಡೆದ ಕಾಲ್ತುಳಿತ ದುರಂತ, ರೈತರ ಆತ್ಮಹತ್ಯೆ ಹಾಗೂ ಮೈಕ್ರೋ ಫೈನಾನ್ಸ್ ಸಮಸ್ಯೆ ಸೇರಿದಂತೆ ಹಲವು ವಿಷಯಗಳನ್ನು ಪ್ರಸ್ತಾಪಿಸಿದ ಅವರು, ಪ್ರತಿಯೊಂದು ಪ್ರಕರಣಕ್ಕೂ ಪಾರದರ್ಶಕ ತನಿಖೆ ನಡೆಯಬೇಕು ಎಂದು ಒತ್ತಾಯಿಸಿದರು.

## 5,000 ರೂ. ಲಂಚ ಪಡೆದ ಆರೋಪ ಹೆಡ್ ಕಾನ್‌ಸ್ಟೇಬಲ್ ಸಸ್ಪೆಂಡ್

• ಉದಯವಾಹಿನಿ, ಬೆಂಗಳೂರು

5,000 ರೂ. ಲಂಚ ಪಡೆದ ಆರೋಪದ ಮೇಲೆ ಪುಲಕೇಶಿನಗರ ಟ್ರಾಫಿಕ್ ಪೊಲೀಸ್ ಠಾಣೆಯ ಹೆಡ್ ಕಾನ್‌ಸ್ಟೇಬಲ್ ಒಬ್ಬರನ್ನ ಅಮಾನತು ಮಾಡಿರುವ ಘಟನೆ ನಡೆದಿದೆ. ಬೆಂಗಳೂರುಪೂರ್ವ ವಿಭಾಗ ಟ್ರಾಫಿಕ್ ಡಿಸಿಪಿ ಸಾಹಿಲ್ ಬಾಗ್ಲಾ ಅಮಾನತುಗೊಳಿಸಿ ಆದೇಶ ಹೊರಡಿಸಿದ್ದಾರೆ.

ಸೋಮಶೇಖರ್ ಅಮಾನತುಗೊಂಡ ಹೆಡ್ ಕಾನ್ಸ್ ಟೇಬಲ್. ಸೋಮಶೇಖರ್ ಅವರು ವಾಹನ ತಪಾಸಣೆ ಕರ್ತವ್ಯದಲ್ಲಿದ್ದಾಗ, ಕಬ್ಬಿಣ ತುಂಬಿದ ಲಾರಿ ಚಾಲಕ ಸಯ್ಯದ್ ಅಫ್ರೋಜ್ ಎಂಬಾತನಿಂದ 5,000 ರೂ. ಲಂಚ ಪಡೆದಿದ್ದರು. ಲಂಚ ಪಡೆದು ವಾಹನ ಬಿಟ್ಟುಕಳಿಸಲಾಗಿತ್ತು ಎಂದು ಆರೋಪಿಸಲಾಗಿದೆ.


ಕೇಸ್ ದಾಖಲಿಸಿದ್ರೆ ಕೋರ್ಟ್‌ನಲ್ಲಿ ಫೈನ್ ಕಟ್ಟಬೇಕು ಅಂತ ಬೆದರಿಸಿ ಹಣ ಪಡೆದುಕೊಂಡಿದ್ದಾರೆ ಹೆಡ್ ಕಾನ್‌ಸ್ಟೇಬಲ್ ಸೋಮಶೇಖರ್. ಹಣ ನೀಡುವ ವೇಳೆ ಲಾರಿ ಚಾಲಕ ಅಫ್ರೋಜ್ ಮೊಬೈಲ್‌ನಲ್ಲಿ ವಿಡಿಯೋ ರೆಕಾರ್ಡ್ ಮಾಡಿ, ಹಿರಿಯ ಅಧಿಕಾರಿಗಳ ಗಮನಕ್ಕೆ ತಂದಿದ್ದಾನೆ. ಈ ವಿಷಯ ತಿಳಿಯುತ್ತಿದ್ದಂತೆ ಕರ್ತವ್ಯ ಲೋಪ ಎಸಗಿ ಹಣ ಪಡೆದ ಆರೋಪ ಅಡಿಯಲ್ಲಿ ಸೋಮಶೇಖರ್‌ನನ್ನ ಅಮಾನತು ಮಾಡಲಾಗಿದೆ.

**ಈ ದಿನದ ದರ** ಪೆಟ್ರೋಲ್: 111.68 ₹/L ಡೀಸೆಲ್ : 99.56 ₹/L ಬಂಗಾರ: ₹ 14,493/Gram 24ct ₹13,285/Gram 22ct ಬೆಳ್ಳಿ: ₹240.00/Gram

# ಗಂಗ-ರಾಷ್ಟ್ರಕೂಟರ ಕಾಲದ ಅಪರೂಪದ 8 ಅಡಿ ಉದ್ದದ ಬೃಹತ್ ವೀರಗಲ್ಲು ಪತ್ತೆ...!

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ಸಮೀಪದ ಭೈರಸಂದ್ರ ಗ್ರಾಮದಲ್ಲಿ ಗಂಗ ಹಾಗೂ ರಾಷ್ಟ್ರಕೂಟರ ಕಾಲಘಟ್ಟಕ್ಕೆ ಸೇರಿದ, ಕ್ರಿ.ಶ. 850ರ ಅವಧಿಯ ಅಪರೂಪದ 'ಹುಲಿಬೇಟೆ ವೀರಗಲ್ಲು' ಪತ್ತೆಯಾಗಿದೆ. ಸುಮಾರು 8 ಅಡಿ ಉದ್ದ ಹಾಗೂ 2.5 ಅಡಿ ಅಗಲ ಇರುವ ಈ ವೀರಗಲ್ಲು, ರೈತ ರಂಗಸ್ವಾಮಯ್ಯ ತಮ್ಮ ಜಮೀನಿನಲ್ಲಿದ್ದ ನೀಲಗಿರಿ ಮರಗಳನ್ನು ಜೆಸಿಬಿ ಯಂತ್ರದ ಮೂಲಕ ತೆರವುಗೊಳಿಸುವ ವೇಳೆ ಪತ್ತೆಯಾಗಿದೆ. ಇದರ ಐತಿಹಾಸಿಕ ಮಹತ್ವವನ್ನು ಅರಿತ ರಂಗಸ್ವಾಮಯ್ಯ ಅವರು ಸ್ಥಳೀಯ ಪತ್ರಕರ್ತ ಹಾಗೂ ಇತಿಹಾಸಾಸಕ್ತ ವಿಜಯಕುಮಾರ್ ಹೊಸಪಾಳ್ಯ ಅವರಿಗೆ


ಉದಯವಾಹಿನಿ ಚಿತ್ರ

ಮಾಹಿತಿ ನೀಡಿದ್ದಾರೆ. ರಂಗಸ್ವಾಮಯ್ಯ ಅವರ ಪುತ್ರ ಅಶೋಕ್ ಅವರ ಸಹಾಯದಿಂದ ವಿಜಯಕುಮಾರ್ ಅವರು ಇತಿಹಾಸಕಾರರಾದ ಬಾಳಸುಬ್ರಹ್ಮಣ್ಯ ಜಿ. ರಾವ್ ಹಾಗೂ ಡಾ. ವೇದಾವತಿ ಎಸ್ ಅವರಿಗೆ ಮಾಹಿತಿ ನೀಡಿದ್ದು, ಅವರು ಇದನ್ನು ವೀರಗಲ್ಲು ಎಂದು ದೃಢಪಡಿಸಿದರು.ಬಳಿಕ ತಜ್ಞರಾದ ಕೆ. ಧನಪಾಲ್, ನರೇಂದ್ರ ಎಂ. ಹಾಗೂ ಶಾಂತಕುಮಾರ್ ಸ್ಥಳ ಪರಿಶೀಲನೆ ನಡೆಸಿ ಅದರ ಐತಿಹಾಸಿಕ ಮಹತ್ವವನ್ನು ಖಚಿತಪಡಿಸಿದರು.

ಈ ವೀರಗಲ್ಲಿನ ಮೇಲಿನ ಶಾಸನವು ಹಳೆಗನ್ನಡ ಲಿಪಿಯಲ್ಲಿದ್ದು, ಶಾಸನದಲ್ಲಿ ನಿಖರವಾದ ವರ್ಷ ಉಲ್ಲೇಖಿಸಿಲ್ಲ.

ಆದರೆ, ಲಿಪಿಯ ಶೈಲಿಯನ್ನು ಆಧರಿಸಿ ಇದು ಗಂಗ ರಾಷ್ಟ್ರಕೂಟರ ಆಳ್ವಿಕೆಯ ಕ್ರಿ.ಶ. 850ರ ಕಾಲಘಟ್ಟಕ್ಕೆ ಸೇರಿದೆ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

# ಪೊಲೀಸ್ ವ್ಯವಸ್ಥೆಗೆ ಮೇಜರ್ ಸರ್ಜರಿ; ಶೀಘ್ರದಲ್ಲೇ ಮೂರು ಭಾಗ

• ಉದಯವಾಹಿನಿ, ಬೆಂಗಳೂರು

ರಾಜಧಾನಿಯ ಭೌಗೋಳಿಕ ವಿಸ್ತರಣೆ ಮತ್ತು ಜನಸಂಖ್ಯೆ ಹೆಚ್ಚಳದ ಹಿನ್ನೆಲೆಯಲ್ಲಿ, ಬೆಂಗಳೂರು ಪೊಲೀಸ್ ವ್ಯವಸ್ಥೆಯನ್ನು ಸಂಪೂರ್ಣವಾಗಿ ಮರುಸಂಘಟಿಸಲು ರಾಜ್ಯ ಸರ್ಕಾರ ಮಹತ್ವದ ಮಾಸ್ಟರ್ ಪ್ಲ್ಯಾನ್ ಸಿದ್ಧಪಡಿಸುತ್ತಿದೆ. ಸುಮಾರು 1,000 ಚದರ ಕಿಲೋಮೀಟರ್‌ಗಿಂತಲೂ ಅಧಿಕ ವ್ಯಾಪ್ತಿ ಹೊಂದಿರುವ ಬೆಂಗಳೂರು ಪೊಲೀಸ್ ಇಲಾಖೆಯನ್ನು ಆಡಳಿತಾತ್ಮಕ ಅನುಕೂಲಕ್ಕಾಗಿ ಪೂರ್ವ (ಐಟಿ ಕಾರಿಡಾರ್ ಒಳಗೊಂಡಂತೆ) ಮತ್ತು ಪಶ್ಚಿಮ ವಲಯಗಳಾಗಿ ಪ್ರತ್ಯೇಕ ಕಮಿಷನರೇಟ್ ಮಾಡಲು ಉನ್ನತ ಮಟ್ಟದ ಚಿಂತನೆ ನಡೆದಿದೆ ಎಂದು ತಿಳಿದುಬಂದಿದೆ. ಮೂಲಗಳ ಪ್ರಕಾರ, ಪುನಾರಚನೆಯಲ್ಲಿ ಎರಡು ಪ್ರಮುಖ ಅಂಶಗಳಿಗೆ ಆದ್ಯತೆ ನೀಡಲಾಗುತ್ತಿದೆ. ಮೊದಲನೆಯದಾಗಿ ಭೌಗೋಳಿಕವಾಗಿ ಹೊಂದಿಕೊಂಡ ಪ್ರದೇಶಗಳನ್ನು ಒಂದೇ ಘಟಕವಾಗಿ ರೂಪಿಸುವುದು, ಎರಡನೆಯದಾಗಿ ಪ್ರತಿಯೊಂದು ಘಟಕಕ್ಕೂ ತುರ್ತು ಪರಿಸ್ಥಿತಿಗಳಿಗೆ ತಕ್ಷಣ ಸ್ಪಂದಿಸಲು ಅಗತ್ಯ ಸಿಬ್ಬಂದಿ ಮತ್ತು ಮೂಲಸೌಕರ್ಯ ಕಲ್ಪಿಸುವುದು.

ಈ ಸಂಬಂಧ ಮೂರು-ನಾಲ್ಕು ಮಾದರಿಗಳನ್ನು ಸರ್ಕಾರ ಪರಿಶೀಲಿಸುತ್ತಿದೆ. ಒಂದು ಮಾದರಿಯಲ್ಲಿ ನಗರವನ್ನು ಪೂರ್ವ ಮತ್ತು ಪಶ್ಚಿಮ ವಲಯಗಳಾಗಿ ವಿಭಜಿಸುವ ಚಿಂತನೆ ಇದೆ.

ಪೂರ್ವ ವಲಯದಲ್ಲಿ ವಿಮಾನ ನಿಲ್ದಾಣದಿಂದ ಎಲೆಕ್ಟ್ರಾನಿಕ್ ಸಿಟಿವರೆಗೆ ಹರಡಿರುವ ಐಟಿ ಕಾರಿಡಾರ್ ಒಳಗೊಂಡಿರಲಿದ್ದು, ಪಶ್ಚಿಮ ವಲಯದಲ್ಲಿ ಉತ್ತರ, ದಕ್ಷಿಣ ಹಾಗೂ ಕೇಂದ್ರ ವಿಭಾಗಗಳು ಸೇರಲಿವೆ.

# ಬೆಂಗಳೂರಿನ 37 ತಾಲ್ಲೂಕುಗಳಲ್ಲಿ ತೀವ್ರ ಬರ ಪರಿಸ್ಥಿತಿ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ವಿಭಾಗದ 37 ತಾಲ್ಲೂಕುಗಳು ತೀವ್ರ ಮಳೆ ಕೊರತೆಯಿಂದ ಗಂಭೀರ ಬರ ಪರಿಸ್ಥಿತಿಯನ್ನು ಎದುರಿಸುತ್ತಿವೆ ಎಂದು ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ಮನೋಜ್ ಕುಮಾರ್ ಮೀನಾ ತಿಳಿಸಿದ್ದಾರೆ. ಚಿತ್ರದುರ್ಗದಲ್ಲಿ ನಡೆದ ಬೆಂಗಳೂರು ಪ್ರಾದೇಶಿಕ ವಿಭಾಗ ಮಟ್ಟದ ಅಭಿವೃದ್ಧಿ ಪರಿಶೀಲನಾ ಸಭೆಯಲ್ಲಿ ಮಳೆ ಕೊರತೆ ಹಾಗೂ ಬರ ಪರಿಸ್ಥಿತಿ ಕುರಿತ ವರದಿ ಮಂಡಿಸಿದ ಅವರು, ಬೆಂಗಳೂರು ವಿಭಾಗದ ಜಿಲ್ಲೆಗಳಲ್ಲೂ ಸಾಮಾನ್ಯಕ್ಕಿಂತ ಕಡಿಮೆ ಮಳೆಯಾಗಿದೆ ಎಂದು ಹೇಳಿದರು. ಬೆಂಗಳೂರು ವಿಭಾಗದಲ್ಲಿ ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ದಕ್ಷಿಣ (ರಾಮನಗರ), ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಚಿತ್ರದುರ್ಗ, ದಾವಣಗೆರೆ ಹಾಗೂ ಶಿವಮೊಗ್ಗ ಸೇರಿದಂತೆ ಒಟ್ಟು ಒಂಬತ್ತು ಜಿಲ್ಲೆಗಳು ಸೇರಿವೆ.

ವಿಭಾಗದ 57 ತಾಲ್ಲೂಕುಗಳ ಪೈಕಿ 43 ತಾಲ್ಲೂಕುಗಳು ತೀವ್ರ ಮಳೆ ಕೊರತೆಯ ವ್ಯಾಪ್ತಿಗೆ ಬಂದಿವೆ. ಅವುಗಳಲ್ಲಿ 37 ತಾಲ್ಲೂಕುಗಳಲ್ಲಿ ಸತತ ಮೂರು ವಾರಗಳಿಂದ ತೀವ್ರ ಮಳೆ ವ್ಯತ್ಯಾಸ ಅಥವಾ ತೀವ್ರ ಶುಷ್ಕ ಹವಾಮಾನ ದಾಖಲಾಗಿದೆ ಎಂದು ಮೀನಾ ಹೇಳಿದರು.

ಜುಲೈ ಅಂತ್ಯದ ವೇಳೆಗೆ ರಾಜ್ಯಾದ್ಯಂತ ಈ ಸಂಖ್ಯೆ 100 ತಾಲ್ಲೂಕುಗಳಿಗೆ ಏರಿಕೆಯಾಗುವ ಆತಂಕವಿದೆ ಎಂದ ಅವರು, 57 ತಾಲ್ಲೂಕುಗಳಲ್ಲಿ ಬಿತ್ತನೆ ಪ್ರಮಾಣ ಶೇ.75ಕ್ಕಿಂತ ಕಡಿಮೆಯಿದ್ದು, 52 ತಾಲ್ಲೂಕುಗಳಲ್ಲಿ ಮಣ್ಣಿನ ತೇವಾಂಶ ಗಣನೀಯವಾಗಿ ಕುಸಿದಿದೆ. ಅವುಗಳಲ್ಲಿ 28 ತಾಲ್ಲೂಕುಗಳು ತೀವ್ರ ತೇವಾಂಶ ಕೊರತೆಯನ್ನು ಎದುರಿಸುತ್ತಿವೆ ಎಂದು ಮಾಹಿತಿ ನೀಡಿದರು. ರಾಜ್ಯದ ಪ್ರಮುಖ ಜಲಾಶಯಗಳಲ್ಲಿ ಪ್ರಸ್ತುತ ಒಟ್ಟು ಶೇ.48ರಷ್ಟು ಮಾತ್ರ ನೀರು ಸಂಗ್ರಹವಾಗಿದೆ ಎಂದು ಅವರು ತಿಳಿಸಿದರು.

# ವಿದ್ಯಾರ್ಥಿಗಳ ಒತ್ತಡದಿಂದ ಧರ್ಮೇಂದ್ರ ಪ್ರಧಾನ್ ರಾಜೀನಾಮೆ: ಪ್ರಿಯಾಂಕ್ ಖರ್ಗೆ

## ರಾಷ್ಟ್ರವಿರೋಧಿ ಶಕ್ತಿಗಳಿಗೆ ಲಾಭವಾಗದಂತೆ ತಡೆಯಲು ರಾಜೀನಾಮೆ ನೀಡುತ್ತಿದ್ದೇನೆ

## ದೇಶದ ವಿದ್ಯಾರ್ಥಿಗಳ ಹೋರಾಟದಿಂದಾಗಿ ಅವರು ಬಲವಂತವಾಗಿ ರಾಜೀನಾಮೆ ನೀಡಬೇಕಾಯಿತು ಎಂಬುದು ಸ್ಪಷ್ಟ

• ಉದಯವಾಹಿನಿ, ಬೆಂಗಳೂರು

ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ಕುರಿತು ಯಾವುದೇ ಪಶ್ಚಾತ್ತಾಪ ವ್ಯಕ್ತಪಡಿಸಿಲ್ಲ ಹಾಗೂ ಹೊಣೆಗಾರಿಕೆಯನ್ನೂ ಒಪ್ಪಿಕೊಂಡಿಲ್ಲ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಆರೋಪಿಸಿದ್ದಾರೆ. ದೇಶಾದ್ಯಂತ ವಿದ್ಯಾರ್ಥಿಗಳು ನಡೆಸಿದ ನಿರಂತರ ಪ್ರತಿಭಟನೆಗಳ ಒತ್ತಡದಿಂದಲೇ ಪ್ರಧಾನ್ ರಾಜೀನಾಮೆ ನೀಡಿದರು ಎಂದು ಅವರು ಹೇಳಿದರು.

ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ವಿರುದ್ಧ ರಾಷ್ಟ್ರ ರಾಜಧಾನಿ ಸೇರಿದಂತೆ ದೇಶದ ವಿವಿಧ ಭಾಗಗಳಲ್ಲಿ ನಡೆದ ಭಾರೀ ಪ್ರತಿಭಟನೆಗಳ ಹಿನ್ನೆಲೆಯಲ್ಲಿ ಧರ್ಮೇಂದ್ರ ಪ್ರಧಾನ್ ಕೇಂದ್ರ ಶಿಕ್ಷಣ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಪ್ರಿಯಾಂಕ್ ಖರ್ಗೆ, ಪ್ರಧಾನ್ ಅವರ ರಾಜೀನಾಮೆ ಪತ್ರದಲ್ಲಿ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ಹೊಣೆಗಾರಿಕೆಯನ್ನು ಒಪ್ಪಿಕೊಂಡಿರುವ ಯಾವುದೇ ಉಲ್ಲೇಖವಿಲ್ಲ, ಬದಲಿಗೆ, ರಾಷ್ಟ್ರವಿರೋಧಿ ಶಕ್ತಿಗಳು ಪರಿಸ್ಥಿತಿಯ ದುರುಪಯೋಗ ಮಾಡಿಕೊಳ್ಳದಂತೆ ತಡೆಯಲು ರಾಜೀನಾಮೆ ನೀಡುತ್ತಿರುವುದಾಗಿ ಅವರು ಸಮರ್ಥಿಸಿಕೊಂಡಿದ್ದಾರೆ ಎಂದು ಆರೋಪಿಸಿದರು.

**1** 3ರಂದು ನೀಟ್ ಪರೀಕ್ಷೆ ನಡೆದಿದ್ದು
**2** ಮೇ 7ರಂದು ಪ್ರಶ್ನೆಪತ್ರಿಕೆ ಸೋರಿಕೆ
**3** ಮೇ 15ರಿಂದ ಜುಲೈ 25ರವರೆಗೆ

ಅವರು ಪ್ರಶ್ನೆಪತ್ರಿಕೆ ಸೋರಿಕೆಯ ಹೊಣೆ ಹೊತ್ತು ರಾಜೀನಾಮೆ ನೀಡುತ್ತಿದ್ದೇನೆ ಎಂದು ಹೇಳುತ್ತಿಲ್ಲ. ರಾಷ್ಟ್ರವಿರೋಧಿ ಶಕ್ತಿಗಳಿಗೆ ಲಾಭವಾಗದಂತೆ ತಡೆಯಲು ರಾಜೀನಾಮೆ ನೀಡುತ್ತಿದ್ದೇನೆ ಎಂದು ಹೇಳುತ್ತಿದ್ದಾರೆ ಎಂದು ಟೀಕಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರು ಸಂಸತ್ತಿಗೆ ಬಂದು ವಿದ್ಯಾರ್ಥಿಗಳ ಕ್ಷಮೆ ಯಾಚಿಸಬೇಕು ಹಾಗೂ ಶಿಕ್ಷಣ ಕ್ಷೇತ್ರದ ಸುಧಾರಣೆಗೆ ಸರ್ಕಾರದ ಸ್ಪಷ್ಟ ಕಾರ್ಯಯೋಜನೆಯನ್ನು ಪ್ರಕಟಿಸಬೇಕು ಎಂದು ಮಲ್ಲಿಕಾರ್ಜುನ ಖರ್ಗೆ ಒತ್ತಾಯಿಸಿದರು. ಘಟನೆಗಳ ಕ್ರಮವನ್ನು ವಿವರಿಸಿದ ಮಲ್ಲಿಕಾರ್ಜುನ ಖರ್ಗೆ, ಮೇ 3ರಂದು ನೀಟ್ ಪರೀಕ್ಷೆ ನಡೆದಿದ್ದು, ಮೇ 7ರಂದು ಪ್ರಶ್ನೆಪತ್ರಿಕೆ ಸೋರಿಕೆಯ ಆರೋಪಗಳು ಕೇಳಿಬಂದವು. ಮೇ 8ರಂದು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಎನ್‌ಟಿಎ) ಪೊಲೀಸರನ್ನು ಸಂಪರ್ಕಿಸಿತು. ಮೇ 15ರಂದು ಧರ್ಮೇಂದ್ರ ಪ್ರಧಾನ್ ಸಾರ್ವಜನಿಕವಾಗಿ ಸೋರಿಕೆಯನ್ನು ಒಪ್ಪಿಕೊಂಡರೂ, ಜುಲೈ 25ರಂದು ರಾಜೀನಾಮೆ ನೀಡಿದರು ಎಂದು ಹೇಳಿದರು. ಪ್ರವೇಶ ಪ್ರಕ್ರಿಯೆ ವಿಳಂಬದಿಂದ ಲಕ್ಷಾಂತರ ವಿದ್ಯಾರ್ಥಿಗಳು ಅನಿಶ್ಚಿತತೆಗೆ ಒಳಗಾಗಿದ್ದು, ಸುಮಾರು 20 ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಹಾಗೂ ಅನೇಕರು ಉಪವಾಸ ಸತ್ಯಾಗ್ರಹ ನಡೆಸಿದ್ದರೂ ಸರ್ಕಾರ ಕ್ರಮ ಕೈಗೊಳ್ಳಲು ವಿಳಂಬ ಮಾಡಿದೆ ಎಂದು ಅವರು ಆರೋಪಿಸಿದರು.


ಉದಯವಾಹಿನಿ ಚಿತ್ರ

ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆ ಆತ್ಮಸಾಕ್ಷಿಯ ಪ್ರೇರಣೆಯಿಂದಲೂ ಅಲ್ಲ, ಹೊಣೆಗಾರಿಕೆ ಸ್ವೀಕರಿಸಿದ್ದರಿಂದಲೂ ಅಲ್ಲ. ದೇಶದ ವಿದ್ಯಾರ್ಥಿಗಳ ಹೋರಾಟದಿಂದಾಗಿ ಅವರು ಬಲವಂತವಾಗಿ ರಾಜೀನಾಮೆ ನೀಡಬೇಕಾಯಿತು ಎಂಬುದು ಸ್ಪಷ್ಟ ಎಂದು ಹೇಳಿದರು.- ಪ್ರಿಯಾಂಕ್ ಖರ್ಗೆ

ಪ್ರಧಾನಿ ಸಂಸತ್ತಿಗೆ ಬಂದು ವಿದ್ಯಾರ್ಥಿಗಳಿಗೆ ಉತ್ತರ ನೀಡಬೇಕು. ಅವರ ಭವಿಷ್ಯಕ್ಕಾಗಿ ಸರ್ಕಾರದ ರೂಪುರೇಷೆ ಏನು? ವಿದ್ಯಾರ್ಥಿಗಳ ಮೇಲೆ ಲಾಠಿಚಾರ್ಜ್ ಮತ್ತು ಅಶ್ರುವಾಯು ಪ್ರಯೋಗಕ್ಕೆ ಆದೇಶ ನೀಡಿದ್ದು ಯಾರು? ಈ ಪ್ರಶ್ನೆಗಳಿಗೆ ಸಂಸತ್ತಿನಲ್ಲಿ ಉತ್ತರ ಸಿಗಬೇಕು ಎಂದು ಹೇಳಿದರು.- ಪ್ರಿಯಾಂಕ್ ಖರ್ಗೆ

**ಯಾವುದೇ ಪಶ್ಚಾತ್ತಾಪ ವ್ಯಕ್ತಪಡಿಸಿಲ್ಲ**

ಮೇ 15ರಿಂದ ಜುಲೈ 25ರವರೆಗೆ, ಅಂದರೆ ಮೂರು ತಿಂಗಳ ನಂತರ ಪ್ರಧಾನ್ ಪ್ರಶ್ನೆಪತ್ರಿಕೆ ಸೋರಿಕೆ ವಿಚಾರದಲ್ಲಿ ರಾಜೀನಾಮೆ ನೀಡಿರುವುದನ್ನು ಅವರು ಪ್ರಶ್ನಿಸಿದರು. ಪ್ರಶ್ನೆಪತ್ರಿಕೆ ಸೋರಿಕೆ ನಡೆದಿದೆ ಎಂದು ಮೇ ತಿಂಗಳಲ್ಲೇ ಒಪ್ಪಿಕೊಂಡಿದ್ದರೂ, ಕೇಂದ್ರ ಸರ್ಕಾರ ಈ ವಿವಾದದ ಬಗ್ಗೆ ಯಾವುದೇ ಪಶ್ಚಾತ್ತಾಪ ವ್ಯಕ್ತಪಡಿಸಿಲ್ಲ ಎಂದು ಆರೋಪಿಸಿದರು.

### 3 ತಿಂಗಳು ಆದ ಮೇಲೆ ಈ ಸರ್ಕಾರ ಕುಂಭಕರ್ಣ ನಿದ್ದೆಯಿಂದ ಎದ್ದಿದೆ: ಕೇಂದ್ರಕ್ಕೆ ಪ್ರಿಯಾಂಕ್ ಖರ್ಗೆ ಟಾಂಗ್

ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣದಲ್ಲಿ ಕೇಂದ್ರ ಸರ್ಕಾರ ಮೂರು ತಿಂಗಳ ಬಳಿಕ ಎಚ್ಚೆತ್ತುಕೊಂಡಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಟೀಕಿಸಿದ್ದಾರೆ. ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಿರುವುದು ತಡವಾಗಿ ತೆಗೆದುಕೊಂಡ ನಿರ್ಧಾರ ಎಂದು ಅವರು ಹೇಳಿದ್ದಾರೆ.

ಮೇ 4ರಂದೇ ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆಯ ಬಗ್ಗೆ ಮಾಹಿತಿ ಬಂದಿತ್ತು. ಜೂನ್‌ನಲ್ಲಿ ಮರು ಪರೀಕ್ಷೆ ನಡೆಸಿ, ಜುಲೈನಲ್ಲಿ ಫಲಿತಾಂಶ ಪ್ರಕಟಿಸಲಾಯಿತು. ಈ ನಡುವೆ ಅನೇಕ ವಿದ್ಯಾರ್ಥಿಗಳು ವೈದ್ಯಕೀಯ ಶಿಕ್ಷಣದ ಕನಸನ್ನು ಬಿಟ್ಟು ಇಂಜಿನಿಯರಿಂಗ್ ಸೇರಿದಂತೆ ಬೇರೆ ಕೋರ್ಸ್‌ಗಳನ್ನು ಆಯ್ಕೆ ಮಾಡಿಕೊಳ್ಳಬೇಕಾಯಿತು'' ಎಂದು ಖರ್ಗೆ ಹೇಳಿದರು. 20ಕ್ಕೂ ಹೆಚ್ಚು ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಲಕ್ಷಾಂತರ ಯುವಕರು ಬೀದಿಗಿಳಿದು ಪ್ರತಿಭಟನೆ ನಡೆಸಿದ್ದಾರೆ. ಆದರೆ ಪ್ರತಿಭಟನೆಯಲ್ಲಿ ಭಾಗವಹಿಸಿದವರನ್ನೇ ದೇಶದ್ರೋಹಿಗಳು ಎಂದು ಕರೆಯಲಾಯಿತು. ಅವರ ಮೇಲೆ ಲಾಠಿಚಾರ್ಜ್ ಕೂಡ ಮಾಡಲಾಯಿತು. ಈಗಲಾದರೂ ಸರ್ಕಾರ ಎಚ್ಚೆತ್ತುಕೊಂಡಿರುವುದು ಸಂತೋಷದ ವಿಚಾರ'' ಎಂದರು. ಆತ್ಮಹತ್ಯೆ ಮಾಡಿಕೊಂಡ ವಿದ್ಯಾರ್ಥಿಗಳ ಕುಟುಂಬಗಳಿಗೆ ಸೂಕ್ತ ಪರಿಹಾರ ನೀಡಬೇಕು ಎಂದು ಅವರು ಒತ್ತಾಯಿಸಿದರು. ಜೊತೆಗೆ, ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ಪ್ರಧಾನಿ ನರೇಂದ್ರ ಮೋದಿ ಈ ವಿಚಾರವಾಗಿ ಸಂಸತ್ತಿನಲ್ಲಿ ಮಾತನಾಡಿ, ದೇಶದ ಯುವಕರ ಕ್ಷಮೆ ಕೇಳಬೇಕು ಮತ್ತು ಮುಂದೆ ಯಾವ ಕ್ರಮ ಕೈಗೊಳ್ಳಲಾಗುತ್ತದೆ ಎಂಬುದನ್ನು ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು.

ರಾಜ್ಯ ಬಿಜೆಪಿ ನಾಯಕರು ಪ್ರತಿಭಟನಾಕಾರರ ವಿರುದ್ಧ ಕಠಿಣ ಹೇಳಿಕೆಗಳನ್ನು ನೀಡಿದರು. ಆದರೆ ಕೇಂದ್ರದ ನಾಯಕರು ಪ್ರತಿಭಟನಾ ನಿರತರ ಜೊತೆ ಮೂರು ಬಾರಿ ಮಾತುಕತೆ ನಡೆಸಿದ್ದಾರೆ. ಇದು ಅವರ ನಡುವಿನ ವ್ಯತ್ಯಾಸವನ್ನು ತೋರಿಸುತ್ತದೆ'' ಎಂದು ಖರ್ಗೆ ಹೇಳಿದರು.

ದೇಶವಿರೋಧಿ ಶಕ್ತಿಗಳು ಈ ಹೋರಾಟವನ್ನು ದುರ್ಬಳಕೆ ಮಾಡಿಕೊಳ್ಳಬಾರದು ಎಂಬ ಕಾರಣಕ್ಕೆ ರಾಜೀನಾಮೆ ನೀಡಿದ್ದೇನೆ ಎಂದು ಧರ್ಮೇಂದ್ರ ಪ್ರಧಾನ್ ಹೇಳಿದ್ದಾರೆ. ಆದರೆ ಈ ವಿಚಾರದಲ್ಲಿ ಅಮಿತ್ ಶಾ ಇನ್ನೂ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ಅವರು ಕೂಡ ತಮ್ಮ ಹೊಣೆಗಾರಿಕೆ ನಿರ್ವಹಿಸಬೇಕು ಎಂದು ಹೇಳಿದರು.

ಕೊನೆಯಲ್ಲಿ, ಈ ಹೋರಾಟದಲ್ಲಿ ಭಾಗವಹಿಸಿದ ಯುವ ಸಮುದಾಯಕ್ಕೆ ಅಭಿನಂದನೆಗಳು. ಪ್ರಜಾಪ್ರಭುತ್ವದಲ್ಲಿ ಜನರ ಧ್ವನಿಯೇ ಮುಖ್ಯ'ಎಂದು ಪ್ರಿಯಾಂಕ್ ಖರ್ಗೆ ಹೇಳಿದರು.

# ಧರ್ಮೇಂದ್ರ ಪ್ರಧಾನ್ ಸ್ವಯಂಪ್ರೇರಿತವಾಗಿ ರಾಜೀನಾಮೆ ನೀಡಿಲ್ಲ ಡಿ.ಕೆ. ಶಿವಕುಮಾರ್


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಸ್ವಯಂಪ್ರೇರಿತವಾಗಿ ರಾಜೀನಾಮೆ ನೀಡಿಲ್ಲ. ದೇಶದ ವಿದ್ಯಾರ್ಥಿಗಳು ಮತ್ತು ಯುವಜನರ ಧ್ವನಿಯಿಂದ ಅವರು ರಾಜೀನಾಮೆ ನೀಡುವಂತೆ ಮಾಡಲಾಯಿತು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ಬೆಂಗಳೂರಿನ ಜವಹರಲಾಲ ನೆಹರೂ ತಾರಾಲಯದಲ್ಲಿ ರಾಷ್ಟ್ರೀಯ ಸೈನಿಕ ಸ್ಮಾರಕದಲ್ಲಿ ಆಯೋಜಿಸಲಾಗಿದ್ದ ಕಾರ್ಗಿಲ್ ವಿಜಯ್ ದಿವಸ್ ಕಾರ್ಯಕ್ರಮದಲ್ಲಿ ಭಾಗವಹಿಸಿದ ನಂತರ ಸುದ್ದಿಗಾರರ ಜೊತೆ ಮಾತನಾಡಿದರು. 1999ರ ಕಾರ್ಗಿಲ್ ಯುದ್ಧದಲ್ಲಿ ಭಾರತೀಯ ಸೇನೆಯು ಸಾಧಿಸಿದ ವಿಜಯವನ್ನು ಮತ್ತು ದೇಶಕ್ಕಾಗಿ ಪ್ರಾಣತ್ಯಾಗ ಮಾಡಿದ ವೀರಯೋಧರ ಬಲಿದಾನವನ್ನು ಸ್ಮರಿಸಲು ಈ ದಿನವನ್ನು ಆಚರಿಸಲಾಗುತ್ತದೆ. ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಹುತಾತ್ಮ ಯೋಧರಿಗೆ ಪುಷ್ಪನಮನ ಸಲ್ಲಿಸಿ ಗೌರವ ಸಮರ್ಪಿಸಿದರು.

ಸಮಾರಂಭದಲ್ಲಿ ಮಿಲಿಟರಿ ಸಿಬ್ಬಂದಿಯು ಹುತಾತ್ಮ ಸೈನಿಕರಿಗೆ ಗೌರವ ವಂದನೆ ಸಲ್ಲಿಸಿದರು. ಸಲಾಮಿ ಶಸ್ತ್ರ ಮತ್ತು ಶೋಕ ಶಸ್ತ್ರದೊಂದಿಗೆ ದೇಶಕ್ಕಾಗಿ ಪ್ರಾಣತ್ಯಾಗ ಮಾಡಿದ ವೀರಯೋಧರ ಮಹಾನ್ ತ್ಯಾಗವನ್ನು ಸ್ಮರಿಸಲಾಯಿತು. ವಿದ್ಯಾರ್ಥಿಗಳೇ ದೇಶದ ಭವಿಷ್ಯವಾಗಿದ್ದು, ಅವರ ಹಿತಾಸಕ್ತಿ ಮತ್ತು ಕಾಳಜಿಯನ್ನು ಗೌರವಿಸಿ ರಕ್ಷಿಸಬೇಕು ಎಂದು ಹೇಳಿದರು.


# ಅಮಿತ್ ಶಾ ಕೂಡ ರಾಜಿನಾಮೆ ನೀಡಬೇಕು; ಉಮರ್ ಖಾಲಿದ್ ಪೋಸ್ಟರ್ ಪ್ರದರ್ಶಿಸಿದರೆ ತಪ್ಪೇನು; ಇದೇನು ಪಾಕಿಸ್ತಾನವೇ?

• ಉದಯವಾಹಿನಿ, ಬೆಂಗಳೂರು

ನೀಟ್ ಪ್ರತಿಭಟನೆ ವೇಳೆ ಉಮರ್ ಖಾಲಿದ್ ಪರ ಪೋಸ್ಟರ್ ಪ್ರದರ್ಶಿಸಿದ್ದನ್ನು ಕೆಪಿಸಿಸಿ ಕಾರ್ಯಾಧ್ಯಕ್ಷ ಬಿ.ಕೆ. ಹರಿಪ್ರಸಾದ್ ಸಮರ್ಥಿಸಿಕೊಂಡಿದ್ದು, ಇದರಲ್ಲಿ ತಪ್ಪೇನಿದೆ ಎಂದು ಪ್ರಶ್ನಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, 2020ರ ದೆಹಲಿ ಗಲಭೆ ಪ್ರಕರಣದ ಆರೋಪಿ ಉಮರ್ ಖಾಲಿದ್ ಅವರನ್ನು ಐದು ವರ್ಷಗಳಿಂದ ಜೈಲಿನಲ್ಲಿಟ್ಟಿದ್ದೀರಿ, ಸೂಕ್ತ ಚಾರ್ಜ್‌ಶೀಟ್ ಏಕೆ ಹಾಕಿಲ್ಲ? ಇದೇನು ಪಾಕಿಸ್ತಾನವೇ? ಕೇಂದ್ರ ಸರ್ಕಾರವು ಪಾಕಿಸ್ತಾನದ ಮಾದರಿಯನ್ನು ಅನುಸರಿಸುತ್ತಿದೆ ಎಂದು ಸರ್ಕಾರದ ವಿರುದ್ಧ ಹರಿದಾಯ್ದಿದ್ದಾರೆ.

ನಗರದಲ್ಲಿ ನಡೆದ ನೀಟ್ ಹೋರಾಟದ ವೇಳೆ ಕೆಲವರು ಎಂಬ ಬರಹಗಳಿದ್ದ ಪೋಸ್ಟರ್ ಹಾಗೂ ಉಮರ್ ಖಾಲಿದ್ ಮತ್ತು ಶಾರ್ಜೀಲ್ ಇಮಾಮ್ ಪರ ಘೋಷಣೆಗಳಿದ್ದ ಪೋಸ್ಟರ್‌ಗಳನ್ನು ಪ್ರದರ್ಶಿಸಿದ್ದರು.

ಇದನ್ನು ಗಮನಿಸಿದ ಸ್ಥಳೀಯ ಪೊಲೀಸರು ಪರಿಸ್ಥಿತಿ ವಿಕೋಪಕ್ಕೆ ಹೋಗದಂತೆ ತಕ್ಷಣವೇ ಆ ಪೋಸ್ಟರ್‌ಗಳನ್ನು ವಶಕ್ಕೆ ಪಡೆದರು.


ಉದಯವಾಹಿನಿ ಚಿತ್ರ

ಈ ವೇಳೆ ಕ್ಷಣಕಾಲ ಗೊಂದಲ ಮತ್ತು ಬಿಗುವಿನ ವಾತಾವರಣ ನಿರ್ಮಾಣವಾದರೂ, ಪೊಲೀಸರು ಹಾಗೂ ಆಯೋಜಕರು ಚಾಣಾಕ್ಷತನದಿಂದ ಪರಿಸ್ಥಿತಿ ನಿಭಾಯಿಸಿದ್ದರಿಂದ ಯಾವುದೇ ಅಹಿತಕರ ಘಟನೆ ನಡೆಯದೆ ಪ್ರತಿಭಟನೆ ಶಾಂತಿಯುತವಾಗಿ ಮುಂದುವರಿಯಿತು.

ಮತ್ತೊಂದೆಡೆ, ಉಮರ್ ಖಾಲಿದ್ ಪರ ಪೋಸ್ಟರ್ ಹಿಡಿದು ಬಂದಿದ್ದ ಯುವತಿಗೆ ಪ್ರತಿಭಟನೆಯಲ್ಲಿದ್ದ ಇತರ ವಿದ್ಯಾರ್ಥಿಗಳೇ ನೇರವಾಗಿಯೇ ಕ್ಲಾಸ್ ತೆಗೆದುಕೊಂಡ ಪ್ರಸಂಗವೂ ನಡೆಯಿತು.

ಪರಿಸ್ಥಿತಿ ವಿಕೋಪಕ್ಕೆ ಹೋಗದಂತೆ ತಕ್ಷಣವೇ ಇಂತಹ ಅನಗತ್ಯ ಪೋಸ್ಟರ್‌ಗಳು ಮತ್ತು ವಿಷಯಗಳು ನಮ್ಮ ನೀಟ್ ಪ್ರತಿಭಟನೆಯ ಮೂಲ ಉದ್ದೇಶ ಹಾಗೂ ಹೋರಾಟದ ಹಾದಿಯನ್ನೇ ತಪ್ಪಿಸುತ್ತವೆ ಎಂದು ವಿದ್ಯಾರ್ಥಿಗಳು ಆಕ್ರೋಶ ವ್ಯಕ್ತಪಡಿಸಿದರು.

# ಮರ ಕಡಿಯುವವರಿಗೆ ಕಠಣ ಶಿಕ್ಷೆ ಜಾರಿಯಾಗಬೇಕು

• ಉದಯವಾಹಿನಿ, ಕೆ.ಆರ್.ಪುರ

ನಾವು ಹೆತ್ತ ತಾಯಿಯನ್ನು, ನಮ್ಮ ಮಕ್ಕಳನ್ನು ಹಾಗೂ ಮನುಷ್ಯನನ್ನು ಎಷ್ಟು ಪ್ರೀತಿ ಮಾಡುತ್ತೇವೆಯೋ ಅಷ್ಟೇ ಪ್ರೀತಿಯನ್ನು ಮರಗಳ ಗಿಡಗಳಿಗೆ ಧಾರೆ ಎರೆಯಬೇಕು ಎಂದು ಪದ್ಮಶ್ರೀ ಪ್ರಶಸ್ತಿ ಪುರಸ್ಕೃತೆ ಮಂಜಮ್ಮ ಜೋಗತಿ ಹೇಳಿದರು.

ಮಹದೇವಪುರ ಕ್ಷೇತ್ರದ ಯಮಲೂರಿನಲ್ಲಿ ಮಿಡಿತ ಫೌಂಡೇಶನ್ ಹಾಗೂ ವೃಕ್ಷ ಬಚಾವೋ ಆಂದೋಲನ ಸಮಿತಿ ಹಮ್ಮಿಕೊಂಡಿದ್ದ ಪರಿಸರ ಮಂಜು ಅವರ ವೃಕ್ಷಪುರದ ಮಂಜಣ್ಣ ನಾಟಕ ಕೃತಿ ಲೋಕಾರ್ಪಣೆ ಹಾಗೂ ಸಾಧಕರಿಗೆ ಪರಿಸರ ರತ್ನ, ಪರಿಸರ ಮಿತ್ರ ಪ್ರಶಸ್ತಿ ನೀಡಿ ಮಾತನಾಡಿದರು. ಪ್ರತಿಯೊಂದಕ್ಕೂ ನಾವು ಪ್ರತಿ ಸಲ ನೆರಳು, ಮಳೆ, ಶುದ್ಧ ಗಾಳಿಗೆ ಮರಗಳನ್ನು ಆಶ್ರಯಿಸಿ ಬದುಕುತ್ತೇವೆ. ಆದರೆ ಮನುಷ್ಯ ಪರಿಜ್ಞಾನವಿದ್ದರೂ ಮರಗಳ ಆತ್ಮಕ್ಕೆ, ಶರೀರಕ್ಕೆ ಕೊಡಲಿಯನ್ನು ಹಾಕಿ ಮರ ನಾಶ ಮಾಡುತ್ತ ನಿಷ್ಠುರವಾಗಿದ್ದಾನೆ. ಮರ ಆರೋಗ್ಯದ ಜೊತೆಗೆ ಚೈತನ್ಯವನ್ನು ಕೊಡುತ್ತದೆ ಎಂದರು. ಅರಣ್ಯ ಇಲಾಖೆಯ ಉಪ ಸಂರಕ್ಷಣಾಧಿಕಾರಿ ಎಸ್.ಕೆ.ಆಶಾ, ಮಾತನಾಡಿ, ಪರಿಸರ ಸಂರಕ್ಷಣೆಯಲ್ಲಿ ಸಾರ್ವಜನಿಕರ ಪಾತ್ರವೂ ಬಹಳ ಮುಖ್ಯ. ಪರಿಸರವೊಂದಿಲ್ಲದಿದ್ದರೆ ನಾವು ಉಸಿರಾಡಲು ಸಾಧ್ಯವಾಗುವುದಿಲ್ಲ. ಪರಿಸರ ಸಂರಕ್ಷಣೆ ಮಾಡಿದಿದ್ದರೆ ಮುಂದಿನ ದಿನಗಳಲ್ಲಿ ಪರಿಣಾಮ


ಉದಯವಾಹಿನಿ ಚಿತ್ರ

ಎದುರಿಸಬೇಕಾಗಬಹುದು ಎಂದು ನುಡಿದರು. ಮಿಡಿತ ಫೌಂಡೇಶನ್ ಅಧ್ಯಕ್ಷ ಹಾಗೂ ಸಾಹಿತಿ ಪರಿಸರ ಮಂಜು ಮತನಾಡಿ, ಹೆಣ್ಣಿಗಾದ ದೌರ್ಜನ್ಯಕ್ಕೆ ಸಿಗುವ ಕಠಿಣ ಶಿಕ್ಷೆಯಂತೆ, ಮರ ಕಡಿಯುವವರಿಗೂ ವಿಧಿಸುವ ಬಗ್ಗೆ ಇಲಾಖೆಗೆ ಚಿಂತನೆ ನಡೆಸಬೇಕು ಆಗ ಮರಗಳ ರಕ್ಷಣೆ ಸಾಧ್ಯ ಎಂದು ಹೇಳಿದರು.

ಸಾಧಕರಿಗೆ ಪರಿಸರ ರತ್ನ, ಪರಿಸರ ಮಿತ್ರ, ಅಧಿಕಾರಿಗಳಿಗೆ ಪರಿಸರ ಪುರಸ್ಕಾರ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಈ ಸಂಧರ್ಭದಲ್ಲಿ ಅರಣ್ಯಾಧಿಕಾರಿ ರಮೇಶ್, ಗುಟ್ಟಾ ಮಾರಪ್ಪ, ವೆ. ಅಜಿತ್ ಕುಮಾರ್, ಬೊಮ್ಮನಹಳ್ಳಿ ರಾಜೇಶ್, ಕಾಡುಗುಡಿ ಅಶೋಕ್, ವೈ.ಶ್ರೀನಿವಾಸ್, ಸಂಸ್ಥೆಯ ಆದರ್ಶ್, ಸಿಂಹಾದ್ರಿ, ಶಿವಪ್ಪ, ಸೌಮ್ಯ ಕೃಷ್ಣ ನಾಯ್ಕ್, ಲಕ್ಷ್ಮೀನಾರಾಯಣ, ಸಂತೋಷ್ ಉಪಸ್ಥಿತರಿದ್ದರು.

# ತುರ್ತು ಸೇವೆಗಳ ಆಧುನೀಕರಣಕ್ಕೆ ಸಮಗ್ರ ಯೋಜನೆ ರೂಪಿಸಿ: ಅಧಿಕಾರಿಗಳಿಗೆ ಪ್ರಿಯಾಂಕ್ ಖರ್ಗೆ ಸೂಚನೆ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಭವಿಷ್ಯದ ಅಗತ್ಯಗಳಿಗೆ ಅನುಗುಣವಾಗಿ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಸಾಮರ್ಥ್ಯವನ್ನು ಮತ್ತಷ್ಟು ಬಲಪಡಿಸಲಾಗುವುದು ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಹೇಳಿದರು. ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ (ಕೆಎಸ್‌ಎಫ್‌ಇಎಸ್) ಹಾಗೂ ರಾಜ್ಯ ವಿಪತ್ತು ಪ್ರತಿಕ್ರಿಯೆ ಪಡೆ (ಎಸ್‌ಡಿಆರ್‌ಎಫ್) ಮುಖ್ಯ ಕಚೇರಿಗೆ ಭೇಟಿ ನೀಡಿದ ಅವರು, ಇಲಾಖೆಯ ಸಮಗ್ರ ಆಧುನೀಕರಣಕ್ಕಾಗಿ ಸಮಗ್ರ ಮಾರ್ಗಸೂಚಿ (ರೋಡ್‌ಮ್ಯಾಪ್) ಸಿದ್ಧಪಡಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ಯೋಜನೆಯಲ್ಲಿ ತಂತ್ರಜ್ಞಾನ, ಮೂಲಸೌಕರ್ಯ, ಸಿಬ್ಬಂದಿ, ತರಬೇತಿ ಹಾಗೂ ತುರ್ತು ಪರಿಸ್ಥಿತಿಗಳಿಗೆ ತ್ವರಿತ ಪ್ರತಿಕ್ರಿಯೆ ನೀಡುವ ಸಾಮರ್ಥ್ಯವನ್ನು ಹೆಚ್ಚಿಸುವ ಅಂಶಗಳಿಗೆ ಆದ್ಯತೆ ನೀಡಬೇಕು ಎಂದು ಹೇಳಿದರು.

ಅಗತ್ಯವಿರುವ ಕಡೆ ಹೊಸ ಅಗ್ನಿಶಾಮಕ ಠಾಣೆಗಳನ್ನು ಸ್ಥಾಪಿಸಲಾಗುವುದು. ಬಡ್ತಿ, ಸೇವಾ ನಿಯಮಗಳು ಹಾಗೂ ಸಿಬ್ಬಂದಿ ಕಲ್ಯಾಣಕ್ಕೆ ಸಂಬಂಧಿಸಿದ ಪ್ರಸ್ತಾವನೆಗಳನ್ನು ಸರ್ಕಾರ ಸಕಾರಾತ್ಮಕವಾಗಿ ಪರಿಗಣಿಸಲಿದೆ.

# ಸರ್ಕಾರದೊಂದಿಗೆ ಲಯನ್ಸ್‌ನಂತಹ ಸೇವಾ ಸಂಸ್ಥೆಗಳು ಕೈಜೋಡಿಸಬೇಕು: ಸೌಮ್ಯ ರೆಡ್ಡಿ

• ಉದಯವಾಹಿನಿ, ಬೆಂಗಳೂರು

ಯನ್ಸ್ ಇಂಟರ್‌ನ್ಯಾಷನಲ್ ಜಿಲ್ಲಾ 3170 ವತಿಯಿಂದ 2026=27ನೇ ಸಾಲಿನ 'ಸಿಂಹ ಪರ್ವ' ನೂತನ ಪದಾಧಿಕಾರಿಗಳು ಹಾಗೂ ಸದಸ್ಯರ ಪ್ರತಿಜ್ಞಾವಿಧಿ ಮತ್ತು ಪದಗ್ರಹಣ ಸಮಾರಂಭ ನೆರವೇರಿತು. ಜಿಲ್ಲಾ ಗವರ್ನರ್ ಲಯನ್ ಕೆ. ಈಶ್ವರನ್ ಅವರ ಅಧ್ಯಕ್ಷತೆಯಲ್ಲಿ ನಡೆದ ಸಮಾರಂಭವನ್ನು ಕೆಪಿಸಿಸಿ ರಾಜ್ಯ ಮಹಿಳಾ ಘಟಕದ


ಉದಯವಾಹಿನಿ ಚಿತ್ರ

ಅಧ್ಯಕ್ಷೆ ಸೌಮ್ಯ ರೆಡ್ಡಿ ಉದ್ಘಾಟಿಸಿದರು. ಲಯನ್ಸ್ ಸಂಸ್ಥೆ ವಿಶ್ವದಾದ್ಯಂತ ಮಾನವೀಯ ಸೇವೆಯ ಮೂಲಕ ಸಮಾಜದಲ್ಲಿ ಆಶಾಕಿರಣವಾಗಿ ಕಾರ್ಯನಿರ್ವಹಿಸುತ್ತಿದ್ದು, ಆರೋಗ್ಯ, ಶಿಕ್ಷಣ, ಮಹಿಳಾ ಸಬಲೀಕರಣ ಹಾಗೂ ಪರಿಸರ ಸಂರಕ್ಷಣೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಲ್ಲಿಸುತ್ತಿರುವ ಸೇವೆ ಅನುಕರಣೀಯವಾಗಿದೆ ಎಂದು ಹೇಳಿದರು. ಉತ್ತಮ ಸಮಾಜ ಹಾಗೂ ಸದೃಢ ರಾಷ್ಟ್ರ ನಿರ್ಮಾಣಕ್ಕೆ ಸರ್ಕಾರದೊಂದಿಗೆ ನಾಗರಿಕರು ಮತ್ತು ಲಯನ್ಸ್‌ನಂತಹ ಸೇವಾ ಸಂಸ್ಥೆಗಳು ಕೈಜೋಡಿಸುವುದು ಅಗತ್ಯ ಎಂದು ತಿಳಿಸಿದರು. ಅಧ್ಯಕ್ಷೀಯ ಭಾಷಣ ಮಾಡಿದ ಜಿಲ್ಲಾ ಗವರ್ನರ್ ಲಯನ್ ಕೆ. ಈಶ್ವರನ್ ಅವರು 2026=27ನೇ ಸಾಲಿನ ಕ್ಯಾಬಿನೆಟ್ ತಂಡವಾದ 'ಟೀಮ್ ಅರಿಮಾ'ವನ್ನು ಪರಿಚಯಿಸಿ, ಸೇವೆ, ಸದಸ್ಯತ್ವ ವೃದ್ಧಿ ಹಾಗೂ ನಾಯಕತ್ವ ಅಭಿವೃದ್ಧಿಗೆ ಆದ್ಯತೆ ನೀಡುವ ಸಂಕಲ್ಪವನ್ನು ವ್ಯಕ್ತಪಡಿಸಿದರು.

# 19,984 ಕೋಟಿ ರೂ. ವಂಚನೆ ಆರೋಪದಡಿ ಚಾರ್ಜ್‌ಶೀಟ್ ಸಲ್ಲಿಕೆ!

• ಉದಯವಾಹಿನಿ, ಬೆಂಗಳೂರು

ಆನ್‌ಲೈನ್ ಗೇಮಿಂಗ್ ಆಪ್‌ಗಳ ಮೂಲಕ ಸಾರ್ವಜನಿಕರಿಗೆ ಕೋಟ್ಯಂತರ ರೂಪಾಯಿ ವಂಚಿಸಿದ ಆರೋಪದ ಮೇಲೆ ಗೇಮ್ಸ್‌ಕ್ರಾಫ್ಟ್ ಟೆಕ್ನಾಲಜೀಸ್ ರಮ್ಮಿಟೈಮ್ ಸಂಸ್ಥೆಗಳು ಹಾಗೂ ಅವುಗಳ ಸಂಸ್ಥಾಪಕರ ವಿರುದ್ಧ ಜಾರಿ ನಿರ್ದೇಶನಾಲಯ ಬೆಂಗಳೂರಿನ ವಿಶೇಷ ನ್ಯಾಯಾಲಯದಲ್ಲಿ ಚಾರ್ಜ್‌ಶೀಟ್ ಸಲ್ಲಿಸಿದೆ.

ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆ (ಪಿಎಂಎಲ್‌ಎ) ಅಡಿಯಲ್ಲಿ ದಾಖಲಿಸಲಾದ ಈ ಆರೋಪಪತ್ರದಲ್ಲಿ ವಿಕಾಸ್ ತನೇಜಾ, ಪೃಥ್ವಿರಾಜ್ ಸಿಂಗ್ ಹಾಗೂ ದೀಪಕ್ ಸಿಂಗ್ ಅಹ್ಲಾವತ್ ಅವರ ಹೆಸರನ್ನು ಉಲ್ಲೇಖಿಸಲಾಗಿದೆ.

ತೆಲಂಗಾಣದಲ್ಲಿ ದಾಖಲಾಗಿದ್ದ ವಂಚನೆಗೆ ಸಂಬಂಧಿಸಿದ ಹಲವು ಎಫ್‌ಐಆರ್‌ಗಳ ಆಧಾರದ ಮೇಲೆ ತನಿಖೆ ಆರಂಭಿಸಲಾಗಿತ್ತು ಎಂದು ಇಡಿ ತಿಳಿಸಿದೆ.

# ನಮ್ಮ ಮೆಟ್ರೋ Blue Line ಕಾಮಗಾರಿ ಚುರುಕು

## ನಾಗರಿಕ ಸೌಲಭ್ಯಗಳಿಗೆ ಜಾಗ ಮೀಸಲಿಡದೆ ಬಡಾವಣೆಗಳನ್ನು ಅಭಿವೃದ್ಧಿಪಡಿಸಿರುವುದರಿಂದ ಸಮಸ್ಯೆ ಮತ್ತಷ್ಟು ಗಂಭೀರವಾಗಿದೆ

• ಉದಯವಾಹಿನಿ, ಬೆಂಗಳೂರು

ರಾಜಧಾನಿಯ ಸಂಚಾರ ದಟ್ಟಣೆಗೆ ಪ್ರಮುಖ ಪರಿಹಾರ ಒದಗಿಸಬಲ್ಲ ನಮ್ಮ ಮೆಟ್ರೋದ 'ಬ್ಲೂ ಲೈನ್' ಯೋಜನೆಗೆ ಸಂಬಂಧಿಸಿದಂತೆ ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರು ಬಿಎಂಆರ್‌ಸಿಎಲ್ ಅಧಿಕಾರಿಗಳಿಗೆ ಕಡಕ್ ಸೂಚನೆ ನೀಡಿದ್ದಾರೆ. ಮುಂಬರುವ ಅಕ್ಟೋಬರ್ ತಿಂಗಳಿನಲ್ಲೇ ಈ ಮಾರ್ಗದ ಪ್ರಾಯೋಗಿಕ ಸಂಚಾರವನ್ನು ಆರಂಭಿಸಿ, 2027 ರೊಳಗೆ ವಾಣಿಜ್ಯ ಕಾರ್ಯಾಚರಣೆಯನ್ನು ಪೂರ್ಣಗೊಳಿಸುವಂತೆ ಗಡುವು ವಿಧಿಸಿದ್ದಾರೆ.17 ಕಿ.ಮೀ. ಉದ್ದದ ಹೊರವರ್ತುಲ ರಸ್ತೆ ಅಭಿವೃದ್ಧಿ ಕುರಿತು ನಡೆದ ಸಭೆಯಲ್ಲಿ ಮಾತನಾಡಿದ ಸಚಿವರು, ಕೆ.ಆರ್ .ಪುರಂಸೆಂಟ್ರಲ್ ಸಿಲ್ಕ್ ಬೋರ್ಡ್, ಹೆಣ್ಣೂರು, ಹೆಬ್ಬಾಳ ಹಾಗೂ ವಿಮಾನ ನಿಲ್ದಾಣದವರೆಗೆ ಹಂತ ಹಂತವಾಗಿ 58.19 ಕಿ.ಮೀ. ವ್ಯಾಪ್ತಿಯ ಬ್ಲೂ ಲೈನ್ ಯೋಜನೆ 2024ರೊಳಗೆ ಪೂರ್ಣಗೊಳ್ಳಬೇಕಾಗಿತ್ತು. ಆದರೆ, ಈಗ ಅಕ್ಟೋಬರ್‌ನಲ್ಲಿ ಟ್ರಯಲ್ ರನ್ ಆರಂಭಿಸಿ, 2027ರಲ್ಲಿ ವಾಣಿಜ್ಯ ಸೇವೆ ಆರಂಭಿಸುವಂತೆ ಸೂಚಿಸಲಾಗಿದೆ ಎಂದು ಹೇಳಿದರು.ಹೊರವರ್ತುಲ ರಸ್ತೆಯ 17 ಕಿ.ಮೀ. ವ್ಯಾಪ್ತಿಯ ಮರುಅಭಿವೃದ್ಧಿಗೆ ಸರ್ಕಾರ ರೂ.450 ಕೋಟಿ ಮೀಸಲಿಟ್ಟಿದ್ದು, ಈ ಯೋಜನೆಯನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಲಾಗಿದೆ ಎಂದು


ಉದಯವಾಹಿನಿ ಚಿತ್ರ

ತಿಳಿಸಿದರು. ಕಳೆದ 30 ವರ್ಷಗಳಲ್ಲಿ ಅನಧಿಕೃತ ಬಡಾವಣೆಗಳ ನಿರ್ಮಾಣ, ಕಿರಿದಾದ 20 ಅಡಿ ರಸ್ತೆಗಳಲ್ಲೇ ಬಹುಮಹಡಿ ಕಟ್ಟಡಗಳ ನಿರ್ಮಾಣ ಹಾಗೂ ನಾಗರಿಕ ಸೌಲಭ್ಯಗಳಿಗೆ ಜಾಗ ಮೀಸಲಿಡದೆ ಬಡಾವಣೆಗಳನ್ನು ಅಭಿವೃದ್ಧಿಪಡಿಸಿರುವುದರಿಂದ ಸಮಸ್ಯೆ ಮತ್ತಷ್ಟು ಗಂಭೀರವಾಗಿದೆ. ಆದ್ದರಿಂದ ಈ ಮಾರ್ಗದ ಮರುಅಭಿವೃದ್ಧಿಗೆ ಹೊಸ ದೃಷ್ಟಿಕೋನ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು. ಗ್ರೇಡ್ ಸೆಪರೇಟರ್ ನಿರ್ಮಾಣದಂತಹ ಕೆಲವು ಸಲಹೆಗಳು ದುಬಾರಿಯಾಗಿದ್ದು, ಭೂಸ್ವಾಧೀನವೂ ದೊಡ್ಡ ಸವಾಲಾಗಿದೆ. ಅಲ್ಲದೆ, ಸಂಕೀರ್ಣ ಜಂಕ್ಷನ್‌ಗಳಲ್ಲಿ ವಾಹನ ಸಂಚಾರವನ್ನು ಸುಗಮಗೊಳಿಸುವುದು ಸವಾಲಿನ ಕೆಲಸವಾಗಿದೆ ಎಂದು ಹೇಳಿದರು. ಕಳೆದ 15 ದಿನಗಳಿಂದ ಅಧಿಕಾರಿಗಳೊಂದಿಗೆ ರಾತ್ರಿ ವೇಳೆ ಸ್ಥಳ ಪರಿಶೀಲನೆ ನಡೆಸಿ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ಪ್ರಯತ್ನ ಮಾಡುತ್ತಿರುವುದಾಗಿಯೂ ಸಚಿವರು ತಿಳಿಸಿದರು.ರಸ್ತೆ ಗುಣಮಟ್ಟ ಕಾಪಾಡಲು ವಾರ್ಷಿಕ ವೇತನ ಪಾವತಿ ಮಾದರಿ ಜಾರಿ. ರಸ್ತೆ, ದೀಪಗಳು ಹಾಗೂ ಪಾದಚಾರಿ ಮಾರ್ಗಗಳ ಗುಣಮಟ್ಟವನ್ನು ವಾರ್ಷಿಕವಾಗಿ ಪರಿಶೀಲಿಸಿ, ಗುತ್ತಿಗೆದಾರರಿಗೆ ಹಂತ ಹಂತವಾಗಿ ಪಾವತಿ.

ಸಲಹೆಗಾರರು ವಿನ್ಯಾಸವನ್ನು ಸಿದ್ಧಪಡಿಸಿದ್ದರೂ, ಯೋಜನೆಯ ಸಂಕೀರ್ಣತೆಯನ್ನು ಗಮನದಲ್ಲಿಟ್ಟುಕೊಂಡು ಸಾರ್ವಜನಿಕರಿಂದಲೂ ಸಲಹೆಗಳನ್ನು ಆಹ್ವಾನಿಸಲಾಗಿದೆ. ಕರಡು ವಿನ್ಯಾಸವನ್ನು ಸಾರ್ವಜನಿಕರೊಂದಿಗೆ ಹಂಚಿಕೊಳ್ಳಲಾಗುವುದು. ಉಪಯುಕ್ತ ಸಲಹೆಗಳನ್ನು ಅಂತಿಮ ಯೋಜನೆಯಲ್ಲಿ ಅಳವಡಿಸಿಕೊಳ್ಳಲಾಗುವುದು .-ಸಚಿವ ಕೃಷ್ಣ ಬೈರೇಗೌಡ

**ಸಂಚಾರದ ಮೇಲಿನ ಒತ್ತಡ**

ನಗರದಲ್ಲಿ ನಿರಂತರ ಮತ್ತು ಗುಣಮಟ್ಟದ ಪಾದಚಾರಿ ಮಾರ್ಗಗಳ ಕೊರತೆಯಿಂದ ಕೇವಲ 2 ಕಿ.ಮೀ. ದೂರವನ್ನೂ ಜನರು ನಡೆದು ಹೋಗುವ ಬದಲು ವಾಹನಗಳನ್ನು ಅವಲಂಬಿಸುತ್ತಿದ್ದಾರೆ. ಈ ಸಮಸ್ಯೆಯನ್ನು ಸರಿಪಡಿಸಿದರೆ ಸಂಚಾರದ ಮೇಲಿನ ಒತ್ತಡವನ್ನು ಕಡಿಮೆ ಮಾಡಬಹುದು ಎಂದರು.

ಪ್ರಮುಖ ರಸ್ತೆಗಳಲ್ಲಿ ಡಾಂಬರು ವೈಟ್ ಟಾಪಿಂಗ್ ಅಳವಡಿಕೆ. ವೈಟ್ ಟಾಪಿಂಗ್‌ನಿಂದ ರಸ್ತೆ ಸುಮಾರು 25 ವರ್ಷಗಳವರೆಗೆ ಬಾಳಿಕೆ ಬರುತ್ತದೆ. ಮಳೆನೀರು ಚರಂಡಿ, ಕುಡಿಯುವ ನೀರು, ಒಳಚರಂಡಿ, ವಿದ್ಯುತ್ ಹಾಗೂ ಅನಿಲ ಪೈಪ್‌ಲೈನ್ ಕಾಮಗಾರಿಗಳನ್ನು ಸಮನ್ವಯದಲ್ಲಿ ಕೈಗೊಳ್ಳುವುದು.

# ವಿದ್ಯಾರ್ಥಿಗಳು ಮಾದಕ ವಸ್ತುಗಳಿಂದ ದೂರವಿರಿ : ಮಹೇಶ್ ಸಲಹೆ

• ಉದಯವಾಹಿನಿ, ಗುಂಡ್ಲುಪೇಟೆ

ವಿದ್ಯಾರ್ಥಿಗಳು ಮಾದಕ ವಸ್ತುಗಳಿಂದ ದೂರವಿದ್ದು, ಸ್ವಾಸ್ಥ್ಯ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಸಂಪನ್ಮೂಲ ವ್ಯಕ್ತಿ ಮಹೇಶ್ ಸಲಹೆ ನೀಡಿದರು. ಪಟ್ಟಣದ ಶ್ರೀ ಮದ್ದಾನೇಶ್ವರ ಪ್ರೌಢಶಾಲೆಯಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಹಮ್ಮಿಕೊಂಡಿದ್ದ ಸ್ವಾಸ್ಥ್ಯ ಸಂಕಲ್ಪ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿ ಜೀವನದಲ್ಲಿ, ಯುವಕರಿದ್ದಾಗ ಮಾದಕ ವಸ್ತುಗಳು, ಧೂಮಪಾನ, ಮದ್ಯಪಾನ, ಪಾನ್ ಮಸಾಲ ಜಿಗಿಯುವುದು ಇತರೆ ಕೆಟ್ಟ ಅಭ್ಯಾಸಗಳು ಆಕರ್ಷಿಸುತ್ತವೆ.

ಭವಿಷ್ಯದಲ್ಲಿ ಇಂತಹ ಆಗುವ ಅಪಾಯಗಳ ಅರಿವು ಇಲ್ಲದೇ ದುಶ್ಚಟಗಳಿಗೆ ಬಲಿಯಾಗುವರ ಸಂಖ್ಯೆ ಹೆಚ್ಚಾಗುತ್ತಿರುವುದು




ಆತಂಕಕಾರಿ ವಿಷಯವಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು. ಶಾಲಾ ವಿದ್ಯಾರ್ಥಿಗಳು ಮಾದಕ ವಸ್ತುಗಳ ಸೇವನೆಯಿಂದ ಆಗುವ ಅಪಾಯಗಳ ತಿಳಿದುಕೊಳ್ಳಬೇಕು.

ಕುಟುಂಬ ಮತ್ತು ಸುತ್ತಲಿನ ಜನರಿಗೂ ಈ ಬಗ್ಗೆ ತಿಳಿಸುವ ಕೆಲಸ ಮಾಡಬೇಕು. ಇದರಿಂದ ಮಾತ್ರ ಆರೋಗ್ಯಕರ ಸಮಾಜ ನಿರ್ಮಾಣ ಮಾಡಲು ಸಾಧ್ಯ ಎಂದು ತಿಳಿಸಿದರು.

ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯ ಎಚ್.ಪಿ.ಮಹೇಂದ್ರ ಮಾತನಾಡಿ, ಬೆಳೆಯುವ ಸಿರಿ ಮೊಳಕೆಯಲ್ಲಿ ಎಂಬ ಮಾತಿದೆ. ಆದರೆ ಸಮಾಜದಲ್ಲಿ ಆಗುತ್ತಿರುವ ಬದಲಾವಣೆಗಳು ಸಮಾಜವನ್ನು ತಪ್ಪು ದಾರಿಗೆ ಎಳೆದೊಯ್ಯುತ್ತಿವೆ. ಈ ಬಗ್ಗೆ ಎಲ್ಲರೂ ಜಾಗೃತರಾಗಬೇಕು.

ಭವಿಷ್ಯದ ಪ್ರಜೆಗಳಾದ ವಿದ್ಯಾರ್ಥಿಗಳು ಹೆಚ್ಚಿನ ಗಮನ ನೀಡಬೇಕು ಎಂದು ಕಿವಿಮಾತು ಹೇಳಿದರು. ಕಾರ್ಯಕ್ರಮದಲ್ಲಿ ಮುಖ್ಯ ಶಿಕ್ಷಕ ಪ್ರಕಾಶ್ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕೃಷಿ ಮೇಲ್ವಿಚಾರಕ ಟಿ.ಎಂ. ಮಹದೇವಪ್ರಸಾದ್ ಸೇವಾ ಪ್ರತಿನಿಧಿ ಸುಮತಿ ಸೇರಿದಂತೆ ಶಾಲಾ ವಿದ್ಯಾರ್ಥಿಗಳು ಹಾಜರಿದ್ದರು.

# ಕಲುಷಿತ ಚರಂಡಿ ನೀರು: ಸ್ಥಳೀಯರ ಆಕ್ರೋಶ

• ಉದಯವಾಹಿನಿ, ಚಿಂತಾಮಣಿ

ಗ್ರಾಮದ ಜಾಮಿಯಾ ಮಸೀದಿ ಹಿಂಭಾಗ ಹಾಗೂ ಬೀದಿಗಳಲ್ಲಿ ಚರಂಡಿ ನೀರು ಮತ್ತು ಗೃಹ ಬಳಕೆಯ ಕಲುಷಿತ ನೀರು ಹರಿದು ಹೋಗದೆ, ಒಂದೇ ಕಡೆ ನಿಂತಿದ್ದು, ಹಂದಿ ಸೊಳ್ಳೆಗಳ ಕಾಟ ಹೆಚ್ಚಾಗಿದೆ. ಜೊತೆಗೆ ದುರ್ವಾಸನೆಯಿಂದ ಜನರು ಮೂಗು ಮುಚ್ಚಿಕೊಂಡು ಓಡಾಡುವ ಅನಿವಾರ್ಯತೆ ಎದುರಾಗಿದೆ. ಕಳೆದ ಮೂರು ವರ್ಷಗಳಿಂದ ಈ ಸಮಸ್ಯೆ ಮುಂದುವರಿದಿದೆ. ಆದರೆ, ಈವರೆಗೆ ಚರಂಡಿ ದುರಸ್ತಿಗೆ ಯಾರೂ ಮುಂದಾಗಿಲ್ಲ. ಇದರಿಂದ ಚಿಕ್ಕ ಮಕ್ಕಳು ಡೆಂಗ್ಯೂ ಜ್ವರ ಹಾಗೂ ಇತರ ಕಾಯಿಲೆಗಳಿಗೆ ಸಿಲುಕುತ್ತಿದ್ದಾರೆ ಎಂದು ಸ್ಥಳೀಯ ನಿವಾಸಿ ಭಾರತಮ್ಮ ಆಕ್ರೋಶ ವ್ಯಕ್ತಪಡಿಸಿದರು. ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ, ಪಿಡಿಒಗೆ ನಾವೆಲ್ಲ ಲಿಖಿತ ದೂರು ಸಲ್ಲಿಸಿದ್ದೇವೆ. ಅವರು ಸ್ಥಳ ಪರಿಶೀಲನೆ ನಡೆಸಿದ್ದು, ಒತ್ತುವರಿ ತೆರವಿಗೆ ಕೆಲವರು ಸಹಕರಿಸದ ಕಾರಣ ಸಮಸ್ಯೆ ಇತ್ಯರ್ಥಗೊಂಡಿಲ್ಲ ಎಂದು ಗ್ರಾಮಸ್ಥರು ತಿಳಿಸಿದ್ದಾರೆ.

ಗ್ರಾಮ ಪಂಚಾಯಿತಿ ಹಾಗೂ ತಾಲ್ಲೂಕು ಪಂಚಾಯಿತಿ ಅಧಿಕಾರಿಗಳು ತಕ್ಷಣವೇ ಸ್ಥಳಕ್ಕೆ ಭೇಟಿ ನೀಡಿ ಒತ್ತುವರಿ ತೆರವುಗೊಳಿಸಿ, ಚರಂಡಿ ಸ್ವಚ್ಛಗೊಳಿಸಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

# ಇಂದಿನ ರಾಜಕೀಯ ಕ್ಷೇತ್ರ ಕಲುಷಿತಗೊಂಡಿದೆ: ಸಿದ್ದರಾಮಯ್ಯ

## ನಾವಿಬ್ಬರೂ ಏಕಕಾಲಕ್ಕೆ ರಾಜಕೀಯ ಕ್ಷೇತ್ರ ಪ್ರವೇಶಿಸಿದವರು.ಆದರೆ ಅವರಿಗಿಂತ ಮೊದಲು ನಾನು ಶಾಸಕನಾದೆ


• ಉದಯವಾಹಿನಿ, ಕೆ.ಆರ್.ಪೇಟೆ

1 ಕಷ್ಟ ಸುಖಗಳಿಗೆ ಧ್ವನಿಯಾಗಿ
2 ತಮ್ಮ ಸರಳ ಮತ್ತು ಸಜ್ಜನಿಕೆಯನ್ನು ಬಿಟ್ಟುಕೊಟ್ಟವರಲ್ಲ.
3 ವಿದ್ಯಾರ್ಥಿ ಪ್ರತಿಭಾ ಪುರಸ್ಕಾರ

ರಾಜಕೀಯ ಕ್ಷೇತ್ರ ಕಲುಷಿತಗೊಂಡಿದೆ. ಹಿಂದೆಲ್ಲಾ ಕ್ಷೇತ್ರದ ಜನರೇ ನಮಗೆ ದುಡ್ಡುಕೊಟ್ಟು ಗೆಲ್ಲಿಸಿಕೊಂಡು ಬರುತ್ತಿದ್ದರು. ಆದರೇ ದುಡ್ಡುಕೊಟ್ಟು ಗೆಲ್ಲಿಸಿಕೊಂಡು ಬರುತ್ತಿದ್ದ ಕಾಲ ಮುಗಿದಿದೆ. ಈಗ ಜನರಿಗೆ ನಾವೇ ದುಡ್ಡುಕೊಡಬೇಕಾದ ಕಾಲ ಬಂದಿದೆ. ಆದಕಾರಣ 2028 ರ ಚುನಾವಣೆಯಲ್ಲಿ ನಾನು ಸ್ಪರ್ಧಿಸುವುದಿಲ್ಲ. ಆದರೆ ಸಕ್ರಿಯ ರಾಜಕಾರಣದಲ್ಲಿದ್ದು ಜನರ ಕಷ್ಟ ಸುಖಗಳಿಗೆ ಧ್ವನಿಯಾಗಿ ನಿಲ್ಲುತ್ತೇನೆಂದು ರಾಜ್ಯದ ನಿಕಟ ಪೂರ್ವ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಅವರು ಪಟ್ಟಣದ ಹೊರವಲಯದ ಜಯಮ್ಮ ರಾಮಸ್ವಾಮಿ ಸಮುದಾಯ ಭವನದಲ್ಲಿ ಮಾಜಿ ಸ್ಪೀಕರ್ ದಿವಂಗತ ಕೃಷ್ಣ ಅವರ 86ನೇ ಜನ್ಮದಿನದ ಅಂಗವಾಗಿ ಕೃಷ್ಣ ಪ್ರತಿಷ್ಠಾನದ ವತಿಯಿಂದ ಆಯೋಜಿಸಿದ್ದ ಕೃಷ್ಣ ಪುರಸ್ಕಾರ ಮತ್ತು ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಕೃಷ್ಣ ವರ ಜೊತೆಗಿನ ತಮ್ಮ ರಾಜಕೀಯ ಜೀವನದ ಒಡನಾಟವನ್ನು ಸ್ಮರಿಸಿದ ಸಿದ್ದರಾಮಯ್ಯ, ನಾವಿಬ್ಬರೂ ಏಕಕಾಲಕ್ಕೆ ರಾಜಕೀಯ ಕ್ಷೇತ್ರ ಪ್ರವೇಶಿಸಿದವರು. ಆದರೆ ಅವರಿಗಿಂತ ಮೊದಲು ನಾನು ಶಾಸಕನಾದೆ. ಕೆ.ಆರ್.ಪೇಟೆಯ ಮಾಜಿ ಶಾಸಕ ಎಸ್.ಎಂ.ಲಿಂಗಪ್ಪ ಅವರ ಅನುಯಾಯಿಯಾಗಿದ್ದ ಕೃಷ್ಣ ಎಸ್.ಎಂ.ಲಿಂಗಪ್ಪ ಅವರ ರಾಜಕೀಯ




ಆದರ್ಶಗಳನ್ನು ಮೈಗೂಡಿಸಿಕೊಂಡಿದ್ದರು. ತಮ್ಮ ಸರಳ ಮತ್ತು ಸಜ್ಜನ ನಡವಳಿಕೆಯಿಂದ ಮಂಡ್ಯದ ಗಾಂಧಿ ಎಂದು ಹೆಸರಾದ ಕೃಷ್ಣ ಗಾಂಧಿ ವಿಚಾರ ಧಾರೆಗಳನ್ನು ಮೈಗೂಡಿಸಿಕೊಂಡಿದ್ದರೆಂದರು. ಶಾಸಕರಾಗಿ, ಸಚಿವರಾಗಿ, ಸಂಸದರಾಗಿ, ರಾಜ್ಯ ವಿಧಾನ ಸಭೆಯ ಸ್ಪೀಕರ್ ಆಗಿ ರಾಜಕೀಯ ಉತ್ತುಂಗದಲ್ಲಿದ್ದರೂ ಕೃಷ್ಣ ತಮ್ಮ ಸರಳತೆ ಮತ್ತು ಸಜ್ಜನಿಕೆಯನ್ನು ಬಿಟ್ಟುಕೊಟ್ಟವರಲ್ಲ.

ಕೃಷ್ಣ ಅವರು ಬದುಕಿರುವವರೆಗೂ ನಾನು ಕೃಷ್ಣ ಅವರೊಂದಿಗೆ ರಾಜಕೀಯ ವಿಚಾರಗಳ ಚರ್ಚೆ ಮಾಡುತ್ತಿದ್ದೆ ಬೆಂಗಳೂರಿನಲ್ಲಿದ್ದಾಗಲೆಲ್ಲಾ ಕೃಷ್ಣ ನನ್ನನ್ನು ನೋಡದೆ ಎಂದಿಗೂ ಹೋಗುತ್ತಿರಲಿಲ್ಲ. ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಪುಸ್ತಕ ಮನೆ ಅಂಕೇಗೌಡ, ಶೂದ್ರಶಕ್ತಿ ಪತ್ರಿಕೆಯ ಸಂಪಾದಕ ಬಿ.ಆರ್. ರಾಮೇಗೌಡ, ಹೈನುಗಾರಿಕೆಯ ಮೂಲಕ ತಾಲ್ಲೂಕಿನಲ್ಲಿ ಅತಿ ಹೆಚ್ಚು ಹಾಲು ಸರಬರಾಜು ಮಾಡುವ ರೈತ ಮಹಿಳೆ ಹೆಮ್ಮನಹಳ್ಳಿ ಪವಿತ್ರ ಹಾಗೂ ಕಳೆದ ಸಾಲಿನ ಐ.ಎ.ಎಸ್ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ತಾಲ್ಲೂಕಿಗೆ ಕೀರ್ತಿತಂದ ಡಾ.ಮುತ್ತೇಶ್ ಗೌಡ ಅವರ ತಂದೆ ತಾಯಿಯನ್ನು ಇದೇ ಸಂದರ್ಭದಲ್ಲಿ ಶಾಸಕ ಹೆಚ್.ಟಿ.ಮಂಜು ಕೃಷ್ಣ ಪುರಸ್ಕಾರ ನೀಡಿ ಗೌರವಿಸಿ ಮಾತನಾಡಿದರು.

ಉಳಿದಂತೆ ವಿವಿಧ ಕ್ಷೇತ್ರಗಳ ಸಾಧಕರಾದ ತಾಲೂಕಿನ ಮನ್ ಮುಲ್ ನಿರ್ದೇಶಕರಾದ ಡಾಲು ರವಿ, ಎಂ.ಬಿ.ಹರೀಶ್, ಎಂ.ಡಿ.ಸಿ.ಸಿ ಬ್ಯಾಂಕ್ ನಿರ್ದೇಶಕ ಶೀಳನೆರೆ ಅಂಬರೀಶ್, ತಾಲ್ಲೂಕಿನ ಸರ್ಕಾರಿ ಶಾಲೆ ಮತ್ತು ಕಾಲೇಜುಗಳಲ್ಲಿ ವ್ಯಾಸಂಗ ಮಾಡಿ ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಪರೀಕ್ಷೆಗಳಲ್ಲಿ ಅತೀ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಮಾಜಿ ಸಚಿವ ಕೆ.ಸಿ.ನಾರಾಯಣಗೌಡ ಕೃಷ್ಣ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಿ ಮಾತನಾಡಿದರು.

> ಕೃಷ್ಣ ಅವರ ಗೆಲುವಿಗೆ ಅವರ ಸರಳತೆಯೇ ಕಾರಣವಾಗಿತ್ತು ಎಂದ ಸಿದ್ದರಾಮಯ್ಯ ಕಲುಷಿತ ರಾಜಕಾರಣದ ಬಗ್ಗೆ ತಮ್ಮ ರಾಜಕೀಯದ ಕೊನೆಯ ದಿನಗಳಲ್ಲಿ ಕೃಷ್ಣ ತೀವ್ರ ಬೇಸರಕ್ಕೆ ಒಳಗಾಗಿದ್ದರು. ಪ್ರಾಮಣಿಕ ರಾಜಕಾರಣಕ್ಕೆ ಉಳಿವಿಲ್ಲ ಎಂದು ತಿಳಿಸಿದರು.-ಸಿದ್ದರಾಮಯ್ಯ

### ಸ್ಪರ್ಧಿಸಲು ಜಿಲ್ಲೆಯಲ್ಲಿ ಯಾರೂ ತಯಾರಿರಲಿಲ್ಲ

ಅವರ ವಿರುದ್ದ ಸ್ಪರ್ಧಿಸಲು ಜಿಲ್ಲೆಯಲ್ಲಿ ಯಾರೂ ತಯಾರಿರಲಿಲ್ಲ. ಅಂತ ಪರಿಸ್ಥಿತಿಯಲ್ಲಿ ನಾನು ಮತ್ತು ಹೆಚ್.ಡಿ.ದೇವೇಗೌಡರು ಚರ್ಚಿಸಿ ಅಂದು ಶಾಸಕರಾಗಿದ್ದ ಕೃಷ್ಣ ಅವರ ರಾಜೀನಾಮೆ ಕೊಡಿಸಿ ಮಂಡ್ಯ ಸಂಸತ್ ಕ್ಷೇತ್ರದಿಂದ ಸ್ಪರ್ಧಿಸುವಂತೆ ಮಾಡಿ ಜಿ.ಮಾದೇಗೌಡರ ವಿರುದ್ದ ಗೆಲ್ಲಿಸಕೊಂಡು ಬರಲಾಗಿತ್ತು.

# 4,237 ಯುನಿಟ್ ರಕ್ತದಾನ; ದೇಶದಲ್ಲೇ ದಾಖಲೆ


• ಉದಯವಾಹಿನಿ, ಚಿಕ್ಕಬಳ್ಳಾಪುರ

ನಗರದಲ್ಲಿ ಈಚೆಗೆ ಕೆ.ವಿ ಮತ್ತು ಪಂಚಗಿರಿ ಶಿಕ್ಷಣ ಸಂಸ್ಥೆಗಳ ದತ್ತಿ ದಿನದ ಅಂಗವಾಗಿ ಹಮ್ಮಿಕೊಂಡಿದ್ದ ರಕ್ತದಾನ ಶಿಬಿರವು ದೇಶದಲ್ಲಿಯೇ ದಾಖಲೆಯಾಗಿದೆ. 4,237 ಯುನಿಟ್ ರಕ್ತ ಸಂಗ್ರಹಿಸುವ ಮೂಲಕ ದೇಶದಲ್ಲಿಯೇ ಅತಿ ಹೆಚ್ಚು ರಕ್ತ ಸಂಗ್ರಹಿಸಿ ಕೀರ್ತಿ ಪಡೆದಿದೆ ಎಂದು ಕೆ.ವಿ ಮತ್ತು ಪಂಚಗಿರಿ ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಕೆ.ವಿ ನವೀನ್ ಕಿರಣ್ ತಿಳಿಸಿದರು. ನಗರದಲ್ಲಿ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಪಕ್ಷಾತೀತ, ಜಾತ್ಯತೀತವಾಗಿ ಜನರು ಶಿಬಿರಕ್ಕೆ ಸಹಕಾರ ನೀಡಿದರು. ಇದಕ್ಕೆ ಕಾರಣರಾದ ಪ್ರತಿಯೊಬ್ಬರಿಗೂ ಅಭಿನಂದನೆಗಳು. 4,237 ಯುನಿಟ್ ರಕ್ತ ಸಂಗ್ರಹವಾಗುವುದು ಸಾಮಾನ್ಯ ಮಾತಲ್ಲ. ಅದು ಒಬ್ಬರಿಂದ ಸಾಧ್ಯವಾಗುವ ಕೆಲಸವೂ ಅಲ್ಲ. ನಮ್ಮ ಶಿಕ್ಷಣ ಸಂಸ್ಥೆಗಳ 500ಕ್ಕೂ ಹೆಚ್ಚು ಸಿಬ್ಬಂದಿ, ನೂರಾರು ವಿದ್ಯಾರ್ಥಿಗಳು ತಿಂಗಳಗಳ ಕಾಲ ಶ್ರಮಿಸಿದ ಫಲ' ಎಂದರು.7 ಸಾವಿರಕ್ಕೂ ಹೆಚ್ಚು ಜನರು ಶಿಬಿರಕ್ಕೆ ಆಗಮಿಸಿದ್ದರು. 10 ಸಾವಿರಕ್ಕೂ ಹೆಚ್ಚು ಮಂದಿಗೆ ಸ್ವಯಂಪ್ರೇರಿತ ರಕ್ತದಾನ ಶಿಬಿರದ ಬಗ್ಗೆ ಜಾಗೃತಿ ಮೂಡಿಸಲಾಗಿತ್ತು. ಚಿಕ್ಕಬಳ್ಳಾಪುರದ ಜನರು ಉತ್ತಮ ಕಾರ್ಯಕ್ಕೆ ಸ್ಪಂದಿಸಲಿದ್ದಾರೆ. ಚಿಕ್ಕಬಳ್ಳಾಪುರದ ಪ್ರತಿ ಗ್ರಾಮ, ಪ್ರತಿ ಸಂಸ್ಥೆಯಿಂದ ಸಹಕಾರ ದೊರೆತಿದೆ ಎಂದು ಹೇಳಿದರು.

# ಚಾಮುಂಡಿ ಬೆಟ್ಟದ ಮೇಲೆ ಹೆಚ್ಚಿದ ಮಾನವ ಹಸ್ತಕ್ಷೇಪ

• ಉದಯವಾಹಿನಿ, ಮೈಸೂರು

ವರ್ಷದಿಂದ ವರ್ಷಕ್ಕೆ ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡುವ ಭಕ್ತರು, ಪ್ರವಾಸಿಗರು ಹಾಗೂ ವಾಹನಗಳ ಸಂಖ್ಯೆ ಗಣನೀಯವಾಗಿ ಏರಿಕೆಯಾಗುತ್ತಿದೆ. ಧಾರ್ಮಿಕ ಹಾಗೂ ಪ್ರವಾಸಿ ತಾಣವಾಗಿ ಪ್ರಸಿದ್ಧಿ ಪಡೆದಿರುವ ಈ ಬೆಟ್ಟ, ಸಮೃದ್ಧ ಅರಣ್ಯ ಮತ್ತು ಜೀವವೈವಿಧ್ಯದ ಆಶ್ರಯತಾಣವೂ ಆಗಿದೆ.ಆದರೆ, ಹೆಚ್ಚುತ್ತಿರುವ ಮಾನವ ಹಸ್ತಕ್ಷೇಪವು ಇಲ್ಲಿನ ವನ್ಯಜೀವಿಗಳ ಸಹಜ ಬದುಕಿನ ಮೇಲೆ ಗಂಭೀರ ಪರಿಣಾಮ ಬೀರುವ ಆತಂಕ ಎದುರಾಗಿದೆ. ಧಾರ್ಮಿಕ,ಪ್ರವಾಸಿ ಹಾಗೂ ಪರಿ ಸರದ ದೃಷ್ಟಿಯಿಂದ ರಾಜ್ಯದ ಹೆಮ್ಮೆಯ ತಾಣ ವಾಗಿರುವ ಚಾಮುಂಡಿ ಬೆಟ್ಟ, ಸಮೃದ್ಧ ಜೀವವೈವಿಧ್ಯದ ನೆಲೆಯೂ ಆಗಿದೆ. ಅರಣ್ಯ ಅಧಿಕಾರಿಗಳ ಮಾಹಿತಿಯಂತೆ, ಈ ಅರಣ್ಯ ಪ್ರದೇಶದಲ್ಲಿ ಐದಾರು ಚಿರತೆಗಳು, ಮುಳ್ಳಂದಿ, ನರಿ, ಮೊಲ, ಕಾಡುಬೆಕ್ಕು, ವಿವಿಧ ಸರೀಸೃಪಗಳು ಹಾಗೂ ನೂರಾರು ಜಾತಿಯ ಪ್ರಾಣಿ-ಪಕ್ಷಿಗಳು ವಾಸಿಸುತ್ತಿವೆ. ಆದರೆ, ದಿನೇದಿನೆ ಹೆಚ್ಚುತ್ತಿರುವ ಮಾನವ ಹಸ್ತಕ್ಷೇಪವು ಈ




ಜೀವಿಗಳ ಅಸ್ತಿತ್ವದ ಮೇಲೆಯೇ ಪ್ರಶ್ನೆ ಎಬ್ಬಿಸಿದೆ.

ಅದಲ್ಲದೇ ನಿರಂತರ ವಾಹನ ಸಂಚಾರ, ಶಬ್ದ ಮಾಲಿನ್ಯ, ವಾಯು ಮಾಲಿನ್ಯ ಹಾಗೂ ಅರಣ್ಯದೊಳಗಿನ ಮಾನವ ಚಟುವಟಿಕೆಗಳು ವನ್ಯಜೀವಿಗಳ ಸಹಜ ಚಲನವಲನಕ್ಕೆ ಅಡ್ಡಿಯಾಗುತ್ತಿವೆ.ಅರಣ್ಯದ ನೈಸರ್ಗಿಕ ಪರಿಸರದಲ್ಲಿ ಉಂಟಾಗುತ್ತಿರುವ ಬದಲಾವಣೆಗಳಿಂದ ಕೆಲವು ವನ್ಯಜೀವಿಗಳು ಆಹಾರ ಮತ್ತು ಸುರಕ್ಷಿತ ಆಶ್ರಯದ ಹುಡುಕಾಟದಲ್ಲಿ ಜನವಸತಿ ಪ್ರದೇಶಗಳತ್ತ ಬರುತ್ತಿರುವ ಘಟನೆಗಳು ಗಮನಕ್ಕೆ ಬರುತ್ತಿವೆ. ಇದು ಮಾನವ-ವನ್ಯಜೀವಿ ಸಂಘರ್ಷದ ಸಾಧ್ಯತೆಯನ್ನು ಹೆಚ್ಚಿಸುವುದರ ಜತೆಗೆ ವನ್ಯಜೀವಿಗಳ ಸುರಕ್ಷತೆಯ ಮೇಲೂ ಪ್ರಶ್ನೆ ಎಬ್ಬಿಸಿದೆ. ವನ್ಯಜೀವಿಗಳ ಮೇಲೆ ಪರಿಣಾಮಗಳು ಚಿರತೆ ಸೇರಿದಂತೆ ಹಲವು ಜೀವಿಗಳ ಸಹಜ ವಾಸಸ್ಥಾನಕ್ಕೆ ಧಕ್ಕೆಯಾಗುತ್ತಿದೆ.

ಶಬ್ದ ವಾಯು ಮಾಲಿನ್ಯದಿಂದ ಚಲನೆ, ಸಂತಾನೋತ್ಪತ್ತಿ ಮೇಲೆ ಪರಿಣಾಮ ಬೆಟ್ಟದ ತಪ್ಪಲಿನಲ್ಲಿ ಅರಣ್ಯ ಪ್ರದೇಶದ ಅತಿಕ್ರಮಣದಿಂದ ಜೀವವೈವಿಧ್ಯಕ್ಕೆ ಧಕ್ಕೆ ಮಾನವ-ವನ್ಯಜೀವಿ ಸಂಘರ್ಷ ಹೆಚ್ಚಳ ಸಾಧ್ಯತೆ ತಜ್ಞರು ಸೂಚಿಸುವ ಕ್ರಮಗಳು ಬೆಟ್ಟಣ್ಣೆ ಖಾಸಗಿ ವಾಹನಗಳ ಸಂಪೂರ್ಣ ನಿಷೇಧ.

ವಿದ್ಯುತ್ ಚಾಲಿತ ಸಾರ್ವಜನಿಕ ಸಾರಿಗೆಗೆ ಆದ್ಯತೆ. ರಾತ್ರಿ ವೇಳೆಯ ಅನಗತ್ಯ ಸಂಚಾರಕ್ಕೆ ನಿಯಂತ್ರಣ. ಕ್ಯಾಮೆರಾ ಟ್ರ್ಯಾಪ್, ವೈಜ್ಞಾನಿಕ ಮೇಲ್ವಿಚಾರಣೆ ವಿಸ್ತರಣೆ.ಚಾಮುಂಡಿ ಬೆಟ್ಟಕ್ಕೆ ಖಾಸಗಿ ವಾಹನಗಳ ಪ್ರವೇಶವನ್ನು ನಿಯಂತ್ರಿಸಬೇಕು ಅಥವಾ ಹಂತ ಹಂತವಾಗಿ ನಿರ್ಬಂಧಿಸಬೇಕು ಎಂಬ ಬೇಡಿಕೆ ಹಲವು ವರ್ಷಗಳಿಂದ ಕೇಳಿಬರುತ್ತಿದೆ.

# ಕಾಂಗ್ರೆಸ್ ಅಧ್ಯಕ್ಷ ಆಯ್ಕೆಗೆ 6 ಹೆಸರು ಶಿಫಾರಸು: ಎಐಸಿಸಿ ವೀಕ್ಷಕಿ ಪಾಲಕ್ ವರ್ಮ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಆಯ್ಕೆಗೆ ಸಂಬಂಧಿಸಿಂತೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, ಪದಾಧಿಕಾರಿಗಳು, ವಿವಿಧ ಘಟಕಗಳ ಪದಾಧಿಕಾರಿಗಳುಪಕ್ಷದ ಚುನಾಯಿತ ಪ್ರತಿನಿಧಿಗಳು, ಸಮಾನ ಮನಸ್ಕ ಸಂಘ ಸಂಸ್ಥೆಗಳ ಪ್ರತಿನಿಧಿಗಳ ಅಭಿಪ್ರಾಯ ಸಂಗ್ರಹಿಸಲಾಗುವುದು ಎಂದು ಎಐಸಿಸಿ ವೀಕ್ಷಕಿ ಪಾಲಕ್ ವರ್ಮ ತಿಳಿಸಿದರು.

ನಗರದಲ್ಲಿ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಒಂದು ವಾರ ಜಿಲ್ಲೆಯಲ್ಲಿ ಪ್ರವಾಸ ನಡೆಸಲಾಗುವುದು. ಈ ಅವಧಿಯಲ್ಲಿ ಎಲ್ಲಾ ವಿಧಾನಸಭಾ ಕ್ಷೇತ್ರಗಳ ಮತ್ತು ಬ್ಲಾಕ್‌ಗಳಿಂದ ಅಭಿಪ್ರಾಯ ಪಡೆದು ಅಂತಿಮವಾಗಿ ಆರು ಜನರ ಹೆಸರನ್ನು ಆ.16ರ ವೇಳೆಗೆ ಪಕ್ಷದ ಹೈಕಮಾಂಡ್‌ಗೆ ಶಿಫಾರಸು ಮಾಡಲಾಗುವುದು. ಹೈಕಮಾಂಡ್ ರಾಜ್ಯ ಘಟಕದ ಅಧ್ಯಕ್ಷರ ಜೊತೆ ಸಮಾಲೋಚಿಸಿ ಜಿಲ್ಲಾ ಅಧ್ಯಕ್ಷರನ್ನು ಆಯ್ಕೆ ಮಾಡುತ್ತದೆ' ಎಂದು ಹೇಳಿದರು. ದೇಶದಾದ್ಯಂತ ಪಕ್ಷ ಸಂಘಟನೆಗೆ ಹೊಸ ಸ್ವರೂಪ ನೀಡಲಾಗುತ್ತಿದೆ.




ಸಂಘಟನ್ ಸೃಜನ ಅಭಿಯಾನದ ಮೂಲಕ ಜಿಲ್ಲಾ ಅಧ್ಯಕ್ಷರ ಆಯ್ಕೆ ಮಾಡಲಾಗುತ್ತದೆ. 7ರಿಂದ 8 ದಿನ ಜಿಲ್ಲೆಯಲ್ಲಿ ಪ್ರವಾಸ ನಡೆಸಿ ಅಭಿಪ್ರಾಯ ಸಂಗ್ರಹಿಸಲಾಗುವುದು ಎಂದರು. ಪರಿಶಿಷ್ಟ ಜಾತಿ, ಪಂಗಡ, ಹಿಂದುಳಿದ ವರ್ಗ, ಅಲ್ಪಸಂಖ್ಯಾತರು, ಮಹಿಳೆ ಹೀಗೆ ವಿವಿಧ ವರ್ಗಗಳ ಮುಖಂಡರನ್ನು ಅಧ್ಯಕ್ಷ ಸ್ಥಾನಕ್ಕೆ ಶಿಫಾರಸು ಮಾಡಲಾಗುತ್ತದೆ. ಬೂತ್ ಮಟ್ಟದಲ್ಲಿ ಅಭಿಪ್ರಾಯ ಸಂಗ್ರಹಿಸಲಾಗುವುದು ಎಂದರು.

' ನನ್ನದು ಗುಜರಾತ್. ಆದ್ದರಿಂದ ಪದಾಧಿಕಾರಿಗಳು, ಮುಖಂಡರಿಂದ ನೇರ ನೇರ ಮಾಹಿತಿ ಸಂಗ್ರಹಿಸಲಾಗುವುದು. ಆಯ್ಕೆ ಪ್ರಕ್ರಿಯೆ ಪಾರದರ್ಶಕವಾಗಿ ನಡೆಯಲಿದೆ. ಒಬ್ಬ ಮುಖಂಡರ ಹೆಸರನ್ನು ಶಿಫಾರಸು ಮಾಡಲಾಗುವುದಿಲ್ಲ' ಎಂದರು.

ವೀಕ್ಷಕ ವಿ.ಆರ್.ಸುದರ್ಶನ್ ಮಾತನಾಡಿ, ಜಿಲ್ಲೆಗಳಲ್ಲಿ ಪಕ್ಷದ ಸಂಘಟನೆ ಹೆಚ್ಚಿಸಬೇಕು. ಈ ದೃಷ್ಟಿಯಿಂದ ರಾಹುಲ್ ಗಾಂಧಿ ಮತ್ತು ಮಲ್ಲಿಕಾರ್ಜುನ ಖರ್ಗೆ ಅವರು ಎಲ್ಲಾ ಪ್ರಯತ್ನ ಮಾಡುತ್ತಿದ್ದಾರೆ. ಪ್ರತಿ ಜಿಲ್ಲೆಗೆ ಒಬ್ಬರು ಎಐಸಿಸಿ ವೀಕ್ಷಕರನ್ನು ನೇಮಿಸಿದ್ದಾರೆ. ಚಿಕ್ಕಬಳ್ಳಾಪುರದಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರ ಆಯ್ಕೆ ವಿಚಾರದಲ್ಲಿ ಚರ್ಚೆ ನಡೆಯುತ್ತಿದೆ' ಎಂದರು.

ಪ್ರತಿ ವಿಧಾನಸಭಾ ಕ್ಷೇತ್ರ, ಬ್ಲಾಕ್‌ಗೆ ಹೋಗುತ್ತೇವೆ. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, ಲೋಕಸಭಾ ಅಭ್ಯರ್ಥಿಗಳು ಹೀಗೆ ಎಲ್ಲ ಘಟಕಗಳ ಪದಾಧಿಕಾರಿಗಳು, ನಮ್ಮ ವಿಚಾರ ಇಷ್ಟಪಡುವವರ ಜೊತೆ ಸಮಾಲೋಚನೆ ನಡೆಸುತ್ತೇವೆ ಎಂದರು.ರಾಜಕೀಯ ಪಕ್ಷವಾಗಿ ನಾವು ಚುನಾವಣೆಯಲ್ಲಿ ಗೆಲ್ಲಬೇಕು. ಹೊಸ ತಲೆಮಾರಿನ ನಾಯಕರನ್ನು ಬೆಳೆಸಬೇಕು. ಈ ಎಲ್ಲ ದೃಷ್ಟಿಯಿಂದ ಈ ಅಭಿಯಾನ ನಡೆಸಲಾಗುತ್ತಿದೆ. ನಾವು ಯಾವುದೇ ಹೆಸರು ಗಮನದಲ್ಲಿಟ್ಟುಕೊಂಡು ಬಂದಿಲ್ಲ. ಯಾರು ಸಮಯ ಕೊಟ್ಟು ಪಕ್ಷಕ್ಕೆ ಕೆಲಸ ಮಾಡುವರು, ಜವಾಬ್ದಾರಿಯನ್ನು ಸರಿಯಾಗಿ ನಿರ್ವಹಿಸುವವರು, ಜನರ ಪರವಾಗಿ ಕೆಲಸ ಮಾಡುವರೊ, ಅವರ ಹೆಸರು ಶಿಫಾರಸು ಮಾಡುತ್ತೇವೆ ಎಂದರು.

ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಮೂಲಕ ಬಿಜೆಪಿ ಹಾಗೂ ಎನ್‌ಡಿಎ ಸರ್ಕಾರ ವಿದ್ಯಾರ್ಥಿಗಳ ಬದುಕಿನಲ್ಲಿ ಚೆಲ್ಲಾಟವಾಡುತ್ತಿದೆ. ಇವರು ದೇಶದ ಜನರ ಕ್ಷಮೆ ಕೇಳಬೇಕು ಎಂದು ಆಗ್ರಹಿಸಿದರು. ಮಾಜಿ ಸಚಿವ ಎನ್.ಎಚ್.ಶಿವಶಂಕರ ರೆಡ್ಡಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕೇಶವ ರೆಡ್ಡಿ, ಕವಿತಾ ರೆಡ್ಡಿ, ಕಾರ್ತಿಕ್, ಎಐಸಿಸಿ ಯುವ ಘಟಕದ ಪ್ರಧಾನ ಕಾರ್ಯದರ್ಶಿ ರಕ್ಷಾ ರಾಮಯ್ಯ, ಬೀಜ ನಿಗಮದ ಅಧ್ಯಕ್ಷ ನಂದಿ ಆಂಜನಪ್ಪ, ಜಯಂತಿ ಹಾಗೂ ಪದಾಧಿಕಾರಿಗಳು ಗೋಷ್ಠಿಯಲ್ಲಿ ಪಾಲ್ಗೊಂಡಿದ್ದರು

# ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ವಿರುದ್ಧ ಸುಳ್ಳು ಆರೋಪ: ಕೋಲಾರದ ಸಂದೇಶ್ ವಿರುದ್ಧ ದೂರು

• ಉದಯವಾಹಿನಿ, ಗುಡಿಬಂಡೆ

ಕ್ಷೇತ್ರದ ಶಾಸಕ ಎಸ್.ಎನ್. ಸುಬ್ಬಾರೆಡ್ಡಿಅವರ ವಿರುದ್ಧ ಜಮೀನು ಕಬಳಿಕೆಯ ಆಧಾರರಹಿತ ಸುಳ್ಳು ಆರೋಪ ಮಾಡಿ, ಅವರ ತೇಜೋವಧೆ ಮಾಡುತ್ತಿರುವ ಕೋಲಾರದ ಸಂದೇಶ್ ಎಂಬುವವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಕಾಂಗ್ರೆಸ್ ಮುಖಂಡರು ಗುಡಿಬಂಡೆ ಪೊಲೀಸರಿಗೆ ದೂರು ನೀಡಿದರು.

ಈ ವೇಳೆ, ಕಾಂಗ್ರೆಸ್‌ಮುಖಂಡ ಹೆಚ್.ಪಿ.ಲಕ್ಷ್ಮೀನಾರಾಯಣ ಮಾತನಾಡಿ, ತಾಲ್ಲೂಕಿನ ಸೋಮಲಾಪುರ ಗ್ರಾಮದ ಸರ್ವೆ ನಂಬರ್ 1ರಲ್ಲಿ 162 ಎಕರೆ ಜಮೀನಿದ್ದು, ಇದನ್ನು ಶಾಸಕರು ಕಬಳಿಸಿ ಬೇಲಿ ಹಾಕಿದ್ದಾರೆ ಎಂದು ಸಂದೇಶ್ ಅವರು ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಸುದ್ದಿ ಹಬ್ಬಿಸುತ್ತಿದ್ದಾರೆ.

# ಬೆಟ್ಟದ ಗೋಶಾಲೆಗೆ ನೆರವು ನೀಡಿದ ಸೋಮಶೇಖರ್

• ಉದಯವಾಹಿನಿ, ಮೈಸೂರು

ನಾಡ ಅಧಿದೇವತೆ ಶ್ರೀಚಾಮುಂಡೇಶ್ವರಿಯ ಹಾಗೂ ಅದರ ಸಮುಚ್ಚಾಯದ ದೇವಾಲಯಗಳ ಕ್ಷೀರಾಭಿಷೇಕಕ್ಕೆ ಬಳಸುವ ಗೋಶಾಲೆಯ ಅಭಿವೃದ್ಧಿಗೆ ಶಾಸಕ ಎಸ್.ಟಿ.ಸೋಮಶೇಖರ್ 4ಲಕ್ಷ ಮೌಲ್ಯದ ನೆರವು ನೀಡಿದ್ದಾರೆ. ಮೈಸೂರಿನ ಚಾಮುಂಡಿ ಬೆಟ್ಟದ ಮೇಲಿನ ಗೋಶಾಲೆ ಯಾವುದೇ ಅಭಿವೃದ್ಧಿ ಕಂಡಿರಲಿಲ್ಲ. 2007-08ರಲ್ಲಿ ದಾಸೋಹ ಭವನದ ಹಿಂದಿರುವ ಜಾಗದಲ್ಲಿ ಗೋಶಾಲೆ ನಿರ್ಮಿಸಲು ಮುಂದಾಗಿದ್ದು, ಪ್ರಾರಂಭದಲ್ಲಿ ಅಂದಿನ ವಿಧಾನಸಭಾಧ್ಯಕ್ಷರಾಗಿದ್ದ ಕೃಷ್ಣಪ್ಪ ಎರಡು ಗೋವುಗಳನ್ನು ಕೊಡುಗೆಯಾಗಿ ನೀಡಿದ್ದರು ಎರಡು ಹಸುಗಳಿದ್ದ ಗೋ ಶಾಲೆಯಲ್ಲೀಗ 30ರಷ್ಟು ಗೋವುಗಳಿವೆ. ಈ ಹಿನ್ನೆಲೆಯಲ್ಲಿ




ಅವುಗಳಿಗೆ ಅಗತ್ಯವಾದ ನೆರವು ನೀಡುವಂತೆ ಸಮಾಜ ಸೇವಕ ಶಿವಕುಮಾರ್ ಶಾಸಕ ಎಸ್.ಟಿ.ಸೋಮಶೇಖರ್‌ಗೆ ಮನವಿ ಮಾಡಿದ್ದರು. ಈ ಹಿನ್ನೆಲೆಯಲ್ಲಿ ಮನವಿಗೆ ಸ್ಪಂದಿಸಿದ ಎಸ್.ಟಿ.ಸೋಮಶೇಖರ್ ಲಕ್ಷಾಂತರ ಮೌಲ್ಯದಲ್ಲಿ ಮೆಸ್ ಅಳವಡಿಸಿಕೊಟ್ಟಿದ್ದಾರೆ.

ಈ ಹಿನ್ನೆಲೆಯಲ್ಲಿ ನಿತ್ಯ ಸೊಳ್ಳೆ, ಗಾಳಿಯಿಂದ ಪರಿತಪಿಸುತ್ತಿದ್ದ ಗೋಶಾಲೆಯ ಗೋವುಗಳು ನೆಮ್ಮದಿಯಿಂದ ಇರಲು ಅನೂಕೂಲ ಮಾಡಿಕೊಟ್ಟ ಶಾಸಕರ ನಡೆಗೆ ಸ್ಥಳೀಯರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.ಈ ಕುರಿತು ಮಾತನಾಡಿದ ಬೆಟ್ಟದ ಮಂಗಲ ಕುಮಾರ್, ಮಾಜಿ ಸಚಿವರಾದ ಸೋಮಶೇಖರ್ ಅವರು ಕ್ಷೇತ್ರ ಯಾವುದು ಎಂದು ಯೋಚಿಸದೇ ಗೋಶಾಲೆಗೆ ನೆರವು ನೀಡಿದ್ದಾರೆ. ಅವರ ನಡೆಗೆ ಚಾಮುಂಡೇಶ್ವರಿ ಮತ್ತಷ್ಟು ಅಧಿಕಾರ, ಆಯುಸ್ಸು ಕರುಣಿಸಲಿ.

> ಈ ಕುರಿತು ಇತ್ತೀಚೆಗಷ್ಟೇ ಗೋಶಾಲೆಗೆ ಭೇಟಿ ನೀಡಿದ್ದ ಮಾಜಿ ಸಚಿವ ಎಸ್.ಟಿ.ಸೋಮಶೇಖರ್ ಕೆಂಗೇರಿಯ ಸಮಾಜ ಸೇವಕ ಶಿವಕುಮಾರ್ ಕೋರಿಕೆ ಮೇರೆಗೆ ನೆರವು ನೀಡಿದ್ದೇನೆ. ಚಾಮುಂಡಿ ಬೆಟ್ಟ ಧಾರ್ಮಿಕ ಕ್ಷೇತ್ರ ಅದರ ಗೋಶಾಲೆಗೆ ನೆರವು ಕೇಳಿದಾಗ ಅಗತ್ಯವಾಗಿ ನೀಡುವುದಾಗಿ ಸಹಕಾರ ನೀಡಿದ್ದೇನೆಂದರು.
> -ಶಾಸಕ ಎಸ್.ಟಿ.ಸೋಮಶೇಖರ್

# ಬಿಡದಿಯ ಕೊಡಿಯಾಲ-ಕರೇನಹಳ್ಳಿ ರೈತರು ಸಜ್ಜು, ಭೂಸ್ವಾಧೀನಕ್ಕೆ ಮುಂದಾದರೆ ಹೋರಾಟದ ಎಚ್ಚರಿಕೆ

## ಬಿಡದಿ ಟೌನ್‌ಶಿಪ್ ವಿರೋಧಿಸಿ ಅಹೋರಾತ್ರಿ ಧರಣಿ ನಡೆಯುತ್ತಿರುವ ಹೊತ್ತಲ್ಲಿಯೇ ವಿಮಾನ ನಿಲ್ದಾಣ ವಿರೋಧಿಸಿ

• ಉದಯವಾಹಿನಿ, ಬಿಡದಿ

ಬಿಡದಿ ಟೌನ್‌ಶಿಪ್ ಯೋಜನೆ ವಿರೋಧಿಸಿ ಭೈರಮಂಗಲದಲ್ಲಿ ರೈತರು ಅಹೋರಾತ್ರಿ ಧರಣಿ ನಡೆಸುತ್ತಿರುವ ಬೆನ್ನಲ್ಲೇ, ಎರಡನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಭೂಸ್ವಾಧೀನ ಮಾಡುವ ಪ್ರಸ್ತಾವನೆ ವಿರೋಧಿಸಿ ಬಿಡದಿ ಹೋಬಳಿಯ ಕೊಡಿಯಾಲ-ಕರೇನಹಳ್ಳಿ ಭಾಗದ ರೈತರು ಹೋರಾಟಕ್ಕೆ ಸಜ್ಜಾಗಿದ್ದಾರೆ.

ಚೂಡಹಳ್ಳಿ -ಸೋಮನಹಳ್ಳಿ ಹಾಗೂ ಕೊಡಿಯಾಲ ಕರೇನಹಳ್ಳಿ ಸುತ್ತಮುತ್ತಲಿನ ಗ್ರಾಮಗಳ ವ್ಯಾಪ್ತಿಯಲ್ಲಿ ವಿಮಾನ ನಿಲ್ದಾಣಕ್ಕಾಗಿ ಭೂಮಿ ಗುರುತಿಸಿರುವುದನ್ನು ವಿರೋಧಿಸಿ ಕೊಡಿಯಾಲ ಕರೇನಹಳ್ಳಿಯ ಶ್ರೀಲಕ್ಷ್ಮೀನಾರಾಯಣಸ್ವಾಮಿ ದೇವಾಲಯದ ಆವರಣದಲ್ಲಿ ರೈತರು ಪೂರ್ವಭಾವಿ ಸಭೆ ನಡೆಸಿ ಹೋರಾಟದ ರೂಪರೇಷೆಗಳನ್ನು ಚರ್ಚಿಸಿದರು.

ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ರೈತ ಮುಖಂಡ ಕೊಡಿಯಾಲ ಸತೀಶ್, ವಿಮಾನ ನಿಲ್ದಾಣಕ್ಕಾಗಿ ಕೃಷಿ ಭೂಮಿ ಕಸಿದುಕೊಂಡರೆ




ರೈತರು ಜೀವನೋಪಾಯ ಕಳೆದುಕೊಂಡು ಬೀದಿಗೆ ಬೀಳುವ ಪರಿಸ್ಥಿತಿ ಎದುರಾಗುತ್ತದೆ. ರೈತರ ಬದುಕು ಮತ್ತು ಕೃಷಿ ಭೂಮಿಯನ್ನು ಬಲಿಕೊಡುವ ಅಭಿವೃದ್ಧಿ ನಮಗೆ ಬೇಕಿಲ್ಲ. ಸರ್ಕಾರ ಭೂಸ್ವಾಧೀನಕ್ಕೆ ಮುಂದಾದರೆ ತೀವ್ರ ಹೋರಾಟ ಅನಿವಾರ್ಯವಾಗಲಿದೆ ಎಂದು ಎಚ್ಚರಿಕೆ ನೀಡಿದರು.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ಸೇರಿದಂತೆ ಹಲವು ರಾಜಕಾರಣಿಗಳು ಅಭಿವೃದ್ಧಿಯ ದೃಷ್ಟಿಯಿಂದ ಇಲ್ಲಿಯೇ ವಿಮಾನ ನಿಲ್ದಾಣ ನಿರ್ಮಾಣವಾಗಬೇಕು ಎಂದು ಹೇಳುತ್ತಿದ್ದಾರೆ. ಆದರೆ ಭೂಸ್ವಾಧೀನಕ್ಕೆ ಒಳಪಡುವ ಗ್ರಾಮಗಳಲ್ಲಿಅವರು ಬದುಕು ಕಟ್ಟಿಕೊಂಡಿಲ್ಲ. ಜಮೀನು ಮತ್ತು ಮನೆ ಕಳೆದುಕೊಂಡ ನಂತರ ನಾವು ಎಲ್ಲಿಗೆ ಹೋಗಬೇಕು ಎಂದು ಪ್ರಶ್ನಿಸಿದರು. ಬಿಡದಿ ಹೋಬಳಿಯ ಮೇಲೆ ಸರ್ಕಾರದ ಕಣ್ಣು ಬಿದ್ದಂತಿದ್ದು, ಈಗಾಗಲೇ ಕೈಗಾರಿಕೆಗಳು ಹಾಗೂ ಬಿಡದಿ ಟೌನ್‌ಶಿಪ್ ಯೋಜನೆಯಿಂದ ಕೃಷಿ ಭೂಮಿಗೆ ಧಕ್ಕೆ ಉಂಟಾಗಿದೆ. ಈಗ ವಿಮಾನ ನಿಲ್ದಾಣ ಹೆಸರಿನಲ್ಲಿ ಉಳಿದಿರುವ ಕೃಷಿ ಭೂಮಿಯನ್ನೂ ಕಸಿದುಕೊಳ್ಳುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿದರು. ವಿಮಾನ ನಿಲ್ದಾಣ ಕುರಿತು ಗ್ರಾಮವಾರು ಸಭೆ ನಡೆಸಿ ರೈತರ ಅಭಿಪ್ರಾಯ ಹಾಗೂ ಸಹಿ ಸಂಗ್ರಹಿಸಲಾಗುತ್ತಿದ್ದು, ಬಳಿಕ ಸರ್ಕಾರಕ್ಕೆ ಸಲ್ಲಿಸಿ ಪ್ರತಿಭಟನೆ ತೀವ್ರಗೊಳಿಸಲಾಗುವುದು ಎಂದು ತಿಳಿಸಿದರು.

ವ್ಯವಸಾಯವನ್ನೇ ನಂಬಿರುವ ಬಡ ರೈತರು ಭೂಮಿ ಕಳೆದುಕೊಂಡರೆ ಬದುಕಿನ ಆಧಾರವೇ ಕಳೆದುಹೋಗುತ್ತದೆ. ದೇವನಹಳ್ಳಿ ವಿಮಾನ ನಿಲ್ದಾಣಕ್ಕಾಗಿ ಭೂಮಿ ಕಳೆದುಕೊಂಡ ಕೆಲವರು ಇಂದು ಸಣ್ಣಪುಟ್ಟ ಉದ್ಯೋಗಗಳಿಗೆ ಸೀಮಿತರಾಗಿದ್ದಾರೆ. ಸರ್ಕಾರ ನೀಡುವ ಪರಿಹಾರ ಹಣದಿಂದ ಭೂಮಿಯ ಮೌಲ್ಯ, ಜೀವನೋಪಾಯ ಹಾಗೂ ಭಾವನಾತ್ಮಕ ಬಾಂಧವ್ಯವನ್ನು ಮರಳಿ ಪಡೆಯಲು ಸಾಧ್ಯವಿಲ್ಲ ಎಂದು ಹೇಳಿದರು.

### ನಮ್ಮ ಭೂಮಿ ನೀಡುವುದಿಲ್ಲ

ವಿಮಾನ ನಿಲ್ದಾಣಕ್ಕಾಗಿ ನಾವು ಯಾರೂ ಬೇಡಿಕೆ ಸಲ್ಲಿಸಿಲ್ಲ. ವಲಸಿಗರ ಅಭಿವೃದ್ಧಿಗಾಗಿ ನಮ್ಮ ಭೂಮಿ ನೀಡುವುದಿಲ್ಲ. ಈ ಕುರಿತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಹಾಗೂ ಶಾಸಕ ಬಾಲಕೃಷ್ಣ ಅವರಿಗೆ ಮನವಿ ಸಲ್ಲಿಸಲಾಗುವುದು. ಸರ್ಕಾರ ಸ್ಪಂದಿಸದಿದ್ದರೆ ಹೋರಾಟದ ಮೂಲಕ ಭೂಮಿ ಉಳಿಸಿಕೊಳ್ಳಲಾಗುವುದು ಎಂದು ಹೇಳಿದರು.

# ಮಿನಿ ನ್ಯೂಸ್

## ಶಾಸಕರ ಟೀಕಿಸುವ ಬದಲು ಕೇಂದ್ರದಿಂದ ಅನುದಾನ ತನ್ನಿ

• ಉದಯವಾಹಿನಿ, ಚಾಮರಾಜನಗರ

ಶಾಸಕ ಸಿ.ಪುಟ್ಟರಂಗಶೆಟ್ಟಿ ಕ್ಷೇತ್ರ ಅಭಿವೃದ್ಧಿಗೆ ಶ್ರಮಿಸುತ್ತಿದ್ದರೂ ಬಿಜೆಪಿ ಮುಖಂಡರು ಇಲ್ಲಸಲ್ಲದ ಆರೋಪ ಮಾಡುತ್ತಿರುವುದು ಖಂಡನೀಯ ಎಂದು ನಗರಸಭೆ ಮಾಜಿ ಸದಸ್ಯ ಸಿ.ಕೆ.ಮಂಜುನಾಥ್ ಆರೋಪಿಸಿದರು. ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಚಾಮರಾಜನಗರ ಕ್ಷೇತ್ರದ ಶಾಸಕರ ಅಭಿವೃದ್ಧಿ ಶೂನ್ಯ, 2 ಸಾವಿರ ಕೋಟಿ ಅನುದಾನ ತಂದಿರುವುದು ಸುಳ್ಳು ಎಂದು ಆರೋಪ ಮಾಡಿರುವ ಬಿಜೆಪಿ ಮುಖಂಡರು ಕೇಂದ್ರದಿಂದ ಕ್ಷೇತ್ರದ ಅಭಿವೃದ್ಧಿಗೆ ಅನುದಾನ ತರಲಿ ಎಂದು ಸವಾಲು ಹಾಕಿದರು.

ಕ್ಷೇತ್ರ ಅಭಿವೃದ್ಧಿ ಮಾಡಿದ್ದರಿಂದಲೇ ಮತದಾರರು ಪುಟ್ಟರಂಗಶೆಟ್ಟಿ ಅವರನ್ನು ನಾಲ್ಕು ಬಾರಿ ಶಾಸಕರಾಗಿ ಆಯ್ಕೆ ಮಾಡಿದ್ದಾರೆ. ಬಿಜೆಪಿ ಮುಖಂಡರು ಆಧಾರ ರಹಿತ ಆರೋಪ ಮಾಡುವುದು ಸರಿಯಲ್ಲ, ಅಭಿವೃದ್ಧಿ ಕಾಮಗಾರಿಗಳು ನಡೆದಿರುವುದು ಹಾಗೂ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನದ ವಿವರ ಸರಿಯಾಗಿದೆ ಎಂದು ಸಮರ್ಥಿಸಿಕೊಂಡರು.ಕರಿನಂಜನಪುರ ರಸ್ತೆ, ನ್ಯಾಯಾಲಯ ರಸ್ತೆ, ಬಿ.ರಾಚಯ್ಯ ಜೋಡಿರಸ್ತೆ ಅಭಿವೃದ್ಧಿಗೆ ಕೆಲವರು ಅಡ್ಡಿಯಾಗಿದ್ದು ಒತ್ತುವರಿ ತೆರವು ಮಾಡದಂತೆ ತಡೆದಿದ್ದಾರೆ.

## ಆರೋಗ್ಯ ಪಾಲನೆಗೆ ಪ್ರತಿಯೊಬ್ಬರೂ ಆದ್ಯತೆ ನೀಡಬೇಕು -ಡಿ.ಟಿ. ಪ್ರಕಾಶ್




• ಉದಯವಾಹಿನಿ, ಮೈಸೂರು

ಆರೋಗ್ಯ ಪಾಲನೆಗೆ ಪ್ರತಿಯೊಬ್ಬರೂ ಆದ್ಯತೆ ನೀಡಬೇಕು ಎಂದು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ. ಪ್ರಕಾಶ್ ಹೇಳಿದರು.

ನಗರದ ಟಿ.ಕೆ. ಬಡಾವಣೆಯ ರಾಯರ ಮಠದ ಸಾಮಾಜಿಕ ಸೇವಾ ಕಾರ್ಯಕ್ರಮದ ಅಡಿಯಲ್ಲಿ ಕಲ್ಪವೃಕ್ಷ ಪ್ರಾರ್ಥನಾ ಮಂದಿರದಲ್ಲಿ ಶ್ರೀ ಗುರು ರಾಘವೇಂದ್ರ ಸೇವಾ ಟ್ರಸ್ಟ್, ಜಿಲ್ಲಾ ಬ್ರಾಹ್ಮಣ ಸಂಘ ಮತ್ತು ಕರ್ನಾಟಕ ವಿಪ್ರ ವಕೀಲರ ಸಂಘದ ಸಂಯುಕ್ತ ಆಶ್ರಯದಲ್ಲಿ ಸಾರ್ವಜನಿಕರಿಗಾಗಿ ಹಮ್ಮಿಕೊಂಡಿದ್ದ ಹೃದಯ ತಪಾಸಣೆ, ಕೀಲು ಮತ್ತು ಮಂಡಿ ನೋವಿನ ಉಚಿತ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು. ರಾಘವೇಂದ್ರ ಸ್ವಾಮಿಗಳು ಸಕಲ ಸಮುದಾಯಗಳಿಂದಲೂ ಪೂಜಿತರು. ಅವರ ಮಹಾ ಕೃಪೆಯಿಂದಲೇ ಅನೇಕರಿಗೆ ಅನುಗ್ರಹವಾಗಿದೆ. ಅವರ ಸನ್ನಿಧಾನದಲ್ಲಿ ಆರೋಗ್ಯ ಭಾಗ್ಯ ದೊರಕಿಸಿಕೊಡುವ ಉಚಿತ ಶಿಬಿರ ಹಮ್ಮಿಕೊಂಡಿರುವುದು ಶ್ಲಾಘನೀಯ ಎಂದರು. ರಾಘವೇಂದ್ರ ಸೇವಾ ಟ್ರಸ್ಟ್ ಕಾರ್ಯಾಧ್ಯಕ್ಷ ಮತ್ತು ಹಿರಿಯ ವಕೀಲ ಕೆ.ಆರ್. ಶಿವಶಂಕರ್ ಮಾತನಾಡಿ, ಸೇವಾ ಮನೋಭಾವದಿಂದ ಆಯೋಜನೆ ಮಾಡುವ ಕಾರ್ಯಗಳು ಸಮಾಜಕ್ಕೆ ಸದುಪಯೋಗವಾಗಲಿವೆ ಎಂದರು. ಪ್ರತಿವರ್ಷವೂ ರಾಯರ ಮಠದಲ್ಲಿ ಆರೋಗ್ಯ ಸಂಬಂಧಿ ಚಟುವಟಿಕೆಗಳನ್ನು ನಡೆಸಲಾಗುತ್ತಿದೆ. ನೂರಾರು ಜನರ ಸ್ವಾಸ್ಥ್ಯ ಸುಧಾರಣೆಗೆ ಇದು ಪೂರಕವಾಗಿದೆ ಎಂದರು.

## ನೀಟ್ ಅಕ್ರಮ ವಿರುದ್ಧ ಕಾಂಗ್ರೆಸ್ ವತಿಯಿಂದ ಮೇಣದ ಬತ್ತಿ ಪ್ರತಿಭಟನೆ




• ಉದಯವಾಹಿನಿ, ಮಂಡ್ಯ

ನೀಟ್ ಮತ್ತು ಸಿಬಿಎಸ್‌ಇ ಪರೀಕ್ಷೆಗಳಲ್ಲಿನ ಅಕ್ರಮಗಳು ಹಾಗೂ ವಿದ್ಯಾರ್ಥಿಗಳ ಮೇಲೆ ನಡೆದಿರುವ ಅಮಾನುಷ ಹಲ್ಲೆಗಳನ್ನು ಖಂಡಿಸಿ, ವಿದ್ಯಾರ್ಥಿಗಳಿಗೆ ಮನಸ್ಥೈರ್ಯ ತುಂಬುವ ಸಲುವಾಗಿ ಜಿಲ್ಲಾ ಕಾಂಗ್ರೆಸ್ ವತಿಯಿಂದ ಕಾಂಗ್ರೆಸ್ ಕಾರ್ಯಕರ್ತರು ಮೇಣದಬತ್ತಿ ಮೆರವಣಿಗೆ ನಡೆಸಿದರು.

ಜಿಲ್ಲಾ ಕಾಂಗ್ರೆಸ್ ಕಛೇರಿಯಿಂದ ಸರ್ ಎಂವಿ ಪ್ರತಿಮೆವರೆಗೆ ಮೇಣದ ಬತ್ತಿ ಮೆರವಣಿಗೆ ನಡೆಸಿ ಕೇಂದ್ರ ಬಿಜೆಪಿ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಸಿಎಂ ದ್ಯಾವಪ್ಪ ಮಾತನಾಡಿ ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣ ತೀವ್ರ ಸ್ವರೂಪ ಪಡೆದುಕೊಂಡಿದ್ದು, ದೇಶದೆಲ್ಲೆಡೆ ಪ್ರತಿಭಟನೆ ಕಾವು ವಿಕೋಪಕ್ಕೆ ಹೋಗುತ್ತಿದ್ದಂತೆಯ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿರುವುದು ಯುವಜನತೆ ಹಾಗೂ ವಿದ್ಯಾರ್ಥಿಗಳ ಹೋರಾಟಕ್ಕೆ ಜಯ ಸಿಕ್ಕಿದೆ ಎಂದರು. ಕಳೆದ ಹಲವು ದಿನಗಳಿಂದ ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣವನ್ನು ಖಂಡಿಸಿ ದೇಶದ ವಿವಿಧ ಭಾಗಗಳಲ್ಲಿ ವಿದ್ಯಾರ್ಥಿಗಳು, ಅಭ್ಯರ್ಥಿಗಳು ಮತ್ತು ವಿರೋಧ ಪಕ್ಷಗಳು ವ್ಯಾಪಕ ಪ್ರತಿಭಟನೆಗಳನ್ನು ಆಯೋಜಿಸಿದ್ದರು. ಯುವಜನರು ಹಾಗೂ ವಿದ್ಯಾರ್ಥಿಗಳ ಮೇಲೆ ಹಲ್ಲೆ ಮಾಡುತ್ತಿರುವುದನ್ನು ಖಂಡಿಸಿ ರಾಹುಲ್ ಗಾಂಧಿ ಈ ಹೋರಾಟವನ್ನು ಬೆಂಬಲಿಸಿದಾಗ ಅವರ ಮೇಲೆ ಹಲ್ಲೆ ನಡೆಸಿರು ವುದನ್ನು ಖಂಡಿಸಿದರು. ಕೇಂದ್ರ ಬಿಜೆಪಿ ಸರ್ಕಾರದ ಮೊದಲ ವಿಕೆಟ್ ಪತನವಾಗಿದೆ.

## ಸ್ವಂತ ಹಣದಿಂದ ರಸ್ತೆ ಗುಂಡಿ ಮುಚ್ಚಿದ ಕೂಲಿ ಕಾರ್ಮಿಕ!




• ಉದಯವಾಹಿನಿ, ಚಾಮರಾಜನಗರ

ನಿತ್ಯ ಸಾವಿರಾರು ವಾಹನಗಳು ಓಡಾಡುವ, ಆಸ್ಪತ್ರೆ ಮತ್ತು ಶಾಲಾ-ಕಾಲೇಜಿಗೆ ಸಂಪರ್ಕ ಕಲ್ಪಿಸುವ ಮುಖ್ಯ ರಸ್ತೆ ಅವ್ಯವಸ್ಥೆಗೆ ಬೇಸತ್ತ ಕೂಲಿ ಮಾಡುವ ಬಡ ಕಾರ್ಮಿಕ ರಸ್ತೆ ಗುಂಡಿಗಳಿಗೆ ಮಣ್ಣು ಮುಚ್ಚಿದ್ದಾರೆ. ನಗರಸಭೆ, ಶಾಸಕರ ವಿರುದ್ಧ ವಾಹನ ಸವಾರರು, ಸ್ಥಳೀಯರು ಕಿಡಿಕಾರಿದ್ದಾರೆ. ನಿತ್ಯ ಸಹಸ್ರಾರು ವಾಹನಗಳು ಓಡಾಡುವ ಚಾಮರಾಜನಗರ ಜಿಲ್ಲಾ ಕೇಂದ್ರದ ಪ್ರಮುಖ ರಸ್ತೆಯಾಗಿರುವ ಚಾಮರಾಜನಗರ- ಗುಂಡ್ಲುಪೇಟೆ ಮುಖ್ಯ ರಸ್ತೆಯಲ್ಲಿ ಹೆಜ್ಜೆಗೊಂದರಂತೆ ಗುಂಡಿ ಬಿದ್ದಿದ್ದು ವಾಹನ ಸವಾರರು ಹೈರಾಣಾಗಿದ್ದಾರೆ. ನಿತ್ಯ ವಾಹನ ಸವಾರರ ಪರದಾಟ ನೋಡುತ್ತಿದ್ದ ಕೂಲಿ ಕಾರ್ಮಿಕ ಷಫೀವುಲ್ಲಾ ಎಂಬುವರು ತಮ್ಮ ಹಣ ಖರ್ಚು ಮಾಡಿ ಗುಂಡಿಗೆ ಮಣ್ಣು ಸುರಿದು ಮುಚ್ಚುವ ಕೆಲಸ ಮಾಡುತ್ತಿದ್ದು, ಆಡಳಿತದ ಹದಗೆಟ್ಟ ವ್ಯವಸ್ಥೆಗೆ ಕನ್ನಡಿಯಾಗಿದೆ.

ಬಡ ಕೂಲಿ ಕಾರ್ಮಿಕ ರಸ್ತೆ ಗುಂಡಿಗಳಿಗೆ ಮಣ್ಣು ಹಾಕಿ ಮುಚ್ಚಿರುವ ಬಗ್ಗೆ ಮಾತನಾಡಿದರು. ಶಾಲಾ-ಕಾಲೇಜು, ಸ್ಮಶಾನ, ಆಸ್ಪತ್ರೆ ಹಾಗೂ ಗುಂಡ್ಲುಪೇಟೆಗೆ ಸಂಪರ್ಕ ಕಲ್ಪಿಸುವ ರಸ್ತೆ ಸರಿಪಡಿಸುವಂತೆ ಸಾಕಷ್ಟು ಬಾರಿ ಮನವಿ ಕೊಟ್ಟರೂ, ಅಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ಉಪಯೋಗವಾಗದ ಹಿನ್ನೆಲೆ ಷಫೀವುಲ್ಲಾ ತಾವೇ ಮಣ್ಣು ಸುರಿದು ವಾಹನ ಸವಾರರ ಜಂಟಾಟ ತಪ್ಪಿಸಲು ಅಳಿಲು ಸೇವೆ ಮಾಡಿದ್ದಾರೆ.

# ಹಾಸನದಲ್ಲಿ 94,680 ಮತದಾರರ ಹೆಸರು ಡಿಲೀಟ್

## ಜಿಲ್ಲೆಯ ಏಳು ವಿಧಾನಸಭೆ ಕ್ಷೇತ್ರದ 15,42,802 ಮತದಾರರಿದ್ದು, ಈ ಪೈಕಿ 43,264 ಮತದಾರರು ಮೃತಪಟ್ಟಿದ್ದಾರೆ.

• **ಉದಯವಾಹಿನಿ, ಹಾಸನ:**

ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ(ಎಸ್‌ಐಆರ್) ಪ್ರಕ್ರಿಯೆ ಶೇ.84.61 ರಷ್ಟು ಪೂರ್ಣಗೊಂಡಿದೆ. ಈವರೆಗೆ ಒಟ್ಟು 94,680 ಪತ್ತೆಯಾಗದ ಮತದಾರರ

**1 : ಶ್ರವಣಬೆಳಗೊಳ- 214454- 7228- 5398**
**2 : ಅರಸೀಕೆರೆ - 221014 -3741 - 4669**
**3 : ಬೇಲೂರು -204786- 6355- 4717**
**4 : ಹಾಸನ- 235943- 6429- 6894**
**5 : ಹೊಳೆನರಸೀಪುರ- 224676- 8790 -6425**
**6 : ಅರಕಲಗೂಡು- 236667 -4292 -5225**
**7 : ಸಕಲೇಶಪುರ- 205262 -43,264 -6157**

ಹೆಸರನ್ನು ಪಟ್ಟಿಯಿಂದ ಡಿಲೀಟ್ ಮಾಡಲಾಗಿದೆ.

ಜಿಲ್ಲೆಯ ಏಳು ವಿಧಾನಸಭೆ ಕ್ಷೇತ್ರದ 15,42,802 ಮತದಾರರಿದ್ದು, ಈ ಪೈಕಿ 43,264 ಮತದಾರರು ಮೃತಪಟ್ಟಿದ್ದಾರೆ. 39,485 ಮತದಾರರು ಶಾಶ್ವತವಾಗಿ ಬೇರೆಡೆ ಸ್ಥಳಾಂತರಗೊಂಡಿದ್ದಾರೆ. ಎರಡೆರಡು ಸ್ಥಳದಲ್ಲಿ ಮತದಾನದ ಹಕ್ಕು ಹೊಂದಿದ್ದ 8,689 ಮತದಾರರನ್ನು ಪಟ್ಟಿಯಿಂದ ಕೈಬಿಡಲಾಗಿದೆ. ವಿಳಾಸದಲ್ಲಿಯೇ ಇಲ್ಲದಿರುವ 2946 ಹಾಗೂ ಇತರೆ 296 ಮತದಾರರ ಹೆಸರನ್ನು ಪರಿಷ್ಕರಣೆ ವೇಳೆ ಡಿಲೀಟ್ ಮಾಡಲಾಗಿದೆ. ಅರ್ಹ ಮತದಾರರ ಹೆಸರು ಕೈಬಿಟ್ಟು ಹೋಗಿದ್ದಲ್ಲಿ ಆಕ್ಷೇಪಣೆ ದಾಖಲಿಸಿ ಅರ್ಜಿ ನಮೂನೆ -6 ರಲ್ಲಿಸಲ್ಲಿಸಿ ಪಟ್ಟಿಗೆ ಸೇರಿಸಬಹುದಾಗಿದೆ ಎನ್ನುತ್ತಾರೆ ಜಿಲ್ಲಾಧಿಕಾರಿ ಲತಾಕುಮಾರಿ. ಹಾಸನ ವಿಧಾನಸಭೆ ಕ್ಷೇತ್ರದಲ್ಲಿಅತಿ ಹೆಚ್ಚು 16,712 ಮತದಾರರ ಹೆಸರನ್ನು ಪಟ್ಟಿಯಿಂದ ಕೈಬಿಡಲಾಗಿದೆ. ಶ್ರವಣಬೆಳಗೊಳದಲ್ಲಿ14,278, ಅರಸೀಕೆರೆ ಕ್ಷೇತ್ರದಲ್ಲಿ 9,496, ಬೇಲೂರು 12,267, ಹೊಳೆನರಸೀಪುರ 14331, ಅರಕಲಗೂಡು 15,569, ಸಕಲೇಶಪುರ ಕ್ಷೇತ್ರದಲ್ಲಿ 12027 ಮತದಾರರು ಸೇರಿ 94,680 ಮತದಾರರ ಹೆಸರು ಕೈಬಿಡಲಾಗಿದೆ. ಈ ಸಂಖ್ಯೆ ಇನ್ನು ಅಧಿಕವಾಗುವ ಸಾಧ್ಯತೆ ಇದೆ ಎನ್ನುತ್ತಾರೆ ಅಧಿಕಾರಿಗಳು. ಮತದಾರರ ಪಟ್ಟಿಯ ಎನ್ಯುಮರೇಷನ್ ಅರ್ಜಿಯನ್ನು ಮನೆ ಬಾಗಿಲಿಗೆ ಸಲ್ಲಿಸಿ ವಾರ ಕಳೆಯುತ್ತಾ ಬಂದರೂ ಕೆಲವರು ಭರ್ತಿ ಮಾಡಿಲ್ಲ. ಹೀಗಾಗಿ ಬಿಎಲ್‌ಒಗಳೇ ಸಮಗ್ರ ಮಾಹಿತಿ ಪಡೆದು ಭರ್ತಿ ಮಾಡುವ ಅನಿವಾರ್ಯತೆ ಎದುರಾಗಿದೆ. ಅಷ್ಟೇ ಅಲ್ಲದೆ ಒಂದಿಷ್ಟು ಜನ ಈ ಪ್ರಕ್ರಿಯೆಯನ್ನು ಗಂಭೀರವಾಗಿ ಪರಿಗಣಿಸಿದಂತೆ ಕಾಣುತ್ತಿಲ್ಲ ಎಂಬ ಸಂಗತಿ ಪ್ರಕ್ರಿಯೆ ವೇಳೆ ಕಂಡುಬಂದಿದೆ ಎನ್ನುತ್ತಿದ್ದಾರೆ ಸಿಬ್ಬಂದಿ. ಮತದಾರರು ವಿಳಾಸದಲ್ಲಿ ಇಲ್ಲದಿರುವವರನ್ನು ಪತ್ತೆ ಮಾಡುವುದು ಬಿಎಲ್‌ಒಗಳಿಗೆ ದೊಡ್ಡ ತಲೆನೋವಾಗಿ ಪರಿಣಮಿಸಿದೆ. ಅಕ್ಕ ಪಕ್ಕದವರನ್ನು ಕೇಳಿದರೆ ಅವರು ಇಲ್ಲಿಂದ ಹೋಗಿ ಹಲವಾರು ವರ್ಷಗಳೇ ಆಗಿದೆ. ಎಲ್ಲಿಹೋಗಿದ್ದಾರೋ ಗೊತ್ತಿಲ್ಲ, ಇಲ್ಲವೇ ಬದುಕಿದ್ದಾರೆಯೋ ಎಂಬುದು ನಿಖರವಿಲ್ಲ ಎಂಬ ಉತ್ತರವೂ ಬರುತ್ತಿದೆ. ಹೀಗಾಗಿ ಹಲವು ಬಾರಿ ಮನೆ ಬಾಗಿಲಿಗೆ ಹೋಗಿ ಹಿಂತಿರುಗುವ ಜತೆಗೆ ಅರ್ಹ ಮತದಾರರ ಹೆಸರು ಪಟ್ಟಿಯಿಂದ ಬಿಟ್ಟುಹೋಗಬಾರದು ಎಂಬ ಉದ್ದೇಶದಿಂದ ಎಲ್ಲಿಯಾದರೂ ಇದ್ದಾರೆಯೇ ಎಂದು ಪತ್ತೆಮಾಡುವ ಕೆಲಸವನ್ನು ಮಾಡುತ್ತಿದ್ದೇವೆ ಎನ್ನುತ್ತಿದ್ದಾರೆ ಸಿಬ್ಬಂದಿ.


ಉದಯವಾಹಿನಿ ಚಿತ್ರ

> ಜಿಲ್ಲೆಯಲ್ಲಿ ಇನ್ನು 1.50 ಲಕ್ಷಕ್ಕೂ ಹೆಚ್ಚು ಮಂದಿ ಎನ್ಯುಮರೇಷನ್ ಅರ್ಜಿಯನ್ನು ಹಿಂತಿರುಗಿಸಿಲ್ಲ. ಮತದಾರರು ಅರ್ಜಿಯನ್ನು ದಯವಿಟ್ಟು ಹಿಂತಿರುಗಿಸಬೇಕು. ಮಾಹಿತಿ ಇಲ್ಲವಾದರೂ ವಾಪಸ್ ಕೊಡಿ. ನಮ್ಮ ಅಧಿಕಾರಿಗಳು ಪರಿಶೀಲನೆ ಮಾಡುತ್ತಾರೆ ಎಂದಿದ್ದಾರೆ.- ಲತಾಕುಮಾರಿ ಜಿಲ್ಲಾಧಿಕಾರಿ

### ಮುನ್ನೆಚ್ಚರಿಕೆ ವಹಿಸಬೇಕು

**ಪ್ರಮುಖ ಪಕ್ಷ ಬಿಜೆಪಿ, ಜೆಡಿಎಸ್‌ನ ಪಾಲಿಕೆ ಸದಸ್ಯರು, ಸ್ಥಳೀಯ ಸಂಸ್ಥೆ ಹಾಗೂ ಪಕ್ಷದ ಮುಖಂಡರು ತಮ್ಮ ವಾರ್ಡಿನ, ಊರಿನ, ಗ್ರಾಮದ ಮತದಾರರ ಹೆಸರು ಪಟ್ಟಿಯಿಂದ ಕೈಬಿಟ್ಟು ಹೋಗದಂತೆ ಮುನ್ನೆಚ್ಚರಿಕೆ ವಹಿಸುತ್ತಿದ್ದಾರೆ.**

# ರೈಲ್ವೆ ಮೇಲ್ಸೇತುವೆ ನಿರ್ಮಾಣಕ್ಕೆ ಜಾಗ ನೀಡಿದ ನಿವಾಸಿಗಳ ಋಣ ತೀರಿಸಲಾಗದು


• **ಉದಯವಾಹಿನಿ, ಹೊಸಪೇಟೆ.**

ನಗರದ ಹಂಪಿ ರಸ್ತೆಯಲ್ಲಿನ ಅನಂತಶಯನಗುಡಿ ರೈಲ್ವೆ ಮೇಲ್ಸೇತುವೆ ನಿರ್ಮಾಣ ಹಾಗೂ ಮೂಲ ಸೌಕರ್ಯ ಅಭಿವೃದ್ಧಿಗೆ ತಮ್ಮ ಮನೆಗಳನ್ನು ತೆರವು ಮಾಡುವ ಮೂಲಕ ಜಾಗ ನೀಡಿದ ಸ್ಥಳೀಯ ನಿವಾಸಿಗಳ ಋಣ ತೀರಿಸಲಾಗದು ಎಂದು ಶಾಸಕ ಹೆಚ್.ಆರ್. ಗವಿಯಪ್ಪ ಹೇಳಿದರು. ನಗರದ ಅನಂತಶಯನಗುಡಿ ಹತ್ತಿರ ರೈಲ್ವೆ ಮೇಲ್ಸೇತುವೆ ಕಾಮಗಾರಿಗೆ ಮನೆ ಕಳೆದುಕೊಂಡವರಿಗೆ ಹಕ್ಕು ಪತ್ರ ವಿತರಿಸಿ ಮಾತನಾಡಿದ ಅವರು, ಸ್ವಂತ ಮನೆಯನ್ನು ತೆರವುಗೊಳಿಸುವುದು ಸಣ್ಣ ವಿಷಯವಲ್ಲ. ಮಕ್ಕಳಿಗೆ ಪೆಟ್ಟು ಬಿದ್ದರೆ ತಾಯಂದಿರಿಗೆ ಎಷ್ಟೋ ನೋವಾಗುತ್ತದೆಯೋ, ಕಟ್ಟಿಸಿದ ಮನೆ ಒಡೆದಾಗಲೂ ಅಷ್ಟೇ ನೋವಾಗುತ್ತದೆ.

ಆದಾಗ್ಯೂ, ಊರಿನ ಅಭಿವೃದ್ಧಿ ಹಿತದೃಷ್ಟಿಯಿಂದ ಜಾಗ ಬಿಟ್ಟುಕೊಟ್ಟು ದೊಡ್ಡ ಮನಸ್ಸು ಮಾಡಿದ್ದೀರಿ ಎಂದು ಅನಂತಶಯನಗುಡಿ ನಿವಾಸಿಗಳ ತ್ಯಾಗವನ್ನು ಸ್ಮರಿಸಿದರು.

ಸಂತ್ರಸ್ತರಿಗೆ ನೀಡಲಾಗಿರುವ ಜಾಗದಲ್ಲಿ ಲೇಔಟ್ ಅಭಿವೃದ್ಧಿ, ಒಳ ಚರಂಡಿ ವ್ಯವಸ್ಥೆ ಹಾಗೂ ರಸ್ತೆ ಕಾಮಗಾರಿಗಳನ್ನು ತಕ್ಷಣವೇ ಪೂರ್ಣಗೊಳಿಸಲು ಅಧಿಕಾರಿಗಳಿಗೆ ನಿರ್ದೇಶಿಸಿದರು.

ಸಹಾಯಕ ಆಯುಕ್ತರಾದ ಪಿ. ವಿವೇಕಾನಂದ ಮಾತನಾಡಿ, ದಶಕಗಳಿಂದ ನೆನೆಗುದಿಗೆ ಬಿದ್ದಿದ್ದ ಆನಂದಶಯನಗುಡಿ ರೈಲ್ವೆ ಮೇಲ್ಸೇತುವೆ ಕಾಮಗಾರಿಯಿಂದಾಗಿ ಮನೆ ಕಳೆದುಕೊಂಡ ಸಂತ್ರಸ್ತರಿಗೆ ನಿವೇಶನ ಹಕ್ಕುಪತ್ರಗಳನ್ನು ವಿತರಿಸಲಾಗಿದ್ದು, ಶಾಸಕರ ಶ್ರಮದಿಂದ ಅಂತಿಮ ರೂಪ ಪಡೆದುಕೊಂಡಿದೆ. ಸಂತ್ರಸ್ತರಿಗೆ ಕೇವಲ ಪರಿಹಾರ ಧನಕ್ಕೆ ಕಾಯಿಸದೆ, ಅವರಿಗೆ ತಕ್ಷಣವೇ ನಿವೇಶನಗಳನ್ನು ಗುರುತಿಸಿ, ರಾಜೀವ್ ಗಾಂಧಿ ವಸತಿ ನಿಗಮದ ಮೂಲಕ ಅಗತ್ಯ ಲೇಔಟ್ ಪ್ಲಾನ್ ಸಿದ್ಧಪಡಿಸಿ ಒಟ್ಟು 48 ಫಲಾನುಭವಿಗಳಿಗೆ ಹಕ್ಕುಪತ್ರಗಳನ್ನು ವಿತರಿಸಲಾಗಿದೆ ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

> **ಸಂತ್ರಸ್ತರಿಗೆ ಸಿಗಬೇಕಾದ ಹಣಕಾಸಿನ ನೆರವು ಹಾಗೂ ವಸತಿ ಮಂಡಳಿಯಿಂದ ಹೆಚ್ಚುವರಿ ಮನೆಗಳನ್ನು ಮಂಜೂರು ಮಾಡಿಸಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅವರನ್ನು ನಿಯೋಗದೊಂದಿಗೆ ಭೇಟಿಯಾಗಿ ಮನವಿ ಸಲ್ಲಿಸಲಾಗುವುದು ಎಂದು ಭರವಸೆ ನೀಡಿದರು.**

# ಭಾಲ್ಕಿ ಹುಮನಾಬಾದ್ ರಸ್ತೆ ತಡೆದು ಬೃಹತ್ ಪ್ರತಿಭಟನೆ

• **ಉದಯವಾಹಿನಿ, ಹುಮನಾಬಾದ:**

ಸರ್ಕಾರಿ ಆರೋಗ್ಯ ಕೇಂದ್ರದಲ್ಲಿ ಸೂಕ್ತ ಸಮಯಕ್ಕೆ ವೈದ್ಯಕೀಯ ಸೇವೆ ಲಭ್ಯವಾಗದ ಕಾರಣ ವ್ಯಕ್ತಿಯೊಬ್ಬರು ಮೃತಪಟ್ಟಿದ್ದಾರೆ ಎಂದು ಆರೋಪಿಸಿ, ದುಬಲಗುಂಡಿ ಗ್ರಾಮಸ್ಥರು ರಸ್ತೆಯಲ್ಲಿ ಶವವನ್ನಿಟ್ಟು ರಸ್ತೆ ತಡೆ ನಡೆಸಿ ತೀವ್ರ ಪ್ರತಿಭಟನೆ ನಡೆಸಿದ ಘಟನೆ ಶನಿವಾರ ನಡೆದಿದೆ. ದುಬಲಗುಂಡಿ ಗ್ರಾಮದ ನಿವಾಸಿ ತುಕಾರಾಮ ನಿಂಬೂರೆ ಮೃತಪಟ್ಟ ದುರ್ದೈವಿ ಎಂದು ಗುರುತಿಸಲಾಗಿದೆ.

ಮಂದಿರಕ್ಕೆ ತೆರಳಿದ್ದ ಸಂದರ್ಭದಲ್ಲಿ ತುಕಾರಾಮ್ ಅವರು ಹಠಾತ್ ಮೂರ್ಛೆ ಹೋಗಿ ಬಿದ್ದಿದ್ದಾರೆ. ಸ್ಥಳದಲ್ಲಿದ್ದ ಸಾರ್ವಜನಿಕರು ತಕ್ಷಣವೇ ಅವರನ್ನು ಸ್ಥಳೀಯ ಸರ್ಕಾರಿ ಆರೋಗ್ಯ ಕೇಂದ್ರಕ್ಕೆ ದಾಖಲಿಸಿದ್ದಾರೆ. ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ನೀಡಿದ ವೈದ್ಯರು, ಹೆಚ್ಚಿನ ಚಿಕಿತ್ಸೆಗಾಗಿ ಬೇರೆ ಆಸ್ಪತ್ರೆಗೆ ಕರೆದುಕೊಂಡು ಹೋಗುವಂತೆ ಸೂಚಿಸಿದ್ದಾರೆ. ಆದರೆ, ಆಸ್ಪತ್ರೆಯ ಆಂಬುಲೆನ್ಸ್ ಚಾಲಕ ಸ್ಥಳದಲ್ಲಿ ಇಲ್ಲದ ಕಾರಣ ಸುಮಾರು 45 ನಿಮಿಷಗಳ ಕಾಲ ವಿಳಂಬವಾಗಿದೆ. ಸೂಕ್ತ ಸಮಯಕ್ಕೆ ರೋಗಿಯನ್ನು ಕರೆದೊಯ್ಯಲು ಸಾಧ್ಯವಾಗದೆ, ತುಕಾರಾಮ್ ಆರೋಗ್ಯ ಕೇಂದ್ರದಲ್ಲೇ ಕೊನೆಯುಸಿರೆಳೆದಿದ್ದಾರೆ. ಆಸ್ಪತ್ರೆಯಲ್ಲಿ ಇರುವ ಏಕೈಕ ಆಂಬುಲೆನ್ಸ್‌ಗೆ ಒಬ್ಬನೇ ಚಾಲಕನಿದ್ದು, ಆತ ರಾತ್ರಿ ಪಾಳಿಯಲ್ಲಿ ಕೆಲಸ ನಿರ್ವಹಿಸಿ ಹೋಗಿದ್ದರಿಂದ ಈ ಅವಘಡ ಸಂಭವಿಸಿದೆ ಎಂದು ತಿಳಿದುಬಂದಿದೆ. ಸರಿಪಡಿಸುವಂತೆ ಅನೇಕ ಬಾರಿ ಮನವಿ ಮಾಡಿದರೂ ಜಿಲ್ಲಾ ಆರೋಗ್ಯ ಅಧಿಕಾರಿಗಳು ಯಾವುದೇ ಸೂಕ್ತ ಕ್ರಮ ಕೈಗೊಂಡಿಲ್ಲ. ಇವರ ನಿರ್ಲಕ್ಷ್ಯದಿಂದಲೇ ಅಮಾಯಕ ಜೀವ ಬಲಿಯಾಗಿದೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು. ಗ್ರಾಮಸ್ಥರು

# ಲೈಫ್ ಸರ್ಟಿಫಿಕೇಟ್ ಸ್ವಯಂ ಸಾಧನೆಯಿಂದಷ್ಟೇ ಸಾಧ್ಯ

• **ಉದಯವಾಹಿನಿ, ಕಲಬುರಗಿ,:**

ಸಮಾಜದಲ್ಲಿ ಜನನ ಮತ್ತು ಮರಣ ಪ್ರಮಾಣ ಪತ್ರಗಳನ್ನು ಸುಲಭವಾಗಿ ಪಡೆಯಬಹುದು. ಆದರೆ ಬದುಕಿಗೆ ಸಾರ್ಥಕತೆ ನೀಡುವ ಲೈಫ್ ಸರ್ಟಿಫಿಕೇಟ್ ಕೊಡುವ ಯಾವುದೇ ಕೇಂದ್ರಗಳು ಈ ಜಗತ್ತಿನಲ್ಲಿಲ್ಲ. ಅದನ್ನು ಪ್ರತಿಯೊಬ್ಬರೂ ತಮ್ಮ ಸ್ವಯಂ ಸಾಧನೆಯಿಂದಲೇ ಪಡೆದುಕೊಳ್ಳಬೇಕು'', ಇದು ಶರಣರ, ಸಂತ-ಮಹಾಂತರ ಹಾಗು ದಾರ್ಶನಿಕರಾದ ನ್ಯಾಯಮೂರ್ತಿಗಳ ಅನುಭವಗಳ ಮಾರ್ಗದಿಂದ ಸಾಧ್ಯ ಎಂದು ಕಲ್ಯಾಣ ಆಶ್ರಮದ ಪ್ರವಚನ ಯೋಗಿ ಮಹಾಂತ ಸ್ವಾಮಿಗಳು ಮುದ್ಗಲ್ ಅವರು ಹೇಳಿದರು.

ನ್ಯಾಯಮೂರ್ತಿ ಶಿವರಾಜ ವಿ. ಪಾಟೀಲ್ ಪ್ರತಿಷ್ಠಾನ ರಾಯಚೂರು, ಸರ್ವಜ್ಞ ಮತ್ತು ಜಸ್ಟಿಸ್ ಶಿವರಾಜ ಪಾಟೀಲ್ ಪದವಿ ಪೂರ್ವ ವಿಜ್ಞಾನ ಮಹಾವಿದ್ಯಾಲಯ ಹಾಗೂ ಸರ್ವಜ್ಞ ಆಂಗ್ಲ ಮಾಧ್ಯಮ ಪ್ರೌಢ ಶಾಲೆಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿರುವ ''ಮುಂಜಾವಿಗೊಂದು ನುಡಿ ಕಿರಣಗಳ ದರ್ಶನ ಎಂಬ 9 ದಿನಗಳ ವಿಶೇಷ ಪ್ರವಚನ ಮಾಲಿಕೆಯ ದ್ವಿತಿಯ ದಿನದಂದು ಅವರು ಆಶೀರ್ವಚನ ನೀಡಿದರು.

ಮುಂದುವರಿದು ಮಾತನಾಡಿದ ಶ್ರೀಗಳು, ಸೂರ್ಯನ ಆಗಮನದಿಂದ ಉತ್ತಮ ಚಟುವಟಿಕೆಗಳು ಪ್ರಾರಂಭ ಹೇಗೋ ಹಾಗೆ ನ್ಯಾಯಮೂರ್ತಿಗಳಾದ ಡಾ. ಶಿವರಾಜ್ ಪಾಟೀಲ ಅವರು ರಚಿಸಿದ 'ನುಡಿ ಕಿರಣ' ಪುಸ್ತಕದಲ್ಲಿನ ಮೌಲ್ಯಗಳು ನಮ್ಮ ಬದುಕನ್ನು ಬೆಳಗಿಸುವ, ಉಜ್ಜಲಗೊಳಿಸುವ ಹಾಗೂ ಆದರ್ಶವಾಗಿಸುವ ಅಪಾರ ಶಕ್ತಿಯನ್ನು ಹೊಂದಿವೆ. ದೇವಾಲಯಗಳ ಶಿಖರಗಳಿಗೆ ಹಣವಿದ್ದವರು ಬಂಗಾರದ ಕಳಸ ಕೊಡಿಸಬಹುದು ಆದರೆ ನಿಮ್ಮ ಶಿರ ಹೊನ್ನ ಕಳಸ ವಾಗುವುದು ಇಂಥ ಮಹಾತ್ಮರ ಹೊನ್ನಕಿರಣ ಗಳಿಂದ ಸನ್ಮಾರ್ಗದಲ್ಲಿ ಸಾಗಿ, ಸದ್ಗುಣಿ ಗಳಾದಾಗ ಮಾತ್ರ ಎಂದು ಬೋಧಿಸಿದರು.



ಉದಯವಾಹಿನಿ ಚಿತ್ರ

# ಅಭಿವೃದ್ಧಿ ಯೋಜನೆಗೆ ಫಲಿತಾಂಶ ಆಧಾರಿತ ಮೇಲ್ವಿಚಾರಣೆ ಅಗತ್ಯ

• **ಉದಯವಾಹಿನಿ ಯಾದಗಿರಿ :**

ಪ್ರಧಾನಮಂತ್ರಿ ಜನ ವಿಕಾಸ್ ಕಾರ್ಯಕ್ರಮ (ಪಿಎಂಜೆವಿಕೆ) ಅಡಿಯಲ್ಲಿ ಜಾರಿಯಾಗುತ್ತಿರುವ ಅಲ್ಪಸಂಖ್ಯಾತರ ಅಭಿವೃದ್ಧಿ ಯೋಜನೆಗೆ ಫಲಿತಾಂಶ ಆಧಾರಿತ ಮೇಲ್ವಿಚಾರಣಾ ವ್ಯವಸ್ಥೆ ಜಾರಿಗೊಳಿಸಬೇಕು ಎಂದು ರಾಯಚೂರು ಲೋಕಸಭಾ ಕ್ಷೇತ್ರದ ಸಂಸದ ಜಿ. ಕುಮಾರ ನಾಯಕ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಈ ಕುರಿತು ಸಂಸತ್ತಿನಲ್ಲಿ ಕೇಳಿದ ಪ್ರಶ್ನೆಗೆ ಕೇಂದ್ರ ಸರ್ಕಾರ ನೀಡಿರುವ ಉತ್ತರವನ್ನು ಉಲ್ಲೇಖಿಸಿ ಅವರು ಪತ್ರಿಕಾ ಪ್ರಕಟಣೆ ಹೊರಡಿಸಿದ್ದು, ಅಲ್ಪಸಂಖ್ಯಾತರು ಹೆಚ್ಚಿರುವ ಜಿಲ್ಲೆಗಳ ಮೂಲಸೌಕರ್ಯ ಕೊರತೆ, ಸಾಮಾಜಿಕ-ಆರ್ಥಿಕ ಸೂಚ್ಯಂಕಗಳು ಹಾಗೂ ಮುಂದಿನ ಅಭಿವೃದ್ಧಿ ಅಗತ್ಯಗಳ ಕುರಿತು ಕೇಂದ್ರ ಸರ್ಕಾರ ಯಾವುದೇ ಸಮಗ್ರ ಮಾಹಿತಿ ಸಂಗ್ರಹಿಸುತ್ತಿಲ್ಲ ಎಂಬುದು ಆತಂಕಕಾರಿ ಎಂದು ತಿಳಿಸಿದ್ದಾರೆ. ಯೋಜನೆಯ ಫಲಾನುಭವಿ ಪ್ರದೇಶಗಳನ್ನು ಯಾವ ಮಾನದಂಡದ ಆಧಾರದ ಮೇಲೆ ಆಯ್ಕೆ ಮಾಡಲಾಗಿದೆ ಹಾಗೂ ಸ್ಥಳೀಯ ಅಗತ್ಯಗಳನ್ನು ಹೇಗೆ ಗುರುತಿಸಲಾಗಿದೆ ಎಂಬುದರ ಕುರಿತು ಕೇಂದ್ರ ಮಟ್ಟದಲ್ಲಿ ಯಾವುದೇ ಕೇಂದ್ರೀಕೃತ ಮಾಹಿತಿ ಇಲ್ಲ ಎಂದು ಸಚಿವಾಲಯವೇ ಸ್ಪಷ್ಟಪಡಿಸಿದೆ ಎಂದು ಅವರು ಹೇಳಿದ್ದಾರೆ. 2021-22ರಿಂದ 2025-26ರವರೆಗೆ ಕರ್ನಾಟಕದಲ್ಲಿ ಪಿಎಂಜೆವಿಕೆ ಯೋಜನೆಯಡಿ 699 ಯೋಜನೆಗಳು ಅಥವಾ ಫಲಾನುಭವಿಗಳನ್ನು ದಾಖಲಿಸಲಾಗಿದ್ದು, 7 ಕೋಟಿಗೂ ಅಧಿಕ ಅನುದಾನ ಬಿಡುಗಡೆಯಾಗಿದೆ. ಆದರೆ ಯೋಜನೆಯ ಪರಿಣಾಮವನ್ನು ಅಳೆಯಲು ಅಗತ್ಯವಾದ ಮೌಲ್ಯಮಾಪನ ವ್ಯವಸ್ಥೆಯ ಕೊರತೆಯಿಂದ ಸಾರ್ವಜನಿಕ ಹಣದ ಸದ್ಬಳಕೆ ಹಾಗೂ ಯೋಜನೆಯ ಯಶಸ್ಸು ಎಷ್ಟರ ಮಟ್ಟಿಗೆ ಸಾಧನೆಯಾಗಿದೆ ಎಂಬುದನ್ನು ಸ್ಪಷ್ಟವಾಗಿ ತಿಳಿಯಲು ಸಾಧ್ಯವಾಗುತ್ತಿಲ್ಲ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

> **ಜಿಲ್ಲಾವಾರು ಮಾಹಿತಿ ಲಭ್ಯವಿಲ್ಲದಿದ್ದರೆ ಸ್ಥಳೀಯ ಸಮಸ್ಯೆಗಳಿಗೆ ಸೂಕ್ತ ಪರಿಹಾರ ರೂಪಿಸಲು ಸಾಧ್ಯವಾಗುವುದಿಲ್ಲ. ಸಾರ್ವಜನಿಕ ಹಣದ ವೆಚ್ಚದ ಜೊತೆಗೆ ಅದರ ಫಲಿತಾಂಶಗಳ ಪಾರದರ್ಶಕ ಮೌಲ್ಯಮಾಪನವೂ ನಡೆಯಬೇಕು ಎಂದು ಅವರು ಹೇಳಿದರು.**
> -ಜಿ. ಕುಮಾರ ನಾಯಕ


ಉದಯವಾಹಿನಿ ಚಿತ್ರ

# ಸಮಾಜದ ಅಭಿವೃದ್ಧಿಗೆ ಕ್ರೈಸ್ತ ಮಿಷನರಿಗಳ ಬದುಕು ಮುಡುಪು

• **ಉದಯವಾಹಿನಿ, ಬೀದರ್:**

ಕ್ರೈಸ್ತ ಮಿಷನರಿಗಳು ಪ್ರಾತಃ ಸ್ಮರಣೀಯರು. ಸಮಾಜದ ವಿವಿಧ ಕ್ಷೇತ್ರಗಳ ಅಭಿವೃದ್ಧಿಗಾಗಿ ತಮ್ಮ ಬದುಕನ್ನೇ ಮುಡುಪಾಗಿಟ್ಟಿದ್ದಾರೆ ಎಂದು ಸೇಂಟ್ ಪೌಲ್ ಮೆಥೋಡಿಸ್ಟ್ ಕೇಂದ್ರ ಸಭೆಯ (ಉತ್ತರ) ಜಿಲ್ಲಾ ಮೇಲ್ವಿಚಾರಕ ರೆವರೆಂಡ್ ಡಿಸೋಜ ಥಾಮಸ್ ಅಭಿಪ್ರಾಯಪಟ್ಟರು. ನಗರದ ಮಂಗಲಪೇಟ್‌ನ ರೆವರೆಂಡ್ ಎಂ.ಡಿ. ರಾಸ್ ಮೆಮೋರಿಯಲ್ ಚರ್ಚನಲ್ಲಿ ಗುರುವಾರ ನಡೆದ ರೆವರೆಂಡ್ ಜೆ. ಟಿ. ಸಿಮಂಡ್ಸ್ ಕನ್ನಡ ಸಾಹಿತ್ಯ ಸಂಘದ ನಾಲ್ಕನೆಯ ವರ್ಷಾಚರಣೆಯ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು. ನಮ್ಮ ಇಂದಿನ ವ್ಯವಸ್ಥಿತ ಬದುಕಿನ ಹಿಂದೆ ಮಿಷನರಿಗಳ ಶ್ರಮ ಇದೆ. ಇದನ್ನು ನಾವು ಎಂದಿಗೂ ಮರೆಯಬಾರದು ಎಂದು ನುಡಿದರು. ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಘೋಡಂಪಳ್ಳಿಯ ಸರ್ಕಾರಿ ಪ್ರಥಮ ದರ್ಜೆ ವಸತಿಯುತ ಕಾಲೇಜಿನ ವಿಶ್ರಾಂತ ಪ್ರಾಚಾರ್ಯ ಡಾ. ದೇವಿದಾಸ ತುಮಕುಂಟೆ ಅವರು, ಮಿಷನರಿಗಳು ಇಲ್ಲಿಗೆ ಬಂದು ಅರಿವು ಬಿತ್ತುವ ಜತೆಗೆ ಮಾನವೀಯ ಮೌಲ್ಯಗಳನ್ನು ಬೆಳೆಸಿದ್ದಾರೆ ಎಂದು ಹೇಳಿದರು. ಜಿಲ್ಲೆಯಲ್ಲಿ ಮಿಷನರಿಗಳ ಸೇವೆ ಕುರಿತು ವಿಶೇಷ ಉಪನ್ಯಾಸ ನೀಡಿದ ಜೈಕರ್ ರತ್ನಪ್ಪ ಅವರು, ನಾರ್ಮ ಮತ್ತು ಫೆಂಡ್ರಿಚ್ ಎಂಬ ಇಬ್ಬರು ಮಹಿಳಾ ಕ್ರೈಸ್ತ ಮಿಷನರಿಗಳು ಕ್ರಿಸ್ತ ಶಕ 1908ರಲ್ಲಿ ಮೊಟ್ಟ ಮೊದಲ ಬಾರಿಗೆ ಬೀದರನಲ್ಲಿ ಮೊದಲ ಕನ್ನಡ ಮಾಧ್ಯಮ ಶಾಲೆ ಆರಂಭಿಸಿದರು. ಈ ಶಾಲೆ ಇಂದಿಗೂ ಕಾರ್ಯ ನಿರ್ವಹಿಸುತ್ತಿರುವುದು ಸಂತೋಷ ಮತ್ತು ಅಭಿಮಾನದ ಸಂಗತಿಯಾಗಿದೆ ಎಂದು ಹೇಳಿದರು. ಕ್ರೈಸ್ತ ಮಿಷನರಿಗಳು ಕ್ರಿಸ್ತ ಶಕ 1903 ರಲ್ಲಿಯೇ ಬೀದರನಲ್ಲಿ ಸಾರ್ವಜನಿಕ ಆರೋಗ್ಯ ಸೇವೆಯನ್ನು ಆರಂಭಿಸಿದರು. ಈ ಆಸ್ಪತ್ರೆಯಲ್ಲಿ ಎಲ್ಲ ವೈದ್ಯಕೀಯ ಸೌಲಭ್ಯಗಳು ಲಭ್ಯವಿದ್ದವು ಎಂದು ತಿಳಿಸಿದರು.



ಉದಯವಾಹಿನಿ ಚಿತ್ರ

> **ಕ್ರೈಸ್ತ ಮಿಷನರಿಗಳು ದೀನ-ದಲಿತರ, ಬಡವರ, ನಿರ್ಗತಿಕರ ಹಾಗೂ ಅಸಹಾಯಕ ಸ್ಥಿತಿಯಲ್ಲಿರುವವರನ್ನು ಮೇಲಕ್ಕೆ ಎತ್ತುವ ಕಾರ್ಯ ಮಾಡಿದ್ದಾರೆ ಎಂದು ಹೇಳಿದರು.**
> -ಅಧ್ಯಕ್ಷ ಬಿ.ಕೆ. ಸುಂದರ ರಾಜ್

# ಮನೆಗೊಂದು ಮರ ಊರಿಗೊಂದು ವನ

• **ಉದಯವಾಹಿನಿ, ಗುರುಮಠಕಲ್,:**

ಯೆಲ್ಹೇರಿ ಸರ್ಕಾರಿ ಪ್ರೌಢಶಾಲೆ ಶಾಲೆಯಲ್ಲಿ, ಭಾರತ ಸರ್ಕಾರ ಮತ್ತು ಕರ್ನಾಟಕ ಸರ್ಕಾರದ ಅಧೀನದಲ್ಲಿ, ಯಾದಗಿರಿ ಅರಣ್ಯ ಉಪ ವಿಭಾಗ ಹಾಗೂ ಗುರುಮಠಕಲ್ ಅರಣ್ಯ ಉಪ ವಿಭಾಗದ ಅರಣ್ಯ ಇಲಾಖೆಯಿಂದ ''ಏಕ್ ಪೇಡ ಮಾ ಕೇ ನಾಮ'' ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು ಈ ಕಾರ್ಯಕ್ರಮದಲ್ಲಿ ಯಾದಗಿರಿ ಉಪ ವಲಯ ಅರಣ್ಯ ಅಧಿಕಾರಿ ಭೀಮಾಶಂಕರ ಮತ್ತು ಗುರುಮಠಕಲ್ ಉಪ ವಲಯ ಅರಣ್ಯ ಅಧಿಕಾರಿ ಅಶ್ವಥ್ ಕುಮಾರ್ ಹಾಗೂ ಅರಣ್ಯ ಪಾಲಕರುಗಳು ಭಾಗವಹಿಸಿ ಶಾಲೆಯ ಮಕ್ಕಳಿಗೆ ಉಚಿತವಾಗಿ ಸಸಿಗಳನ್ನು ವಿತರಿಸಿದರು. ವಲಯ ಅರಣ್ಯ ಅಧಿಕಾರಿ ಭೀಮಾಶಂಕರ ಅವರು ಮಾತನಾಡಿ ಮನುಷ್ಯರಿಂದ ನಾಶವಾದ ಅರಣ್ಯಗಳಿಂದ ಪರಿಸರದಲ್ಲಿ ಅಸಮತೋಲನ ಉಂಟಾಗುತ್ತದೆ.ಆದ್ದರಿಂದ ಪ್ರತಿಯೊಬ್ಬ ವಿದ್ಯಾರ್ಥಿ ಒಂದೊಂದು ಗಿಡಗಳನ್ನು ನೆಟ್ಟು ಬೆಳೆಸಿದ್ದೇ ಆದರೆ ಪರಿಸರದಲ್ಲಿ ಸಮತೋಲನ ಕಾಪಾಡಲು ಅನುಕೂಲವಾಗುವುದು ಕಾಡು ಬೆಳೆಸಿ ನಾಡು ಉಳಿಸಿ ಎಂದು ಹೇಳಿದರು. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಸೋಮನಾಥ ರೆಡ್ಡಿ ಬೋರೆಡ್ಡಿ ಅವರು ಮಾತನಾಡಿದರು. ಶಾಲೆಯ ಹಿರಿಯ ಶಿಕ್ಷಕ ಹುಸೇನಪ್ಪ ಸಕ್ರಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

# ಶಾಲೆ-ಕಾಲೇಜುಗಳ ಮಳೆ ರಜೆ ಇನ್ನು ತಾಲ್ಲೂಕುವಾರು

## ಶಾಲಾ ಕಾಲೇಜುಗಳಿಗೆ ರಜೆ ನೀಡುವ ಬದಲು , ತಹಶೀಲ್ದಾರ್ ಮಟ್ಟದಲ್ಲಿ ಇದನ್ನು ತೀರ್ಮಾನಿಸಲು ಚಿಂತನೆ ನಡೆಸಲಾಗಿದೆ

• **ಉದಯವಾಹಿನಿ, ಮಂಗಳೂರು:**

ರಾಜ್ಯದಲ್ಲೇ ಈ ಬಾರಿ ಅತಿ ಹೆಚ್ಚು ಮಳೆ ರಜೆ ಘೋಷಿಸಿದ ಜಿಲ್ಲೆಗಳ ಪೈಕಿ ದಕ್ಷಿಣ ಕನ್ನಡ ಮುಂಚೂಣಿಯಲ್ಲಿದೆ. ಆದರೆ ಭಾರತೀಯ ಹವಾಮಾನ ಇಲಾಖೆ ನೀಡಿದ ಮಳೆ ಮುನ್ಸೂಚನೆ ಹಲವು ಬಾರಿ ವಾಸ್ತವ ಸ್ಥಿತಿಗೆ ಹೊಂದಿಕೆಯಾಗದ ಹಿನ್ನೆಲೆಯಲ್ಲಿ ಅಗತ್ಯವಿಲ್ಲದ ರಜೆಗಳಿಂದ ಶೈಕ್ಷಣಿಕ ಚಟುವಟಿಕೆಗಳಿಗೆ ಧಕ್ಕೆ ಉಂಟಾಗಿದೆ ಎಂಬ ಆಕ್ಷೇಪಗಳು ಕೇಳಿಬಂದಿವೆ.

ಈ ಹಿನ್ನೆಲೆಯಲ್ಲಿ ಮುಂದಿನ ದಿನಗಳಲ್ಲಿ ಜಿಲ್ಲಾ ಮಟ್ಟದ ಬದಲಿಗೆ

**1 : ವಲಯವಾರು ನಿರ್ಧಾರ ಅಗತ್ಯ**
**2 : ನೋಟಿಸ್‌ಗೆ ಕ್ಷಮಾಪಣಾ ಪತ್ರ**
**3 : ಶೈಕ್ಷಣಿಕ ಸಂಸ್ಥೆಗಳ ವಿರೋಧ**

ತಾಲೂಕುವಾರು ಮಳೆ ರಜೆ ಘೋಷಿಸುವ ಕುರಿತು ಜಿಲ್ಲಾಡಳಿತ ಗಂಭೀರ ಚಿಂತನೆ ನಡೆಸಿದೆ.ಈ ಬಾರಿ ಜಿಲ್ಲೆಯಲ್ಲಿ ಘೋಷಿಸಲಾದ ಏಳು ಮಳೆ ರಜೆಗಳಲ್ಲೂಎಲ್ಲ ತಾಲೂಕುಗಳಲ್ಲೂ ಒಂದೇ ರೀತಿಯ ಪರಿಸ್ಥಿತಿ ಇರಲಿಲ್ಲ. ಕೆಲವು ಭಾಗಗಳಲ್ಲಿ ಭಾರಿ ಮಳೆಯಿದ್ದರೆ, ಹಲವು ಕಡೆ ಸಾಮಾನ್ಯ ಮಳೆಯಷ್ಟೇ ದಾಖಲಾಗಿತ್ತು. ಆದರೂ ಇಡೀ ಜಿಲ್ಲೆಗೆ ರಜೆ ಘೋಷಿಸಿದ್ದರಿಂದ ಅನಗತ್ಯವಾಗಿ ಶಿಕ್ಷಣಕ್ಕೆ ಅಡ್ಡಿಯಾಯಿತು ಎಂಬ ಟೀಕೆ ಶೈಕ್ಷಣಿಕ ಸಂಸ್ಥೆಗಳ ಜತೆಗೆ ಶಿಕ್ಷಣ ತಜ್ಞರು ಮುಂದಿಟ್ಟಿದ್ದಾರೆ. ಮುಂದಿನ ದಿನಗಳಲ್ಲಿ ತಹಸೀಲ್ದಾರ್, ಬಿಇಒ ಸೇರಿದಂತೆ ಸ್ಥಳೀಯ ಅಧಿಕಾರಿಗಳ ವರದಿ ಆಧರಿಸಿ, ಯಾವ ತಾಲೂಕಿನಲ್ಲಿ ಅಪಾಯದ ಪರಿಸ್ಥಿತಿ ಇದೆಯೋ ಅಲ್ಲಿ ಮಾತ್ರ ರಜೆ ಘೋಷಿಸುವ ವ್ಯವಸ್ಥೆ ಜಾರಿಗೆ ತರುವ ಬಗ್ಗೆ ಚರ್ಚೆ ನಡೆದಿದೆ.

ಮಳೆ ರಜೆ ಘೋಷಿಸಿದ್ದರೂ ನಿಯಮ ಉಲ್ಲಂಘಿಸಿ ತರಗತಿ ನಡೆಸಿದ 10 ಶಾಲೆ- ಕಾಲೇಜುಗಳಿಗೆ ಜಿಲ್ಲಾಡಳಿತ ನೋಟಿಸ್ ನೀಡಿತ್ತು. ಇದಕ್ಕೆ ಸಂಬಂಧಿಸಿದಂತೆ ಶಿಕ್ಷಣ ಸಂಸ್ಥೆಗಳು ಕ್ಷಮಾಪಣಾ ಪತ್ರ ಸಲ್ಲಿಸಿ, ಇನ್ನು ಮುಂದೆ ನಿಯಮ ಪಾಲಿಸುವುದಾಗಿ ಲಿಖಿತ ಭರವಸೆ ನೀಡಿವೆ.

ದಕ್ಷಿಣ ಕನ್ನಡ ಜಿಲ್ಲೆ ಶಿಕ್ಷಣ ಹಬ್ ಆಗಿದ್ದು, ರಾಜ್ಯ ಹಾಗೂ ಹೊರ ಜಿಲ್ಲೆಗಳಿಂದ ಸಾವಿರಾರು ವಿದ್ಯಾರ್ಥಿಗಳು ಇಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ. ಪದೇಪದೇ ಮಳೆ ರಜೆ ಘೋಷಿಸುವುದರಿಂದ ಪಠ್ಯಕ್ರಮ ಹಿಂದುಳಿಯುತ್ತಿದೆ, ಪರೀಕ್ಷಾ ವೇಳಾಪಟ್ಟಿಗೆ ಅಡ್ಡಿಯಾಗುತ್ತಿದೆ, ವಸತಿ ಶಾಲೆಗಳ ವಿದ್ಯಾರ್ಥಿಗಳು ದಿನಗಟ್ಟಲೆ ಹಾಸ್ಟೆಲ್‌ಗಳಲ್ಲೇ ಉಳಿಯಬೇಕಾಗುತ್ತಿದೆ, ಹೊರ ಜಿಲ್ಲೆಗಳ ವಿದ್ಯಾರ್ಥಿಗಳು ಮತ್ತು ಪೋಷಕರಿಗೂ ಅನಾನುಕೂಲವಾಗುತ್ತಿದೆ ಎಂಬ ಅಸಮಾಧಾನ ವ್ಯಕ್ತವಾಗಿದೆ.


ಉದಯವಾಹಿನಿ ಚಿತ್ರ

> **ಐಎಂಡಿ ಮುನ್ಸೂಚನೆ ನೀಡಿದಾಗ ಮಕ್ಕಳ ಸುರಕ್ಷತೆಯೇ ಮೊದಲ ಆದ್ಯತೆ. ಶಿಕ್ಷಣ ಎಷ್ಟು ಮುಖ್ಯವೋ, ಮಕ್ಕಳ ಜೀವವೂ ಅಷ್ಟೇ ಅಮೂಲ್ಯ. ಆದರೆ ಮುಂದಿನ ದಿನಗಳಲ್ಲಿ ತಾಲೂಕುವಾರು ರಜೆ ಘೋಷಿಸುವ ವ್ಯವಸ್ಥೆ ಜಾರಿಗೆ ತರುವ ಉದ್ದೇಶವಿದೆ ಎಂದು ತಿಳಿಸಿದ್ದಾರೆ.**
> -ಜಿಲ್ಲಾಧಿಕಾರಿ ದರ್ಶನ್ ಎಚ್.ವಿ

> **ಮಳೆಯೇ ಇಲ್ಲದಿದ್ದರೂ ಜಿಲ್ಲಾಮಟ್ಟದಲ್ಲಿ ರಜೆ ಘೋಷಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಇದು ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಹೊಡೆತ ನೀಡುತ್ತಿದೆ. ಆದ್ದರಿಂದ ಜಿಲ್ಲಾಡಳಿತ ಹಾಗೂ ಸರಕಾರ ತಾಲೂಕು ಅಥವಾ ವಲಯವಾರು ಹವಾಮಾನ ಸ್ಥಿತಿ ಆಧರಿಸಿ ರಜೆ ಕುರಿತು ತೀರ್ಮಾನ ಕೈಗೊಳ್ಳಬೇಕು ಎಂದಿದ್ದಾರೆ.**
> - ಎಸ್.ಎಲ್ ಭೋಜೇಗೌಡ

### ಅಧಿಕಾರಿಗಳಿಗೆ ಕ್ರಮ

**ಇದೇ ವೇಳೆ, ಕಳೆದ ಮೂರು ದಿನಗಳಲ್ಲೂ ಕೆಲ ಶಾಲೆ ಹಾಗೂ ಪಿಯು ಕಾಲೇಜುಗಳು ತರಗತಿ ನಡೆಸಿರುವ ಕುರಿತು ದೂರುಗಳು ಬಂದಿದ್ದು, ಸಂಬಂಧಪಟ್ಟ ಅಧಿಕಾರಿಗಳಿಗೆ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ. ಕೆಲವು ಕಡೆ ಅಧಿಕಾರಿಗಳು ಸ್ಥಳಕ್ಕೇ ತೆರಳಿ ತರಗತಿಗಳನ್ನು ಸ್ಥಗಿತಗೊಳಿಸಿರುವುದಾಗಿ ಮೂಲಗಳು ತಿಳಿಸಿವೆ.**

# ಮಿನಿ ನ್ಯೂಸ್

## ನೀಟ್‌ನಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗೆ ಪ್ರೋತ್ಸಾಹಧನ

• **ಉದಯವಾಹಿನಿ, ಲಕ್ಮೇಶ್ವರ,:**

ನೀಟ್-ಯುಜಿ ಪರೀಕ್ಷೆಯಲ್ಲಿ 510 ಅಂಕ ಗಳಿಸಿ ಪರಿಶಿಷ್ಟ ಜಾತಿ (ಎಸ್‌ಸಿ) ವಿಭಾಗದಲ್ಲಿ ಅಖಿಲ ಭಾರತ ಮಟ್ಟದಲ್ಲಿ 2887ನೇ ರ್‍ಯಾಂಕ್ ಪಡೆದು ಗಮನಾರ್ಹ ಸಾಧನೆ ಮಾಡಿದ ಆದರಹಳ್ಳಿ ಗ್ರಾಮದ ಬಡ ವಿದ್ಯಾರ್ಥಿ ತುಳಚಪ್ಪ ಲಮಾಣಿ ಅವರನ್ನು ಅಭಿನಂದಿಸಿದ ಶಿಕ್ಷಣ ಪ್ರೇಮಿ ಆರ್‌.ಎಸ್ ಪೂಜಾರ ವಿದ್ಯಾರ್ಥಿಗೆ 25 ಸಾವಿರ ಪ್ರೋತ್ಸಾಹಧನದ ಚೆಕ್ ವಿತರಿಸಿ ಮಾನವೀಯತೆ ಮೆರೆದರು.

ಈ ವೇಳೆ ಮಾತನಾಡಿದ ಅವರು ಗ್ರಾಮೀಣ ಹಿನ್ನೆಲೆಯಿಂದ ಬಂದಿರುವ ಬಡ ವಿದ್ಯಾರ್ಥಿ ತುಳಚಪ್ಪ ಅವರು ಕಠಿಣ ಪರಿಶ್ರಮ, ಶಿಸ್ತು ಮತ್ತು ಛಲದ ಮೂಲಕ ಈ ಸಾಧನೆ ಮಾಡಿರುವುದು ಗದಗ ಜಿಲ್ಲೆಯ ಹೆಮ್ಮೆಯಾಗಿದೆ. ''ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಅವಕಾಶ ಸಿಕ್ಕರೆ ರಾಷ್ಟ್ರಮಟ್ಟದಲ್ಲಿಯೂ ಸಾಧಿಸಬಲ್ಲರು ಎಂಬುದಕ್ಕೆ ತುಳಚಪ್ಪ ಉತ್ತಮ ಉದಾಹರಣೆ. ವೈದ್ಯರಾಗುವ ಅವರ ಕನಸು ನನಸಾಗಲಿ. ಸಮಾಜಕ್ಕೂ ಅವರು ಉತ್ತಮ ಸೇವೆ ಸಲ್ಲಿಸಲಿ. ನಮ್ಮಿಂದ ನೀಡಿರುವ ಸಣ್ಣ ಪ್ರೋತ್ಸಾಹಧನ ಅವರ ಓದಿಗೆ ಸಹಾಯವಾಗಲಿ ಎಂದು ಹೇಳಿದರು.

## ಬೇಡಿಕೆ ಈಡೇರಿಕೆಗೆ ಮನವಿ

• **ಉದಯವಾಹಿನಿ, ಚನ್ನಮ್ಮನ ಕಿತ್ತೂರು,**

ಸಮೀಪದ ಖಾನಾಪುರ ತಾಲೂಕು ಹಾಗೂ ರಾಜ್ಯದ ಎಲ್ಲ ಜಿಲ್ಲೆಗಳು ಬರಪೀಡಿತ ಘೋಷಣೆ ಹಾಗೂ ತಕ್ಷಣ ಬರ ಪರಿಹಾರ ಹಣ ಮಂಜೂರು ಮಾಡಿ ರೈತರ ಹಲವಾರು ಸಮಸ್ಯೆ ಪರಿಹರಿಸುವಂತೆ ಒತ್ತಾಯಿಸಿ . ಸಿಎಂ ಡಿಕೆ ಶಿವಕುಮಾರ್‌ರವರಿಗೆ ಮನವಿ ಪತ್ರವನ್ನು ಗ್ರೇಡ್-2 ತಹಶೀಲ್ದಾರ ಎಸ್ ಕೆ ತಂಗೋಳ್ಳಿ . ಇವರ ಮೂಲಕ ಅಖಿಲ ಕರ್ನಾಟಕ ರೈತ ಸಂಘ ರಾಜ್ಯ ಉಪಾಧ್ಯಕ್ಷ ಕಕ್ಕೇರಿ ಕಿಶೋರ ಮಿಠಾರಿ ಹಾಗೂ ರೈತರು ಜೊತೆಗೂಡಿ ಸಲ್ಲಿಸಿದರು.ರಾಜ್ಯದಲ್ಲಿ, ಹಾಗೂ ತಾಲೂಕಿನಲ್ಲಿ ಮುಂಗಾರು ಮಳೆ ವಾಡಿಕೆಗಿಂತ ಕಡಿಮೆಯಾಗಿದ್ದು ಇದರಿಂದ ಸಾಕಷ್ಟು ಬೆಳೆ ಹಾನಿಯಾಗಿದೆ ಇನ್ನು ಕೆಲವು ಪ್ರದೇಶಗಳಲ್ಲಿ ಬಿತ್ತನೆ ಕಾರ್ಯನಿರ್ವಹಿಸಲು ಸಾಧ್ಯವಿಲ್ಲ. ತಾಲೂಕ ಹಾಗೂ ರಾಜ್ಯ ಬರ ಪೀಡಿತ ಪ್ರದೇಶವೆಂದು ಘೋಷಿಸಿ ಪ್ರತಿ ಎಕರೆಗೆ ಕನಿ??ಠ ರೂ.40ಸಾವಿರ ಪರಿಹಾರ ನೀಡಬೇಕು.

ರೈತರ ಸಾಲ ಸಂಪೂರ್ಣ ಮನ್ನಾ ಮಾಡಬೇಕು, ಕೇಂದ್ರ ಫಸಲು ಭೀಮಾ ಯೋಜನೆ ಯಡಿ ಈ ಮೊದಲು ರೈತ ವಿಮಾ ಸಂಸ್ಥೆಗೆ ಹಣ ತುಂಬಿ ಬೆಳೆ ವಿಮಾ ಪರಿಹಾರ ನೀಡ ಬೇಕೆಂದು ಒತ್ತಾಯಿಸಿದರು. ಮಹದಾಯಿ ಹೋರಾಟಗಾರರು ಹಾಗೂ ಬಿಡದಿ ಟೌನಶಿಪ್ ರೈತ ಹೋರಾಟಗಾರರ ಮೇಲೆ ಪೊಲೀಸ್ ಇಲಾಖೆಯಿಂದ ಸುಳ್ಳು ಪ್ರಕರಣಗಳು ದಾಖಲಿಸಿಕೊಂಡು ಎಫ್‌ಐಆರ್ ಹಿಂಪಡೆಯಬೇಕು. ಹಾಗೂ ಮಲಪ್ರಭಾ ನದಿಗೆ ಆಣೆಕಟ್ಟು ನಿರ್ಮಾಣ ಮಾಡಿ ತಾಲೂಕಿನ ರೈತರ ಭೂಮಿಗಳಿಗೆ ಹಾಗೂ ಕುಡಿಯಲು ನೀರಾವರಿ ಯೋಜನೆ ಜಾರಿಗೆ ಮಾಡಬೇಕು.

## ಕೆಕೆಆರ್‌ಟಿಸಿ ಸೇವೆಗಳ ಉನ್ನತೀಕರಣಕ್ಕೆ ಅಧ್ಯಕ್ಷ ಅರುಣಕುಮಾರ ಪಾಟೀಲ ಸೂಚನೆ

• **ಉದಯವಾಹಿನಿ, ವಿಜಯಪುರ, :**

ಪ್ರಯಾಣಿಕರಿಗೆ ಮತ್ತಷ್ಟು ಜನಸ್ನೇಹಿ, ಸುರಕ್ಷಿತ ಹಾಗೂ ಸುಗಮ ಸಾರಿಗೆ ಸೇವೆ ಒದಗಿಸಲು ಅಧಿಕಾರಿಗಳು ಯೋಜನಾಬದ್ಧವಾಗಿ ಕಾರ್ಯ ನಿರ್ವಹಿಸಬೇಕು ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ (ಕೆಕೆಆರ್‌ಟಿಸಿ) ಅಧ್ಯಕ್ಷ ಅರುಣಕುಮಾರ ಎಂ.ವೈ. ಪಾಟೀಲ ಅಧಿಕಾರಿಗಳಿಗೆ ಸೂಚಿಸಿದರು. ವಿಜಯಪುರ ವಿಭಾಗೀಯ ಕಚೇರಿಯಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ನಿಗಮದ ಸೇವಾ ಗುಣಮಟ್ಟವನ್ನು ಇನ್ನಷ್ಟು ಸುಧಾರಿಸುವ ಉದ್ದೇಶದಿಂದ ನಡೆದ ಸಭೆಯಲ್ಲಿ ಬಸ್ ನಿಲ್ದಾಣಗಳ ಸ್ವಚ್ಛತೆ, ನೈರ್ಮಲ್ಯ, ಪ್ರಯಾಣಿಕರಿಗೆ ಅಗತ್ಯ ಮೂಲಭೂತ ಸೌಲಭ್ಯಗಳ ಅಭಿವೃದ್ಧಿ ಹಾಗೂ ಬಸ್‌ಗಳ ಸಕಾಲಿಕ ನಿರ್ವಹಣೆ ಕುರಿತು ಸಮಗ್ರ ಪರಿಶೀಲನೆ ನಡೆಸಲಾಯಿತು. ಬಸ್‌ಗಳ ಸಮಯ ಪಾಲನೆಗೆ ಆದ್ಯತೆ ನೀಡಬೇಕು. ಇಂಧನ ಉಳಿತಾಯಕ್ಕೆ ಪೂರಕವಾದ ಕ್ರಮಗಳನ್ನು ಕಟ್ಟುನಿಟ್ಟಾಗಿ ಅನುಸರಿಸಿ, ಕಾರ್ಯಾಚರಣೆಯ ದಕ್ಷತೆ ಹೆಚ್ಚಿಸುವ ಜೊತೆಗೆ ರಸ್ತೆ ಸುರಕ್ಷತಾ ನಿಯಮಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವ ಮೂಲಕ ನಿಗಮದ ಸೇವೆಯನ್ನು ಇನ್ನಷ್ಟು ವಿಶ್ವಾಸಾರ್ಹವಾಗಿಸಬೇಕು ಎಂದು ಅಧ್ಯಕ್ಷರು ನಿರ್ದೇಶನ ನೀಡಿದರು. ಸಂಸ್ಥೆಯ ಬೆನ್ನೆಲುಬಾಗಿರುವ ಸಿಬ್ಬಂದಿಯ ಆರೋಗ್ಯ ಮತ್ತು ಕ್ಷೇಮಾಭಿವೃದ್ಧಿಗೂ ವಿಶೇಷ ಮಹತ್ವ ನೀಡಿದ ಅವರು, ಸಿಬ್ಬಂದಿಗಾಗಿ ನಿಯಮಿತ ಉಚಿತ ಆರೋಗ್ಯ ತಪಾಸಣಾ ಶಿಬಿರಗಳನ್ನು ಆಯೋಜಿಸಲು ಸೂಚಿಸಿದರು. ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ 'ಶಕ್ತಿ' ಯೋಜನೆಯಡಿ ಮಹಿಳಾ ಪ್ರಯಾಣಿಕರಿಗೆ ಯಾವುದೇ ತೊಂದರೆಯಾಗದಂತೆ ಸೇವೆ ಒದಗಿಸುವಂತೆ ಅಧಿಕಾರಿಗಳಿಗೆ ನಿರ್ದೇಶಿಸಿದರು.


ಉದಯವಾಹಿನಿ ಚಿತ್ರ

## 'ಡೋಂಗಿ ರಾಷ್ಟ್ರೀಯವಾದ' ಬಯಲಾಗಿದೆ

• **ಉದಯವಾಹಿನಿ, ವಿಜಯಪುರ, :**

'ವಂದೇ ಮಾತರಂ' ಗೀತೆಗೆ ಅವಮಾನ ಮಾಡಿದವರಿಗೆ ಶಿಕ್ಷೆ ವಿಧಿಸುವ ಉದ್ದೇಶದಿಂದ ಮಂಡಿಸಲಾದ 'ರಾಷ್ಟ್ರೀಯ ಗೌರವಕ್ಕೆ ಅವಮಾನಗಳ ತಡೆಗಟ್ಟುವಿಕೆ (ತಿದ್ದುಪಡಿ) ಮಸೂದೆ-2026'ಗೆ ಕಾಂಗ್ರೆಸ್ ವಿರೋಧ ವ್ಯಕ್ತಪಡಿಸಿರುವುದು ಅದರ ''ಡೋಂಗಿ ರಾಷ್ಟ್ರೀಯವಾದ''ವನ್ನು ಬಯಲಿಗೆಳೆದಿದೆ ಎಂದು ಸಂಸದ ರಮೇಶ ಜಿಗಜಿಣಗಿ ಆರೋಪಿಸಿದ್ದಾರೆ.

ಬಿಡುಗಡೆ ಮಾಡಿದ ಪ್ರಕಟಣೆಯಲ್ಲಿ ಅವರು, ಸ್ವಾತಂತ್ರ್ಯ ಹೋರಾಟಗಾರರಿಗೆ ಸ್ಫೂರ್ತಿಯಾಗಿದ್ದ ಹಾಗೂ ಕ್ರಾಂತಿಕಾರಿಗಳ ಧ್ಯೇಯಗೀತೆಯಾಗಿದ್ದ ಬಂಕಿಮಚಂದ್ರ ಚಟರ್ಜಿ ವಿರಚಿತ 'ವಂದೇ ಮಾತರಂ'ಗೆ ಗೌರವ ನೀಡುವ ಉದ್ದೇಶದಿಂದ ಕೇಂದ್ರ ಸರ್ಕಾರ ಮಸೂದೆ ಮಂಡಿಸಿದೆ ಎಂದು ಹೇಳಿದರು. ರಾಜ್ಯಸಭೆಯಲ್ಲಿ ಮಸೂದೆ ಮಂಡನೆಯಾಗುವ ವೇಳೆ ಪ್ರತಿಪಕ್ಷಗಳು ಗದ್ದಲ ನಡೆಸಿದ್ದು, ವಂದೇ ಮಾತರಂ ಗೀತೆಗೆ ಅವಮಾನ ಮಾಡಿದರೆ ಮೂರು ವರ್ಷಗಳ ಜೈಲು ಶಿಕ್ಷೆ ವಿಧಿಸುವ ಪ್ರಸ್ತಾವವಿರುವ ಮಸೂದೆಯನ್ನು ತಡೆಯುವ ಉದ್ದೇಶದಿಂದಲೇ ಕಾಂಗ್ರೆಸ್ ಅಡ್ಡಿಪಡಿಸಿದೆ ಎಂದು ಅವರು ಟೀಕಿಸಿದರು.

1875ರಲ್ಲಿ ಬಂಕಿಮಚಂದ್ರ ಚಟರ್ಜಿ ಅವರು ತಮ್ಮ ಆನಂದಮಠ ಕೃತಿಯಲ್ಲಿ 'ವಂದೇ ಮಾತರಂ' ಗೀತೆಯನ್ನು ರಚಿಸಿದ್ದು, 1905ರ ಬಂಗಾಳ ವಿಭಜನೆ ವಿರೋಧಿ ಹೋರಾಟ ಸೇರಿದಂತೆ ಸ್ವಾತಂತ್ರ್ಯ ಚಳವಳಿಯ ಹಲವು ಹಂತಗಳಲ್ಲಿ ಈ ಗೀತೆ ದೇಶಭಕ್ತಿಯ ಸಂಕೇತವಾಗಿ ರೂಪುಗೊಂಡಿತ್ತು ಎಂದು ಜಿಗಜಿಣಗಿ ಹೇಳಿದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
| ಗುಳಿಕ ಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡ ಕಾಲ | ಬೆಳಿಗ್ಗೆ | 10:30 ರಿಂದ 12:00 |

**ಮೇಷ** ನಿಮ್ಮ ನೀಡುವ ವರ್ತನೆ ಪರೋಕ್ಷವಾಗಿ ನಿಮಗೆ ಆಶೀರ್ವಾದವೇ ಆಗುತ್ತದೆ, ಏಕೆಂದರೆ ನೀವು ಅನುಮಾನ, ನಿರಾಸೆ, ವಿಶ್ವಾಸರಾಹಿತ್ಯ ಅಹಂಭಾವ ಮತ್ತು ಅಸೂಯೆಯಂಥ ಅನೇಕ ದುರ್ಗುಣಗಳಿಂದ ಮುಕ್ತಿ ಹೊಂದುವ ಸಾಧ್ಯತೆಗಳಿವೆ. ಯಾವುದೇ ವ್ಯಕ್ತಿಯ ಸಹಾಯವಿಲ್ಲದೆ ನೀವು ಹಣವನ್ನು ಗಳಿಸಲು ಸಾಧ್ಯವಾಗುತ್ತದೆ.

**ವೃಷಭ** ವಿಶೇಷವಾಗಿ ಹೃದಯ ರೋಗಿಗಳು ಕಾಫಿಯನ್ನು ಬಿಡಬೇಕು. ಇಂದು ಯಾವುದೇ ಸಹಾಯವಿಲ್ಲದೆ, ನೀವು ಹಣವನ್ನು ಗಳಿಸುವಲ್ಲಿ ಸಾಮರ್ಥ್ಯರಾಗಿರುತ್ತೀರಿ. ಯುವಕರನ್ನು ಹೊಂದಿರುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಒಳ್ಳೆಯ ಸಮಯ. ಪ್ರಣಯದ ಅವಕಾಶಗಳಿವೆ – ಆದರೆ ಅವು ಕ್ಷಣಿಕವಾಗಿರುತ್ತವೆ.

**ಮಿಥುನ** ನೀವು ಕೆಲವು ಉನ್ನತ ವ್ಯಕ್ತಿಗಳನ್ನು ಭೇಟಿಯಾಗ ಬಹುದಾದ್ದರಿಂದ ಗಾಬರಿಯಾಗಬೇಡಿ ಮತ್ತು ವಿಶ್ವಾಸ ಕಳೆದುಕೊಳ್ಳದಿರಿ. ಇದು ವ್ಯಾಪಾರಕ್ಕೆ ಬಂಡವಾಳದಂತೆ ಉತ್ತಮ ಆರೋಗ್ಯಕ್ಕೆ ಅಗತ್ಯವಾಗಿದೆ. ನಿಕಟ ಸಂಬಂಧಿಗಳ ಮನೆಗೆ ಹೋಗುವುದರಿಂದ ಇಂದು ನಿಮ್ಮ ಆರ್ಥಿಕ ಪರಿಸ್ಥಿತಿ ಹಾಳಾಗಬಹುದು.

**ಕರ್ಕಾಟಕ** ನಿಮ್ಮ ದಯಾಳು ಪ್ರಕೃತಿ ಇಂದು ಅನೇಕ ಸಂತೋಷದ ಕ್ಷಣಗಳನ್ನು ತರುತ್ತದೆ. ಹೊಸ ಆರ್ಥಿಕ ಒಪ್ಪಂದ ಕುದುರಿಸಲಾಗುತ್ತದೆ ಮತ್ತು ಹೊಸ ಹಣ ಬರುತ್ತದೆ. ಒಟ್ಟಾರೆ ಒಂದು ಲಾಭದಾಯಕ ದಿನವಾದರೂ ನೀವು ನಿರಾಸೆ ಭರವಸೆಯಿಡಬಹುದಾದ ಯಾರಾದರೂ ನಿಮ್ಮನ್ನು ನಿರಾಸೆಗೊಳಿಸುತ್ತಾರೆ.

**ಸಿಂಹ** ದಿನದಲ್ಲಿ ಅನಿರೀಕ್ಷಿತವಾದ ಒಳ್ಳೆಯ ಸುದ್ದಿ ಇಡೀ ಕುಟುಂಬಕ್ಕೆ ಸಂತೋಷ ಮತ್ತು ಆನಂದ ತರೆದಿಡುತ್ತದೆ. ನಿಮ್ಮ ಉಪಸ್ಥಿತಿ ನಿಮ್ಮ ಪ್ರೀತಿಪಾತ್ರರಿಗೆ ಈ ವಿಶ್ವವನ್ನು ಒಂದು ಯೋಗ್ಯ ಸ್ಥಾನವನ್ನಾಗಿ ಮಾಡುತ್ತದೆ. ಹೊಸ ಯೋಜನೆಗಳು ಮತ್ತು ವಿಚಾರಗಳನ್ನು ಕಾರ್ಯರೂಪಕ್ಕೆ ತರಲು ಒಳ್ಳೆಯ ದಿನ.

**ಕನ್ಯಾ** ನಿಮ್ಮ ಇತರರನ್ನು ಶ್ಲಾಘಿಸುವ ಮೂಲಕ ಅವರ ಯಶಸ್ಸನ್ನು ಆನಂದಿಸುವ ಸಾಧ್ಯತೆಗಳಿವೆ. ಹಣಕಾಸಿನ ಭಾಗವು ಉತ್ತಮವಾಗಿರುತ್ತದೆ ಆದರೆ ಇದರೊಂದಿಗೆ ನೀವು ನಿಮ್ಮ ಹಣವನ್ನು ವ್ಯರ್ಥವಾಗಿ ಖರ್ಚು ಮಾಡದಂತೆ ನೋಡಿಕೊಳ್ಳಬೇಕು. ನಿಮ್ಮ ಕುಟುಂಬದ ಸದಸ್ಯರು ಕಡ್ಡಿಯನ್ನು ಗುಡ್ಡ ಮಾಡುವ ಸಾಧ್ಯತೆಯಿದೆ.

**ತುಲಾ** ನಿಮ್ಮ ಚೈತನ್ಯವನ್ನು ಪುನಃ ಸಂಪಾದಿಸಲು ವಿಶ್ರಾಂತಿ ತೆಗೆದುಕೊಳ್ಳಿ. ನೀವು ಕಮಿಷನ್‌ಗಳಿಂದ ಡಿವಿಡೆಂಡ್‌ಗಳಿಂದ ಅಥವಾ ರಾಯಧನಗಳಿಂದ ಪ್ರಯೋಜನ ಪಡೆಯುತ್ತೀರಿ. ಅತಿಥಿಗಳು ನಿಮ್ಮ ಮನೆಯನ್ನು ಒಂದು ಆಹ್ಲಾದಕರ ಮತ್ತು ಅದ್ಭುತ ಸಂಜೆಗಾಗಿ ಬಳಸಿಕೊಳ್ಳುತ್ತಾರೆ. ಪ್ರೇಮ ಜೀವನದ ವಿವಾದಾತ್ಮಕವಾಗಿರಬಹುದು.

**ವೃಶ್ಚಿಕ** ಹಣದ ಪರಿಸ್ಥಿತಿ ದಿನದಲ್ಲಿ ನಂತರ ಸುಧಾರಿಸುತ್ತದೆ. ಗೃಹ ಜೀವನ ಶಾಂತಿಯುತ ಮತ್ತು ಉತ್ತಮವಾಗಿರುತ್ತದೆ ಪ್ರೀತಿಯ ವ್ಯವಹಾರಗಳಲ್ಲಿ ಬಲವಂತ ಮಾಡುವುದನ್ನು ತಪ್ಪಿಸಿ. ಹಗಲುಗನಸು ನಿಮ್ಮ ಪತನಕ್ಕೆ ಕಾರಣವಾಗುತ್ತದೆ – ಇತರರು ನಿಮ್ಮ ಕೆಲಸ ಮಾಡುತ್ತಾರೆಂದು ನಿರೀಕ್ಷಿಸಬೇಡಿ.

**ಧನಸ್ಸು** ನಿಮ್ಮ ಅನಿರೀಕ್ಷಿತ ಸ್ವಭಾವ ನಿಮ್ಮ ವೈವಾಹಿಕ ಸಂಬಂಧವನ್ನು ಹಾಳು ಮಾಡಲು ಬಿಡಬೇಡಿ. ಇದನ್ನು ತಡೆಯುವುದನ್ನು ಖಚಿತಪಡಿಸಿಕೊಳ್ಳಿ, ಇಲ್ಲದಿದ್ದಲ್ಲಿ ನೀವು ನಂತರ ವಿಷಾದಪಡಬಹುದು. ಪ್ರಮುಖ ಜನರು ವಿಶೇಷ ವರ್ಗ ಹೊಂದಿರುವ ಯಾವುದಕ್ಕಾದರೂ ಹಣಕಾಸು ನೀಡಲು ಸಿದ್ಧವಾಗಿರುತ್ತಾರೆ.

**ಮಕರ** ನಿಮ್ಮಲ್ಲಿ ಶಕ್ತಿಯ ಕೊರತೆಯಿರದೇ ಆತ್ಮವಿಶ್ವಾಸದ ಕೊರತೆಯಿರುವುದರಿಂದ ನಿಮ್ಮ ನಿಜವಾದ ಸಾಮರ್ಥ್ಯವನ್ನು ಅರಿತುಕೊಳ್ಳಿ. ನಿಮ್ಮ ಹಿಂದಿನ ಸಾಲವನ್ನು ಇಂದಿನ ವರೆಗೂ ಮರುಪಾವತಿ ಮಾಡದೇ ಇರುವ ನಿಮ್ಮ ಸಂಬಂಧಿಕರಿಗೆ ಇಂದು ಸಾಲ ಕೊಡಬಾರದು. ನಿಮ್ಮ ಜೊತಗಿರುವವರ ಜೊತೆ ವಾದವಿವಾದಕ್ಕೆ ತೊಡಗಬೇಡಿ.

**ಕುಂಭ** ಅಸಾಧ್ಯವಾದ ಅನಗತ್ಯ ಚಿಂತನೆಯಲ್ಲಿ ನಿಮ್ಮ ಶಕ್ತಿ ವ್ಯರ್ಥ ಮಾಡುವ ಬದಲು ಅದನ್ನು ಸರಿಯಾದ ದಿಕ್ಕಿನಲ್ಲಿ ಬಳಸಿ. ಈ ರಾಶಿಚಕ್ರದ ಕೆಲವು ಜನರಿಗೆ ಇಂದು ಮಕ್ಕಳ ಬದಿಯಿಂದ ಆರ್ಥಿಕ ಲಾಭವನ್ನು ಪಡೆಯುವ ಭರವಸೆ ಇದ. ಇಂದು ನೀವು ನಿಮ್ಮ ಮಕ್ಕಳ ಮೇಲೆ ಹೆಮ್ಮೆಯನ್ನು ಅನುಭವಿಸುವಿರಿ.

**ಮೀನ** ನಿಮ್ಮ ವಿಶ್ವಾಸ ಮತ್ತು ಚೈತನ್ಯ ಇಂದು ಅಧಿಕವಾಗಿರುತ್ತದೆ. ನೀವು ನಿಮ್ಮ ಕಳೆದ ಸಮಯದಲ್ಲಿ ಬಹಳಷ್ಟು ಹಣವನ್ನು ಖರ್ಚುಮಾಡಿದ್ದಿರಿ ಇದರ ತೊಂದರೆ ನೀವು ಇಂದು ಅನುಭವಿಸಬೇಕಾಗಬಹುದು. ಇಂದು ನಿಮಗೆ ಹಣದ ಅಗತ್ಯವಿರಬಹುದು ಆದರೆ ಅದು ನಿಮಗೆ ದೊರೆಯುವುದಿಲ್ಲ.

# ಪ್ರಶ್ನೆಪತ್ರಿಕೆ ಸೋರಿಕೆ ತಡೆ ಹೊಣೆ ಜಿಲ್ಲಾಧಿಕಾರಿಗಳದ್ದು: ಸಿ.ಎಂ ಡಿ.ಕೆ. ಶಿವಕುಮಾರ್

• **ಉದಯವಾಹಿನಿ, ಚಿತ್ರದುರ್ಗ:**

ರಾಜ್ಯದ ವಿವಿಧ ಸರ್ಕಾರಿ ಇಲಾಖೆಗಳಲ್ಲಿರುವ ಸುಮಾರು 72 ಸಾವಿರ ಹುದ್ದೆಗಳ ಭರ್ತಿ ಪ್ರಕ್ರಿಯೆಗೆ ಸರ್ಕಾರ ಚಾಲನೆ ನೀಡಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.ಚಿತ್ರದುರ್ಗ ಸೇರಿದಂತೆ ಬೆಂಗಳೂರು ದಕ್ಷಿಣ, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಕೋಲಾರ, ತುಮಕೂರು, ಚಿಕ್ಕಬಳ್ಳಾಪುರ, ಶಿವಮೊಗ್ಗ ಹಾಗೂ ದಾವಣಗೆರೆ ಜಿಲ್ಲೆಗಳ ವಿಭಾಗ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನೇಮಕಾತಿ ಪ್ರಕ್ರಿಯೆ ಸಂಪೂರ್ಣ ಪಾರದರ್ಶಕವಾಗಿರಬೇಕು ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳ ಪ್ರಶ್ನೆಪತ್ರಿಕೆ


ಉದಯವಾಹಿನಿ ಚಿತ್ರ

ಸೋರಿಕೆಯಾಗದಂತೆ ಜಿಲ್ಲಾಧಿಕಾರಿಗಳು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.

ಪರೀಕ್ಷೆಗಳಲ್ಲಿ ಅಕ್ರಮ ಹಾಗೂ ಸೋಗುಹಾಕುವಿಕೆ ತಡೆಗಟ್ಟುವ ಉದ್ದೇಶದಿಂದ ಎಲ್ಲ ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗುವುದು ಎಂದು ಮುಖ್ಯಮಂತ್ರಿ ಹೇಳಿದರು.

ಬರ ಪರಿಸ್ಥಿತಿಯನ್ನು ಖುದ್ದಾಗಿ ಪರಿಶೀಲಿಸಲು ರಾಜ್ಯಾದ್ಯಂತ ಪ್ರವಾಸ ಕೈಗೊಳ್ಳುವುದಾಗಿ ತಿಳಿಸಿದ ಅವರು, ಬರ ಘೋಷಣೆಗಾಗಿ ಈಗಾಗಲೇ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ. ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ವರದಿಯನ್ನು ಮಾತ್ರ ಆಧರಿಸದೆ, ಅಧಿಕಾರಿಗಳು ಗ್ರಾಮಗಳಿಗೆ ಭೇಟಿ ನೀಡಿ ಮಳೆಯ ಪ್ರಮಾಣ, ಬಿತ್ತನೆ, ಕುಡಿಯುವ ನೀರಿನ ಲಭ್ಯತೆ, ಅಂತರ್ಜಲ ಮಟ್ಟ ಸೇರಿದಂತೆ ಎಲ್ಲ ಅಂಶಗಳನ್ನು ಪರಿಶೀಲಿಸಿ ಸಮಗ್ರ ವರದಿ ಸಲ್ಲಿಸಬೇಕು. ಕೇಂದ್ರದ ಅಧ್ಯಯನ ತಂಡ ಬಂದಾಗ ತಪ್ಪು ಮಾಹಿತಿ ನೀಡಿ ಸರ್ಕಾರಕ್ಕೆ ಮುಜುಗರ ಉಂಟುಮಾಡುವ ರೀತಿಯಲ್ಲಿ ನಡೆದುಕೊಳ್ಳಬಾರದು.

ಎಲ್ಲಾ ಅಧಿಕಾರಿಗಳು ವಾಸ್ತವಾಂಶಗಳ ಆಧಾರದ ಮೇಲೆ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು.

# ಈ ವರ್ಷ ಮೊದಲ ಬಾರಿಗೆ ಆಲಮಟ್ಟಿ ಜಲಾಶಯದ 14 ಗೇಟ್ ಓಪನ್

### ಕೃಷ್ಣಾ ನದಿಗೆ 67,500 ಕ್ಯೂಸೆಕ್ ನೀರು ಬಿಡುಗಡೆ, ಆಲಮಟ್ಟಿ ಜಲಾಶಯದ 14 ಗೇಟ್‌ಗಳ ಮೂಲಕ ಕೃಷ್ಣಾ ನದಿ ಪಾತ್ರಕ್ಕೆ ನೀರನ್ನು ಬಿಡಲಾಗುತ್ತಿದೆ.

• **ಉದಯವಾಹಿನಿ, ಬಾಗಲಕೋಟೆ:**

ಮಹಾರಾಷ್ಟ್ರದ ಪಶ್ಚಿಮ ಘಟ್ಟದಲ್ಲಿ ಮಳೆ ಸುರಿಯುತ್ತಿರುವ ಪರಿಣಾಮ ಆಲಮಟ್ಟಿ ಜಲಾಶಯದಲ್ಲಿ ಒಳಹರಿವು ಹೆಚ್ಚಳವಾಗುತ್ತಿದ್ದು, ಈ ವರ್ಷ ಮೊದಲ ಬಾರಿಗೆ ಆಲಮಟ್ಟಿ ಜಲಾಶಯದ 14 ಗೇಟ್‌ಗಳ ಮೂಲಕ ಕೃಷ್ಣಾ ನದಿಗೆ ನೀರನ್ನು ಹರಿಬಿಡಲಾಗುತ್ತಿದೆ.

ಜಲಾಶಯದ ಬಲಭಾಗದ ಆಲಮಟ್ಟಿ ವಿದ್ಯುತ್ ಉತ್ಪಾದನಾ ಘಟಕದ ಮೂಲಕ 42,500 ಹಾಗೂ ಗೇಟ್

**ಗರಿಷ್ಠ ಸಾಮರ್ಥ್ಯ: 123.081 ಟಿಎಂಸಿ**
**ಇಂದಿನ ನೀರಿನ ಸಂಗ್ರಹ: 106.323 ಟಿಎಂಸಿ**
**ಗರಿಷ್ಠ ಎತ್ತರ: 519.60 ಮೀ.**
**ಇಂದಿನ ಮಟ್ಟ: 518.60 ಮೀ.**
**ಒಳಹರಿವು: 73,162 ಕ್ಯೂಸೆಕ್**
**ಹೊರಹರಿವು: 67,500 ಕ್ಯೂಸೆಕ್**

ಗಳ ಮೂಲಕ 25,000 ಕ್ಯೂಸೆಕ್ ಸೇರಿ ಒಟ್ಟಾರೆ 67,500 ಕ್ಯೂಸೆಕ್ ನೀರನ್ನು ಬಿಡಲಾಗುತ್ತಿದೆ. ಗುರುವಾರ 42,500 ಕ್ಯೂಸೆಕ್ ಇದ್ದ ಹೊರಹರಿವನ್ನು ಶುಕ್ರವಾರ ಬೆಳಗ್ಗೆ 8 ಗಂಟೆಗೆ ಹೆಚ್ಚಿಸಲಾಯಿತು. ಗರಿಷ್ಠ 519.60 ಮೀಟರ್‌ಎತ್ತರ ಹಾಗೂ 123.081 ಟಿಎಂಸಿ ನೀರು ಸಂಗ್ರಹಣಾ ಸಾಮರ್ಥ್ಯವಿರುವ ಜಲಾಶಯದಲ್ಲಿ 518.6 ಮೀಟರ್ ಎತ್ತರದವರೆಗೆ ಒಟ್ಟು


ಉದಯವಾಹಿನಿ ಚಿತ್ರ

> ಜಲಾಶಯದಿಂದ 4 ಲಕ್ಷ ಕ್ಯೂಸೆಕ್‌ಗಿಂತ ಹೆಚ್ಚಿನ ಪ್ರಮಾಣದಲ್ಲಿ ನೀರು ಹರಿಬಿಟ್ಟಾಗ ಮಾತ್ರ ತಾಲ್ಲೂಕಿನ ಮಸೂತಿ ಗ್ರಾಮದ ಜನವಸತಿ ಪ್ರದೇಶಕ್ಕೆ ಸ್ವಲ್ಪ ನೀರು ಬರುತ್ತದೆ. ಉಳಿದಂತೆ ತಾಲ್ಲೂಕಿನ ಯಾವುದೇ ಜನವಸತಿ ಪ್ರದೇಶಗಳಿಗೆ ನೀರು ನುಗ್ಗುವುದಿಲ್ಲ. ಮುಂಜಾಗ್ರತೆ ಕ್ರಮವಾಗಿ ಈಜುಗಾರರು, ಉರಗ ತಜ್ಞರು, ಸುಸಜ್ಜಿತ ಬೋಟ್‌ಗಳನ್ನು ರೆಡಿ ಮಾಡಿಟ್ಟುಕೊಳ್ಳಲಾಗಿದೆ ಎಂದು ತಹಶೀಲ್ದಾರ್ ತಿಳಿಸಿದ್ದಾರೆ. -ಎ.ಡಿ.ಅಮರವಾದಗಿ

106.32 ಟಿಎಂಸಿ ನೀರು ಸಂಗ್ರಹವಾಗಿತ್ತು. ಒಳಹರಿವು 73,162 ಕ್ಯೂಸೆಕ್ ಇತ್ತು.ಮಹಾರಾಷ್ಟ್ರದ ಪಶ್ಚಿಮಘಟ್ಟಗಳಲ್ಲಿ ವರುಣನ ಆರ್ಭಟ ಮುಂದುವರೆದಿದ್ದು, ಕೊಯ್ನಾ 77 ಮಿ.ಮೀ, ನವಜಾ 66, ಮಹಾಬಳೇಶ್ವರ 78, ರಾಧಾನಗರಿ 24, ಧೂದಗಂಗಾ 48 ಮಿ.ಮೀ ಮಳೆಯಾಗಿದೆ. ಇದರಿಂದ ಕೃಷ್ಣಾ ನದಿಗೆ ಅಪಾರ ನೀರು ಹರಿದು ಬರುತ್ತಿದೆ. ಕಲ್ಲೋಳ ಬ್ಯಾರೇಜ್‌ನಿಂದ ಹೆಚ್ಚಿನ ನೀರನ್ನು ಕೃಷ್ಣಾ ನದಿಗೆ ಹರಿಸುತ್ತಿರುವುದರಿಂದ ಆಲಮಟ್ಟಿ ಜಲಾಶಯಕ್ಕೆ ಒಳಹರಿವಿನ ಪ್ರಮಾಣ ಅಧಿಕವಾಗಿದೆ.

ಜಲಾಶಯದಿಂದ ಹೆಚ್ಚಿನ ಪ್ರಮಾಣದಲ್ಲಿ ನೀರು ಬಿಡುಗಡೆ ಮಾಡುತ್ತಿರುವುದರಿಂದ ಆಲಮಟ್ಟಿಯಿಂದ ಕೆಳಭಾಗದ ಕೃಷ್ಣಾ ನದಿಪಾತ್ರದಲ್ಲಿರುವ ಗ್ರಾಮಗಳ ನಿವಾಸಿಗಳು, ರೈತರು, ಮೀನುಗಾರರು ಹಾಗೂ ಸಾರ್ವಜನಿಕರು ನದಿಯ ದಡಕ್ಕೆ ಅನಗತ್ಯವಾಗಿ ತೆರಳದಂತೆ, ಜಾನುವಾರುಗಳನ್ನು ನದಿಗೆ ಇಳಿಸದಂತೆ ಹಾಗೂ ಮಕ್ಕಳನ್ನು ನದಿಯ ಸಮೀಪ ಬಿಡದಂತೆ ಜಲಾಶಯ

**270 ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ**

**270 ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ:** ಜಲಾಶಯದ ಬಲಭಾಗದ ಆಲಮಟ್ಟಿ ವಿದ್ಯುತ್ ಉತ್ಪಾದನಾ ಘಟಕದಲ್ಲಿ ಎಲ್ಲಾ ಆರು ಘಟಕಗಳ ಮೂಲಕ 270 ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆಯಾಗುತ್ತಿದೆ ಎಂದು ಕೆಪಿಸಿಎಲ್ ಮೂಲಗಳು ತಿಳಿಸಿವೆ. ಹವಾಮಾನ ಇಲಾಖೆಯ ಮುನ್ಸೂಚನೆ ಹಾಗೂ ಮೇಲ್ಭಾಗದ ಜಲಾನಯನ ಪ್ರದೇಶದಲ್ಲಿ ಸುರಿಯುತ್ತಿರುವ ಮಳೆಯನ್ನು ಪರಿಗಣಿಸಿದರೆ, ಮುಂದಿನ ದಿನಗಳಲ್ಲಿ ಜಲಾಶಯಕ್ಕೆ ಒಳಹರಿವು ಇನ್ನಷ್ಟು ಹೆಚ್ಚುವ ಸಾಧ್ಯತೆ ಇದೆ.

ಆಡಳಿತ ಮನವಿ ಮಾಡಿದೆ.ಸಂಬಂಧಿಸಿದ ತಾಲ್ಲೂಕು ಹಾಗೂ ಗ್ರಾಮ ಮಟ್ಟದ ಅಧಿಕಾರಿಗಳು ಸಾರ್ವಜನಿಕರಿಗೆ ಮುನ್ನೆಚ್ಚರಿಕೆ ನೀಡುವಂತೆ ಸೂಚಿಸಲಾಗಿದೆ. ನದಿ ತೀರಕ್ಕೆ ಜನ ಜಾನುವಾರು ಸುಳಿಯದಂತೆ ಜನರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಡಂಗೂರ ಸಾರುವುದು ಹಾಗೂ ಧ್ವನಿವರ್ಧಕದ ಮೂಲಕ ಜನರನ್ನು ಎಚ್ಚರಿಸಲಾಗುತ್ತಿದೆ.

ಈ ಹಿನ್ನೆಲೆಯಲ್ಲಿ ಪರಿಸ್ಥಿತಿಗೆ ಅನುಗುಣವಾಗಿ ನೀರಿನ ಹೊರಹರಿವಿನ ಪ್ರಮಾಣವನ್ನು ಅಗತ್ಯವಿದ್ದರೆ ಮತ್ತಷ್ಟು ಪರಿಷ್ಕರಿಸುವ ಸಾಧ್ಯತೆಯೂ ಇದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ನೀಟ್ ಅಕ್ರಮ ಖಂಡಿಸಿ ವಿದ್ಯಾರ್ಥಿಗಳ ಪ್ರತಿಭಟನೆ

• **ಉದಯವಾಹಿನಿ, ಕಲಬುರಗಿ,:**

ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ (ನೀಟ್) ಪ್ರಶ್ನೆ ಪತ್ರಿಕೆ ಸೋರಿಕೆ, ಪರೀಕ್ಷಾ ಅಕ್ರಮಗಳು ಹಾಗೂ ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ನಡೆಯುತ್ತಿರುವ ಚೆಲ್ಲಾಟವನ್ನು ಖಂಡಿಸಿ ಕಲಬುರಗಿಯಲ್ಲಿ ನೂರಾರು ವಿದ್ಯಾರ್ಥಿಗಳು ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿದರು.

'ಗುಲ್ಬರ್ಗಾ ಸ್ಟೂಡೆಂಟ್ಸ್ ಮೂವ್‌ಮೆಂಟ್' ಹಾಗೂ 'ಸ್ಟೂಡೆಂಟ್ಸ್ ರೆವಲ್ಯೂಷನ್ ಯುವ ಶಕ್ತಿ' ಸಂಘಟನೆಗಳ ಸಂಯುಕ್ತ ಆಶ್ರಯದಲ್ಲಿ ನಡೆದ ಪ್ರತಿಭಟನೆಗೆ ಕಾಂಗ್ರೆಸ್ ಯುವ ಮುಖಂಡ ಫರಾಜ್ ಉಲ್ ಇಸ್ಲಾಂ ನೇತೃತ್ವ ವಹಿಸಿದರು.ಈ ಸಂದರ್ಭದಲ್ಲಿ ಮಾತನಾಡಿದ ಫರಾಜ್ ಉಲ್ ಇಸ್ಲಾಂ,ಪರೀಕ್ಷಾ ವ್ಯವಸ್ಥೆಯ ವೈಫಲ್ಯದಿಂದ ಲಕ್ಷಾಂತರ ವಿದ್ಯಾರ್ಥಿಗಳು ಹಾಗೂ ಅವರ ಪೋಷಕರು ಸಂಕಷ್ಟ ಅನುಭವಿಸುತ್ತಿದ್ದಾರೆ. ವಿದ್ಯಾರ್ಥಿಗಳ ಹೋರಾಟದಿಂದ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೆಚ್ಚಾಗಿದೆ. ಆದರೆ ರಾಜೀನಾಮೆ ಮಾತ್ರ ಪರಿಹಾರವಲ್ಲ. ಪರೀಕ್ಷಾ ಅಕ್ರಮಗಳಿಗೆ ಶಾಶ್ವತ ಅಂತ್ಯ ಕಂಡು, ವಿದ್ಯಾರ್ಥಿಗಳಿಗೆ ನ್ಯಾಯ ದೊರೆಯುವವರೆಗೆ ನಮ್ಮ ಹೋರಾಟ ಮುಂದುವರಿಯಲಿದೆ ಎಂದು ಹೇಳಿದರು.

ಪರೀಕ್ಷಾ ಅಕ್ರಮಗಳಲ್ಲಿ ಭಾಗಿಯಾಗಿರುವವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಬೇಕು ಹಾಗೂ ಭವಿಷ್ಯದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಕಠಿಣ ಕಾನೂನು


ಉದಯವಾಹಿನಿ ಚಿತ್ರ

ಜಾರಿಗೆ ತರಬೇಕೆಂದು ಅವರು ಒತ್ತಾಯಿಸಿದರುಸಂಜೆ 4 ಗಂಟೆಗೆ ಮಹಾನಗರ ಪಾಲಿಕೆ ಟೌನ್‌ಹಾಲ್‌ನಿಂದ ಆರಂಭವಾದ ಪ್ರತಿಭಟನಾ ಮೆರವಣಿಗೆ ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಜಗತ್ ವೃತ್ತದವರೆಗೆ ಸಾಗಿತು.

ಮೆರವಣಿಗೆಯುದ್ದಕ್ಕೂ ಪ್ರತಿಭಟನಾಕಾರರು ಕೇಂದ್ರ ಸರ್ಕಾರ ಹಾಗೂ ಪರೀಕ್ಷಾ ವ್ಯವಸ್ಥೆಯ ವೈಫಲ್ಯದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ನೂರಾರು ಕಾಲೇಜು ವಿದ್ಯಾರ್ಥಿಗಳು, ಯುವಜನರು ಹಾಗೂ ವಿವಿಧ ವಿದ್ಯಾರ್ಥಿ ಸಂಘಟನೆಗಳ ಪದಾಧಿಕಾರಿಗಳು ಭಾಗವಹಿಸಿ ಪರೀಕ್ಷಾ ವ್ಯವಸ್ಥೆಯಲ್ಲಿ ಪಾರದರ್ಶಕತೆ ಮತ್ತು ವಿದ್ಯಾರ್ಥಿಗಳಿಗೆ ನ್ಯಾಯ ಕಲ್ಪಿಸುವಂತೆ ಆಗ್ರಹಿಸಿದರು.

# ಮಾಲೆಕಲ್ (ಚಿಕ್ಕ) ತಿರುಪತಿಯಲ್ಲಿ ವೈಭವದ ಜಾತ್ರಾ ಮಹೋತ್ಸವ

• **ಉದಯವಾಹಿನಿ ಅರಸೀಕೆರೆ**


ತಾಲ್ಲೂಕಿನ ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾದ ಮಾಲೆಕಲ್ ತಿರುಪತಿಯ ಶ್ರೀ ಲಕ್ಷ್ಮೀವೆಂಕಟರಮಣಸ್ವಾಮಿ ದೇವಾಲಯದಲ್ಲಿ ಭಾನುವಾರ ಜಾತ್ರಾ ಮಹೋತ್ಸವ ಭಕ್ತಿಭಾವದಿಂದ ಹಾಗೂ ವಿಜೃಂಭಣೆಯಿಂದ ನಡೆಯಿತು.

ರಾಜ್ಯದ ವಿವಿಧ ಭಾಗಗಳಿಂದ ಆಗಮಿಸಿದ್ದ ಲಕ್ಷಾಂತರ ಭಕ್ತರು ಸ್ವಾಮಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.

ಜಾತ್ರಾ ಮಹೋತ್ಸವದಲ್ಲಿ ಅರಸೀಕೆರೆ ಕ್ಷೇತ್ರದ ಶಾಸಕ ಹಾಗೂ ಕರ್ನಾಟಕ ಗೃಹ ಮಂಡಳಿ ಅಧ್ಯಕ್ಷ ಕೆ.ಎಂ. ಶಿವಲಿಂಗೇಗೌಡ ಭಾಗವಹಿಸಿ ಶ್ರೀ ಲಕ್ಷ್ಮೀವೆಂಕಟರಮಣಸ್ವಾಮಿಗೆ ವಿಶೇಷ ಪೂಜೆ ಸಲ್ಲಿಸಿ, ರಾಜ್ಯದ ಸುಭಿಕ್ಷತೆ, ಉತ್ತಮ ಮಳೆ, ರೈತರ ಅಭಿವೃದ್ಧಿ ಹಾಗೂ ಜನರ ಸುಖಶಾಂತಿಗಾಗಿ ಪ್ರಾರ್ಥಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡ, ಅರಸೀಕೆರೆ ತಾಲ್ಲೂಕು ದಂಡಾಧಿಕಾರಿ ಸಂತೋಷ್ ಕುಮಾರ್, ಅರಸೀಕೆರೆ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಅರುಣಕುಮಾರ್ ಸೇರಿದಂತೆ ಹಲವು ಗಣ್ಯರು ದೇವರ ದರ್ಶನ ಪಡೆದು ಆಶೀರ್ವಾದ ಪಡೆದರು.

ಜಾತ್ರೆ ಅಂಗವಾಗಿ ದೇವಾಲಯದಲ್ಲಿ ವಿವಿಧ ಧಾರ್ಮಿಕ ಪೂಜಾಕೈಂಕರ್ಯಗಳು, ವಿಶೇಷ ಅಲಂಕಾರ, ಮಹಾಮಂಗಳಾರತಿ


ಉದಯವಾಹಿನಿ ಚಿತ್ರ

ಹಾಗೂ ಅನ್ನಸಂತರ್ಪಣೆ ಕಾರ್ಯಕ್ರಮಗಳು ನಡೆದವು. ಭಕ್ತರ ಅನುಕೂಲಕ್ಕಾಗಿ ದೇವಾಲಯ ಆಡಳಿತ ಮಂಡಳಿ ಅಗತ್ಯ ಮೂಲಸೌಕರ್ಯ ಹಾಗೂ ವ್ಯವಸ್ಥೆ ಕಲ್ಪಿಸಿತ್ತು.

ಪೊಲೀಸ್ ಇಲಾಖೆ ಮತ್ತು ವಿವಿಧ ಇಲಾಖೆಗಳ ಸಿಬ್ಬಂದಿ ಸುಗಮ ದರ್ಶನ ಹಾಗೂ ಭದ್ರತಾ ವ್ಯವಸ್ಥೆ ನಿರ್ವಹಿಸಿದರು. ಜಾತ್ರೆಯಲ್ಲಿ ಭಾಗವಹಿಸಿದ್ದ ಲಕ್ಷಾಂತರ ಭಕ್ತರು ಭಕ್ತಿಭಾವದಿಂದ ಸ್ವಾಮಿಯ ದರ್ಶನ ಪಡೆದು ತಮ್ಮ ಹರಕೆಗಳನ್ನು ಸಲ್ಲಿಸಿದರು. ದೇವಾಲಯದ ಆವರಣ ದಿನವಿಡೀ ಭಕ್ತರಿಂದ ಕಿಕ್ಕಿರಿದು, ಧಾರ್ಮಿಕ ಸಂಭ್ರಮ ಮನೆಮಾಡಿತ್ತು.

# ನಿಲ್ಲಿಸಿದ್ದ ಕಾರು ಸ್ಫೋಟಗೊಂಡು ಛಿದ್ರ

• **ಉದಯವಾಹಿನಿ, ಬಾಗಲಕೋಟೆ:**

ನಿಂತ ಕಾರಿನಲ್ಲಿ ಸ್ಫೋಟವಾಗಿ, ಭಾರಿ ಅನಾಹುತ ತಪ್ಪಿದ ಘಟನೆ ಜಿಲ್ಲೆಯ ಜಮಖಂಡಿ ತಾಲ್ಲೂಕಿನ ಹಿಪ್ಪರಗಿ ಗ್ರಾಮದಲ್ಲಿ ತಡರಾತ್ರಿ ಸಂಭವಿಸಿದೆ.

ಏಕಾಏಕಿ XUV300 ಕಾರು ಸ್ಫೋಟಗೊಂಡು ಛಿದ್ರ ಛಿದ್ರಗೊಂಡಿದೆ. ಸ್ಫೋಟದ ತೀವ್ರತೆಗೆ ಸುಮಾರು 200 ಮೀಟರ್ ದೂರದವರೆಗೆ ಕಾರಿನ ಬಿಡಿಭಾಗಗಳು ಸಿಡಿದು ಬಿದ್ದಿವೆ. ವೈನ್ ಶಾಪ್ ಮಾಲೀಕ ಹಣಮಂತ ಅಥಣಿ ಎಂಬವರು ಭಾರೀ ಅನಾಹುತದಿಂದ ಸ್ವಲ್ಪದರಲ್ಲೇ ಪಾರಾಗಿದ್ದಾರೆ. ವೈನ್ ಶಾಪ್ ಮಾಲೀಕ ಬಾರ್ ಬಂದ್ ಮಾಡಿಕೊಂಡು ಇನ್ನೇನು ಮನೆಗೆ ಹೋಗಬೇಕು ಅನ್ನುವಷ್ಟರಲ್ಲಿಯೇ ಈ ಘಟನೆ ನಡೆದಿದೆ. ಸ್ಥಳಕ್ಕೆ ಬಾಗಲಕೋಟೆ ಹಾಗೂ ಬೆಳಗಾವಿ ಜಿಲ್ಲೆಯ ಬಾಂಬ್ ನಿಷ್ಕ್ರಿಯ ದಳದವರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.ವೈನ್ ಶಾಪ್ ಮಾಲೀಕ ಹಣಮಂತ ಅಥಣಿ ಅವರು ಈ ಕಾರನ್ನು ಮೂರು ವರ್ಷಗಳ ಹಿಂದೆ ಪತ್ನಿ ಜಯಶ್ರೀ ಅವರ ಹೆಸರಿನಲ್ಲಿ ಖರೀದಿ ಮಾಡಿದ್ದರು. ಸ್ಫೋಟದ ಕಾರಣ ಪತ್ತೆಗೆ ಪೊಲೀಸ್ ಅಧಿಕಾರಿಗಳು ತನಿಖೆ ನಡೆಸುತ್ತಿದ್ದಾರೆ.

# ಮಳೆರಾಯನಿಗಾಗಿ ಪ್ರಾರ್ಥಿಸಿ ಮಹಿಳೆಯರಿಂದ ಪೊರುಗುಡ್ಡ ಪೂಜೆ

• **ಉದಯವಾಹಿನಿ, ಸಿರಿಗೇರಿ..**

ಈ ವರ್ಷ ಮುಂಗಾರು ಮಳೆ ಮುನಿಸಿನಿಂದಾಗಿ ಗ್ರಾಮೀಣ ಭಾಗದ ರೈತಾಪಿ ವರ್ಗದಲ್ಲಿ ಆತಂಕ ಹೆಚ್ಚು ಮಾಡಿದೆ. ಪರಿಣಾಮ ಗ್ರಾಮೀಣ ಭಾಗದಲ್ಲಿ ಈಗಲೂ ಮಳೆರಾಯನಿಗಾಗಿ ಪ್ರಾರ್ಥಿಸಿ ವಿಶೇಷ ಪೂಜೆ, ಅಭಿಷೇಕ, ಧಾರ್ಮಿಕ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಆದರೂ ಬಳ್ಳಾರಿ ಜಿಲ್ಲೆಯ ಗ್ರಾಮೀಣ ಭಾಗಗಳಲ್ಲಿ ಮಳೆರಾಯನ ದರ್ಶನವಾಗುತ್ತಿಲ್ಲ. ಅಳಿದು ಉಳಿದ ಬೆಳೆಗಳು ನೆಲಕಚ್ಚುವ ಪರಿಸ್ಥಿತಿ ನಿರ್ಮಾಣವಾಗಿದೆ. ರೈತಾಪಿ ವರ್ಗದವರು ಕೈ ಚೆಲ್ಲಿ ಕುಳಿತುಕೊಳ್ಳುತ್ತಿದ್ದಾರೆ.

ಈ ಪರಿಸ್ಥಿತಿ ಮಧ್ಯೆಯು ಆಶಾಭಾವನೆ ಹೊತ್ತ ರೈತಾಪಿ ವರ್ಗದ ಮಹಿಳೆಯರು ಮಳೆರಾಯನಿಗೆ ಪ್ರಾರ್ಥಿಸಿ, ವಿಶೇಷ ಪೂಜೆ ನಡೆಸುತ್ತಿದ್ದಾರೆ. ಸಿರುಗುಪ್ಪ ತಾಲ್ಲೂಕು ಸಿರಿಗೆರೆ ಗ್ರಾಮದಲ್ಲಿ ಇಂದು ಹಳ್ಳಿಮರದ ಓಣಿ, ಗುಡಟ್ಟಿಯವರ ಓಣಿ, ಬಿಚ್ಚುಗತ್ತಿಯವರ ಓಣಿ, ತಾತನಕಟ್ಟೆ ಪ್ರದೇಶದ ಓಣಿ ಮಹಿಳೆಯರಿಂದ. ತುಂಬಿದ ಬಿಂದಿಗೆಯಲ್ಲಿ ಪತ್ರಿ ಇಟ್ಟು, ಮಳೆರಾಯನನ್ನು ಪ್ರಾರ್ಥಿಸುವ ಮತ್ತು ಪೋರಗುಡ್ಡದಲ್ಲಿ ಹೋಗಿ ವಿಶೇಷ ಪ್ರಾರ್ಥನೆ ಸಲ್ಲಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಧಾರ್ಮಿಕ ವಿಶೇಷ ಕಾರ್ಯಕ್ರಮದಲ್ಲಿ ಕಲ್ಗುಡಿ ಶಾಂತಮ್ಮ, ಬಡಕನಾಯಕರ ಮುದುಕಮ್ಮ, ಬಿಚ್ಚುಗತ್ತಿ ಶಾಂತಮ್ಮ, ಗುಡಟ್ಟಿ ಹನುಮಂತಮ್ಮ, ಹಳ್ಳಿಮರದ ಈರಮ್ಮ. ಚಾನಾಳ್ ಯಲ್ಲಮ್ಮ ಹಾಗೂ ಇತರೆ ಎಲ್ಲಾ ಮಹಿಳೆಯರು, ಚಿಕ್ಕ ಮಕ್ಕಳು ಭಾಗವಹಿಸಿ ಪೋರಾಗುಡ್ಡಕ್ಕೆ ಹೋಗಿ ಮಳೆಗಾಗಿ ಪ್ರಾರ್ಥನೆ ಮಾಡಿದರು.

# ಸಮಯ ನೋಡಿ ಮನೆಗೆ ಕನ್ನ

• **ಉದಯವಾಹಿನಿ, ಹಾಸನ:**

ಮನೆಯಲ್ಲಿ ಯಾರೂ ಇಲ್ಲದ ಸಮಯವನ್ನು ನೋಡಿಕೊಂಡು ಕಳ್ಳರು, ಮನೆಗೆ ನುಗ್ಗಿ ಸುಮಾರು 69.56 ಲಕ್ಷ ಮೌಲ್ಯದ 441.5 ಗ್ರಾಂ ಚಿನ್ನಾಭರಣ ಹಾಗೂ 13.40 ಲಕ್ಷ ನಗದು ಕದ್ದು ಪರಾರಿಯಾಗಿರುವ ಘಟನೆ ಹಾಸನ ತಾಲ್ಲೂಕಿನ ದೊಡ್ಡ ಹೊನ್ನೇನಹಳ್ಳಿ ಗ್ರಾಮದಲ್ಲಿ ನಡೆದಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭನ್ವಿತಾ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದೊಡ್ಡ ಹೊನ್ನೇನಹಳ್ಳಿ ಗ್ರಾಮದ ಕೇಶವೇಗೌಡ ಎಂಬುವರ ಮನೆಯಲ್ಲಿ ಈ ಕಳ್ಳತನ ನಡೆದಿದೆ. ಘಟನೆ ನಡೆದ ವೇಳೆ ಕೇಶವೇಗೌಡ, ಅವರ ಪತ್ನಿ ಜಯಲಕ್ಷ್ಮೀ ಹಾಗೂ ಪುತ್ರ ವೇಣುಗೋಪಾಲ್ ಜಮೀನಿನ ಕೆಲಸಕ್ಕೆ ತೆರಳಿದ್ದರು. ಸೊಸೆ ಅಮೃತಾ ಮಗನನ್ನು ಶಾಲೆಗೆ ಬಿಟ್ಟು ಬರಲು ತೆರಳಿದ್ದರು. ಈ ವೇಳೆ ಅವರು ಮನೆಗೆ ಒಳಗಿನಿಂದ ಬೋಲ್ಟ್ ಹಾಕಿ ಹೋಗಿದ್ದರು. ಈ ಸಂದರ್ಭದಲ್ಲಿ ಮನೆಗೆ ನುಗ್ಗಿದ್ದ ಕಳ್ಳರು ಬೀರುವಿನಲ್ಲಿದ್ದ 441.5 ಗ್ರಾಂ ಚಿನ್ನಾಭರಣ ಹಾಗೂ 13.40 ಲಕ್ಷ ನಗದು ಕಳವು ಮಾಡಿಕೊಂಡು ಪರಾರಿಯಾಗಿದ್ದಾರೆ. ಬಳಿಕ ಮನೆಗೆ ವಾಪಸಾದ ಅಮೃತಾ ಕಳ್ಳತನವಾಗಿರುವುದನ್ನು ಗಮನಿಸಿ ಕುಟುಂಬದವರಿಗೆ ಮಾಹಿತಿ ನೀಡಿದ್ದರು. ಕುಟುಂಬದ ಸದಸ್ಯರಷ್ಟೇ ಅಲ್ಲದೆ ಇಬ್ಬರು ಹೆಣ್ಣುಮಕ್ಕಳ ಚಿನ್ನಾಭರಣಗಳನ್ನೂ ಕೇಶವೇಗೌಡ ಮನೆಯಲ್ಲೇ ಸುರಕ್ಷಿತವಾಗಿ ಇಟ್ಟುಕೊಂಡಿದ್ದರು ಎನ್ನಲಾಗಿದೆ.

# ಕಾರ್ಗಿಲ್ ವಿಜಯ ದಿವಸವು ಕೇವಲ ವಿಜಯದ ಸಂಕೇತವಲ್ಲ

• **ಉದಯವಾಹಿನಿ, ಬಸವನಬಾಗೇವಾಡಿ, :**

ರಾಷ್ಟ್ರೀಯ ಬಸವ ಸೈನ್ಯದ ವತಿಯಿಂದ ಸ್ಥಳೀಯ ಶ್ರೀ ಬಸವೇಶ್ವರ ಪದವಿ ಪೂರ್ವ ಸರ್ಕಾರಿ ಮಹಾವಿದ್ಯಾಲಯದ ಆವರಣದಲ್ಲಿ ಆಯೋಜಿಸಿದ್ದ ಕಾರ್ಗಿಲ್ ವಿಜಯ ದಿವಸ ಕಾರ್ಯಕ್ರಮದಲ್ಲಿ ಕಾರ್ಗಿಲ್ ವೀರಯೋಧ ಅಶೋಕ್ ಜಾದವ್ ಅವರ ಪುತ್ಥಳಿಗೆ ಮಾಲಾರ್ಪಣೆ



ಮಾಡಿ ಗೌರವ ನಮನ ಸಲ್ಲಿಸಲಾಯಿತು. ಸಂಘಟನೆಯ ಸಂಸ್ಥಾಪಕ ಅಧ್ಯಕ್ಷ ಶಂಕರಗೌಡ ಬಿರಾದಾರ ಮಾತನಾಡಿ, ಕಾರ್ಗಿಲ್ ವಿಜಯ ದಿವಸವು ಕೇವಲ ವಿಜಯದ ಸಂಕೇತವಲ್ಲ, ರಾಷ್ಟ್ರಕ್ಕಾಗಿ ಸರ್ವಸ್ವವನ್ನೂ ಅರ್ಪಿಸಿದ ಅಮರ ಯೋಧರ ಸ್ಮರಣೆ ಮತ್ತು ಗೌರವದ ದಿನವಾಗಿದೆ. ಯುವಜನತೆ ಅವರ ದೇಶಭಕ್ತಿ, ಶಿಸ್ತು ಹಾಗೂ ಸೇವಾ ಮನೋಭಾವವನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಸುರೇಶಗೌಡ ಪಾಟೀಲ, ನಿಂಗಪ್ಪಣ್ಣ ಅವಟಿ, ಪ್ರಶಾಂತ ಮುಂಜಾನೆ, ಜಟ್ಟಿಂಗರಾಯ ಮಾಲಗಾರ್, ಆನಂದ ವನರೊಟ್ಟಿ, ಭದ್ರಣ್ಣ ಮಣ್ಣೂರ, ಮಾಂತೇಶ ಹೆಬ್ಬಾಳ, ಉಮೇಶ ಅರಕೇರಿ, ಮಾಂತೇಶ ಪಾರಶೆಟ್ಟಿ, ಮಹೇಶ ಹಿರೇಕುರಬರ, ಪ್ರವೀಣ ಪೂಜಾರಿ, ಸಲೀಂ ಬಿಜಾಪುರ, ಅಕ್ಷಯ ಲೋಣಕರ್, ವಿನಾಯಕ ಸಾವಾಜಿ ಸೇರಿದಂತೆ ಅನೇಕರು ಹಾಜರಿದ್ದರು.

# ಪುಸ್ತಕ ಲೋಕಾರ್ಪಣೆ ಸುಲಭದ ಮಾತಲ್ಲ ನಿಷ್ಠಿ ರುದ್ರಪ್ಪ.

• **ಉದಯವಾಹಿನಿ ಕೂಡ್ಲಿಗಿ.**

ಆಧುನಿಕ ಭರಾಟೆಯಲ್ಲಿ ಸಾಮಾಜಿಕ ಜಾಲತಾಣದ ಮೊಬೈಲ್ ಹಾವಳಿಯ ವಾಟ್ಸಾಪ್, ಫೇಸಬುಕ್, ಇನ್ಸ್ಟಾಗ್ರಾಮ್ ನಡುವೆ ಪುಸ್ತಕ ಓದುವ ಗೀಳು ಕಡಿಮೆಯಾಗಿದೆ ಇಂತಹ ಪ್ರಸ್ತುತ ದಿನಮಾನದಲ್ಲಿ ಕೃತಿ ರಚನೆ ಮಾಡಿ ಅದನ್ನು ಲೋಕಾರ್ಪಣೆ ಮಾಡುವುದು ಸುಲಭದ ಮಾತಲ್ಲ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಬಳ್ಳಾರಿ ವಿಜಯನಗರ ಜಿಲ್ಲಾಧ್ಯಕ್ಷ ನಿಷ್ಠಿರುದ್ರಪ್ಪ ತಿಳಿಸಿದರು.


ಉದಯವಾಹಿನಿ ಚಿತ್ರ

ಅವರು ಇಂದು ಮಧ್ಯಾಹ್ನ ತಾಲ್ಲೂಕಿನ ಕಾನಾಹೊಸಹಳ್ಳಿಯ ಆಂಗ್ಲಮಾಧ್ಯಮ ವೈಭವ ಶಾಲೆಯ ಆವರಣದಲ್ಲಿ ಕೃತಿ ಲೋಕಾರ್ಪಣೆಗೊಳಿಸಿ ಮಾತನಾಡುತ್ತ ಅನೇಕ ಸಾಹಿತ್ಯ ಆಸಕ್ತರು ಹೆಚ್ಚಾಗಿರುವ ಕಾನಾಹೊಸಹಳ್ಳಿ ಜನರ ಬಗ್ಗೆ ಕವನಸಂಕಲನದಲ್ಲಿ ಕೃತಿ ರಚನೆಕಾರ ಮಧುಸೂಧನ ರಚಿಸಿದ್ದಾರೆ. ಪ್ರಸ್ತುತ ದಿನಮಾನದಲ್ಲಿ ಜನಜೀವನ ಸುಖಕರವಿಲ್ಲ, ಜಂಜಾಟದ ಬದುಕಿನ ಜೀವನ, ಮೊಬೈಲ್ ಅಬ್ಬರದಲ್ಲಿ ಪುಸ್ತಕ ಬಿಡುಗಡೆ ಸುಲಭದ ಮಾತಲ್ಲ ಸಾಹಿತ್ಯ ಮೂಲಕ ಸುಮದುರ ಜೀವನಶೈಲಿಗಳ ಸಂಗ್ರಹವೇ ಕೃತಿ ಆಗಿದೆ.ಚುಕ್ಕಿ ಸಂಭ್ರಮ ಕವನ ಸಂಕಲನವು ಪ್ರೀತಿ– ಪ್ರೇಮ ಕುರಿತಾದ ಕವನ, ಹನಿಗವನಗಳ ಸಂಗ್ರಹವಿದೆ. ಮಾನವೀಯ ಮೌಲ್ಯಗಳನ್ನು ಬೆಳಸಿಕೊಳ್ಳುವ ಬಗ್ಗೆ ತಿಳಿಸಿದರು. ಕವಿಯ ಸಾಲುಗಳು ಚುಟುಕಾಗಿ ಓದುಗರ ಮನಮುಟ್ಟುವಂತಿರಬೇಕು ಎಂದು ಕವಿಮಾತು ಹೇಳಿದರು.28 ನೇ ಸಾಹಿತ್ಯ ಸಮ್ಮೇಳನ ಬಳ್ಳಾರಿಯಲ್ಲಿ ನಡೆಯಬೇಕಿದ್ದು ಆದರೆ ಕಾರ್ಯಕ್ರಮಕ್ಕೆ ಕೆಲವಾರು ಕಾರಣಗಳಿಂದ ಕಾರ್ಯಕ್ರಮದ ತಯಾರಿಗೆ ಸ್ವಲ್ಪ ಹಿನ್ನೆಡೆಯಾಗಿದೆ ಆದರೆ ಕನ್ನಡ ಸಾಹಿತ್ಯ ಸಮ್ಮೇಳನ ಬಳ್ಳಾರಿಯಲ್ಲಿ ನಡೆಯುವುದು ಖಂಡಿತ ಎಂದು ಈ ಸಂದರ್ಭದಲ್ಲಿ ನಿಷ್ಠಿರುದ್ರಪ್ಪ ತಿಳಿಸಿದರು.

> ಕವಿ ಮಧುಸೂದನ್ ರಚನೆಯ ಲೆಟರ್ ಎನ್ನುವ ಕವನ ಬಹಳಷ್ಟು ಅದ್ಭುತ ಕಲ್ಪನೆಯಿಂದ ಕೂಡಿದೆ ಬಡತನವೆಂದರೆ ಎನ್ನುವ ಇನ್ನೊಂದು ಕವನ ಕಷ್ಟಕೋಟೆಗಳ ಮೆಟ್ಟಿ ನಿಂತು ಜೀವನ ಗೆಲ್ಲುವ ಪರಿ ಬಗ್ಗೆ ತಿಳಿಸುತ್ತದೆ. -ರಾಜ್ಯಾಧ್ಯಕ್ಷ ತಿಪ್ಪೇಸ್ವಾಮಿ

# ಶಾಲೆ ಬಿಟ್ಟ ವಿದ್ಯಾರ್ಥಿಗಳ ಮನೆಗೆ ಶಿಕ್ಷಕ

### ಶಾಲೆಗೆ ಗೈರಾದ ಮಕ್ಕಳ ಮನೆಗೆ ಭೇಟಿ ನೀಡಿ ಅವರಿಗೆ ನೋಟ್‌ಬುಕ್, ಪೆನ್ನು, ಜಾಮಿಟ್ರಿ ಬಾಕ್ಸ್ ಕೊಡುತ್ತಾರೆ


• **ಉದಯವಾಹಿನಿ, ದಾವಣಗೆರೆ:**

ಜಯಪ್ಪ ಪಿಎಂಶ್ರೀ ಶಾಲೆಯ ಹಿರಿಯ ಶಿಕ್ಷಕರು. ದಿನ ಬೆಳಗಾದರೆ ತಮ್ಮ ಬೈಕ್‌ಹತ್ತಿ ವಿದ್ಯಾರ್ಥಿಗಳ ಮನೆಯ ಸುತ್ತು ಹಾಕುವುದೇ

**1 : ಸಮವಸ್ತ್ರ ಹೊಲಿಸಿಕೊಡುವ ಶಿಕ್ಷಕ**
**2 : ಬೀದಿಗಳಲ್ಲಿ ಬಿದ್ದಿರುವ ಪ್ಲಾಸ್ಟಿಕ್**
**3 : ಬೆಳಗ್ಗೆ ಗೈರಾದ ಮಕ್ಕಳ ಮನೆಗೆ**

ಇವರ ಕಾಯಕ. ಶಾಲೆಗೆ ಬಾರಾದ ಮಕ್ಕಳ ಪಾಲಿನ ಗುರು ಕೂಡ ಹೌದು. ಯಾವ ವಿದ್ಯಾರ್ಥಿಗಳು ಶಾಲೆಗೆ ಗೈರಾಗಿ ಮನೆಯಲ್ಲೇ ಉಳಿಯುತ್ತಾರೋ ಅಂತಹ ಮಕ್ಕಳ ಮನವೊಲಿಸಿ ಶಾಲೆಗೆ ಕರೆತರುವ ಕೆಲಸವನ್ನು ಜಯಪ್ಪ ಅವರು ಸದ್ದಿಲ್ಲದೆ ಮಾಡುತ್ತಿದ್ದಾರೆ. ಜಯಪ್ಪ ಅವರು ಸ್ಥಳದಲ್ಲೇ ಕಲಿಯಲು ಬೇಕಾಗುವ ವಸ್ತುಗಳನ್ನು ವಿದ್ಯಾರ್ಥಿಗಳಿಗೆ ಕೊಟ್ಟು ಶಾಲೆಗೆ ಮರಳಿ ಕರೆ ತರುವಲ್ಲಿ ಯಶಸ್ವಿಯಾಗಿದ್ದಾರೆ. ಈ ಸಮಾಜಮುಖಿ ಕೆಲಸಕ್ಕೆ ದಾವಣಗೆರೆ ದಕ್ಷಿಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ಡಾ. ಪುಷ್ಪಲತಾ ಅವರು, ಶಾಲೆಯ ಮುಖ್ಯ ಶಿಕ್ಷಕರಾದ ಗುರುಬಸಯ್ಯ ಅವರು ಬೆನ್ನೆಲುಬಾಗಿ ನಿಂತಿದ್ದಾರೆ.

ದಾವಣಗೆರೆ ನಗರದ ನಿಟ್ಟುವಳ್ಳಿಯಲ್ಲಿರುವ ಪಿಎಂಶ್ರೀ ಸರ್ಕಾರಿ ಪ್ರೌಢ ಹಾಗೂ ಪ್ರಾಥಮಿಕ ಶಾಲೆಯ ಹಿರಿಯ ಗಣಿತ ಶಿಕ್ಷಕ ಜಯಪ್ಪ ಅವರು ಈ ಕೆಲಸವನ್ನು ಬರೋಬ್ಬರಿ 16 ವರ್ಷದಿಂದ ಮಾಡಿಕೊಂಡು ಬರುತ್ತಿದ್ದಾರೆ. ದಕ್ಷಿಣ ವಲಯದ ಕ್ಷೇತ್ರ






ಉದಯವಾಹಿನಿ ಚಿತ್ರ

> ಸರ್ಕಾರಿ ಶಾಲೆಯಲ್ಲಿ ಸಿಗುವ ಸೌಲಭ್ಯದ ಬಗ್ಗೆ ಅವರಿಗೆ ಮನದಟ್ಟು ಮಾಡಿದರೆ ಮಕ್ಕಳನ್ನು ಶಾಲೆಗೆ ಕಳುಹಿಸುತ್ತಾರೆ. ಇದು ತುಂಬ ಖುಷಿಯ ವಿಚಾರ. ಶಾಲೆಗೆ ಬರುವ ಮಕ್ಕಳು ಕೂಡ ಶಾಲೆ ತಪ್ಪಿಸಲ್ಲ ಎಂದು ಹೇಳಿದ್ದಾರೆ. ಎಲ್ಲರ ಸಹಕಾರದಿಂದ ಮಕ್ಕಳು ಶಾಲೆಯಿಂದ ವಂಚಿತರಾಗುವುದಿಲ್ಲ ಎಂಬುದು ಹೆಮ್ಮೆಯ ವಿಚಾರ ಎಂದು ಹೇಳಿದರು. -ಗುರುಬಸವಯ್ಯ

> 6ನೇ ತರಗತಿಯ ಸಿದ್ಧಾರ್ಥ್, 9ನೇ ತರಗತಿಯ ಯಶವಂತ್ ಇಬ್ಬರನ್ನು ಇಂದು ಕರೆ ತಂದಿದ್ದೇವೆ. ಒಂದು ವಾರ ಶಾಲೆಗೆ ಬಾರದ ಮಕ್ಕಳ ಮನೆಗೆ ಭೇಟಿ ಕೊಟ್ಟು ಪೋಷಕರಿಗೆ ಮನವರಿಕೆ ಮಾಡಿ ಮಕ್ಕಳನ್ನು ಶಾಲೆಗೆ ಕರೆ ತಂದಿದ್ದೇವೆ. ಪೋಷಕರು ಕೂಡ ಶಾಲೆಗೆ ಕಳಿಸುವುದಾಗಿ ಹೇಳ್ತಿದ್ದಾರೆ. ಶಾಲೆ ಬಿಟ್ಟ ಮಕ್ಕಳು ಮರಳಿ ಶಾಲೆಗೆ ಬರಲು ಉತ್ಸಾಹಕರಾಗಿದ್ದಾರೆ ಎಂದು ತಿಳಿಸಿದರು. -ಗುರುಬಸವಯ್ಯ

ಶಿಕ್ಷಣಾಧಿಕಾರಿ ಡಾ. ಪುಷ್ಪಲತಾ ಅವರು ಈ ಕಾರ್ಯಕ್ಕೆ ಸಾಥ್ ನೀಡ್ತಿದ್ದಾರೆ. ಈ ಶಾಲೆಯ ಮುಖ್ಯೋಪಾಧ್ಯಾಯರಾದ ಗುರುಬಸಯ್ಯ ಅವರು ಹಾಜರಾತಿ ಹಿಡಿದು ಯಾರು ಶಾಲೆಗೆ ಯಾರು ಬರುತ್ತಿಲ್ಲವೋ, ಯಾವ ಮಗು ಶಾಲೆಯಿಂದ ದೂರ ಉಳಿದಿದ್ದಾರೋ ಅತಂಹವರ ಪಟ್ಟಿಯನ್ನು ಶಿಕ್ಷಕ ಜಯಪ್ಪ ಅವರಿಗೆ ನೀಡುತ್ತಾರೆ. ವಿದ್ಯಾರ್ಥಿಗಳ ಪಟ್ಟಿ ಪಡೆಯುವ ಶಿಕ್ಷಕ ಜಯಪ್ಪನವರು ತಮ್ಮ ಬೈಕ್‌ನಲ್ಲಿ ಮಕ್ಕಳ ಮನೆ ಮನೆಗೆ ಭೇಟಿ ನೀಡಿ ಅವರ ಮನವೊಲಿಸಿ ಶಾಲೆಗೆ ಕರೆತರುತ್ತಾರೆ. ಮಕ್ಕಳನ್ನು ಶಾಲೆಗೆ ಕಳಿಸುವಂತೆ ಪೋಷಕರಲ್ಲಿ ಮನವಿ ಮಾಡ್ತಾ ಬಂದಿದ್ದಾರೆ. ಇಲ್ಲಿ ತನಕ ಒಟ್ಟು 30ಕ್ಕೂ ಹೆಚ್ಚು ಮಕ್ಕಳನ್ನು ಶಾಲೆಗೆ ಕರೆತಂದಿದ್ದಾರೆ. ಗಣಿತ ಶಿಕ್ಷಕರಾಗಿರುವ ಜಯಪ್ಪ ಅವರು ತಮ್ಮ ತರಗತಿಯಲ್ಲಿ ವಿಶೇಷವಾಗಿ ಕಾಳಜಿವಹಿಸಿ ಮಕ್ಕಳಿಗೆ ಪಾಠ ಮಾಡುತ್ತಾರೆ.

> ಶಾಲೆಗೆ ಗೈರಾದ ಮಕ್ಕಳ ಮನೆಗೆ ಭೇಟಿ ನೀಡಿ ಅವರಿಗೆ ನೋಟ್‌ಬುಕ್, ಪೆನ್ನು, ಜಾಮಿಟ್ರಿ ಬಾಕ್ಸ್ ಕೊಡುತ್ತಾರೆ. ಇದಲ್ಲದೆ ಶಾಲೆಯ ಸಮವಸ್ತ್ರ ಹೊಲಿಸಲು ಆರ್ಥಿಕ ಸ್ಥಿತಿವಂತರಲ್ಲದ ಮಕ್ಕಳಿಗೆ ತಾವೇ ಸಮವಸ್ತ್ರ ಹೊಲಿಸಿ ಕೊಡುತ್ತಾರೆ. ಇನ್ನು ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾಗಿ ಕಾಲೇಜು ಮೆಟ್ಟಿಲು ಹತ್ತುವ ಎರಡ್ಮೂರು ಮಕ್ಕಳ ಕಾಲೇಜು ಶುಲ್ಕವನ್ನು ಯಾರಿಗೂ ಗೊತ್ತಾಗದಂತೆ ಸಂದಾಯ ಮಾಡ್ತಿದ್ದಾರೆ.

ಇವರು ಶಾಲೆಯ ವಿದ್ಯಾರ್ಥಿಗಳ ನಿಚ್ಚಿನ ಶಿಕ್ಷಕರಾಗಿದ್ದಾರೆ. ಇನ್ನು ವಿದ್ಯಾರ್ಥಿಗಳಲ್ಲಿ ಪರಿಸರ ಉಳಿಸುವ ಬಗ್ಗೆ ವಿಶೇಷ ಜಾಗೃತಿ ಮೂಡಿಸುತ್ತಾರೆ. ಪ್ಲಾಸ್ಟಿಕ್ ಮುಕ್ತ ಸಮಾಜ ಮಾಡಲು ಇವರು ಟೊಂಕ ಕಟ್ಟಿ ನಿಂತಿದ್ದಾರೆ. ಮನೆ, ಬೀದಿಗಳಲ್ಲಿ ಬಿದ್ದಿರುವ ಪ್ಲಾಸ್ಟಿಕ್ ತಂದು ಶಾಲೆಯಲ್ಲಿ ಶೇಖರಿಸುವಂತೆ ವಿದ್ಯಾರ್ಥಿಗಳಿಗೆ ಮನವಿ ಮಾಡ್ತಿದ್ದಾರೆ. ಶೇಖರಣೆಯಾದ ಕ್ವಿಂಟಲ್ ಗಟ್ಟಲೆ ಪ್ಲಾಸ್ಟಿಕ್ ಅನ್ನು ಪಾಲಿಕೆಗೆ ಹಸ್ತಾಂತರ ಮಾಡುತ್ತಾರೆ.

ಪಿಎಂಶ್ರೀ ಶಾಲೆಯ ಹಿರಿಯ ಶಿಕ್ಷಕ ಜಯಪ್ಪ ಮಾತನಾಡಿ, ಮಕ್ಕಳು ಶಿಕ್ಷಣ ಕಲಿಯಬೇಕೆಂಬುದು ಇಲಾಖೆ ಮತ್ತು ಸರ್ಕಾರದ ನಿರ್ದೇಶನ. ಪೋಷಕರು ಕೆಲಸಕ್ಕೆ ಹೋಗುವುದರಿಂದ ಮಕ್ಕಳು ಶಾಲೆಗೆ ಬಾರದೆ ಇದ್ದಾಗ ನಾನು ಅಲ್ಲಿ ಹಾಜರ್ ಆಗುತ್ತೇನೆ. ನಾನು ಬೆಳಗ್ಗೆ 7:30ಗೆ ಮನೆ ಮನೆಗೆ ಭೇಟಿ ಕೊಡುತ್ತೇನೆ. ಇಲ್ಲವಾದಲ್ಲಿ ರಾತ್ರಿ 9 ಗಂಟೆಗೆ ಭೇಟಿ ಕೊಡುತ್ತೇನೆ. ಅವರು ವ್ಯಾಸಂಗ ಮಾಡ್ತಿದ್ದಾರೋ ಇಲ್ವೋ ಎಂದು ಪರಿಶೀಲನೆ ಮಾಡುತ್ತೇನೆ ಎಂದರು.